ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೮೧

# ಪಟ್ಟಿ – ೨೮

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ

**(ಮುಂದುವರೆದ ಉಪವೇಶನ)**

**ಶುಕ್ರವಾರ, ದಿನಾಂಕ: ೧೭ನೇ ನವೆಂಬರ್, ೨೦೧೭**

---

## ಸಮೂಹ – V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೫. ಸಾರಿಗೆ ಸಚಿವರು.

೬. ಗಣಿ ಮತ್ತು ಭೂವಿಜ್ಞಾನ ಸಚಿವರು.

೭. ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು.

---

## ಕಾಲ್ಪನಿಕ ವೇತನದಿಂದ ಆಗುವ ಆರ್ಥಿಕ ಹೊರೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೫೦೨ (೪೧೩೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಲ್ಪನಿಕ ವೇತನಕ್ಕೆ ಸಂಬಂಧಿಸಿದಂತೆ ಶ್ರೀ ಬಸವರಾಜ ಹೊರಟ್ಟಿಯವರು ಸಲ್ಲಿಸಿದ ವರದಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದರೆ, ಜಾರಿಗೆ ತರುವುದರಿಂದ ಸರ್ಕಾರಕ್ಕೆ ಆಗುವ ಆರ್ಥಿಕ ಹೊರೆ ಎಷ್ಟು; (ಮಾಹಿತಿ ನೀಡುವುದು)

(ಆ) ಇತ್ತೀಚೆಗೆ (೧೫–೦೯–೨೦೧೭) ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ "ಕಾಲ್ಪನಿಕ ವೇತನಕ್ಕೆ ಸಂಬಂಧಿಸಿದಂತೆ ಇಲಾಖೆಯ ಅಧಿಕಾರಿಗಳು ನೀಡಿದ ಮಾಹಿತಿ ಪ್ರಕಾರ ಸರ್ಕಾರಕ್ಕೆ ಬರುವ ಆರ್ಥಿಕ ಹೊರೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಮೇಲ್ಕಾಣಿಸಿದ ಎರಡು ಪ್ರಕರಣಗಳಲ್ಲಿ ಬಹಳ ದೊಡ್ಡ ವ್ಯತ್ಯಾಸ ಕಾಣುತ್ತಿದ್ದು, ಇಲಾಖೆಯ ಅಧಿಕಾರಿಗಳು ಈ ರೀತಿ ದ್ವಂದ್ವ ನೀತಿಯನ್ನು ಅನುಸರಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕಿದೆಯೇ; (ಸಂಪೂರ್ಣವಾದ, ವಿವರವಾದ ಮಾಹಿತಿ ನೀಡುವುದು)

(ಈ) "ಕಾಲ್ಪನಿಕ ವೇತನ" ಬಡ್ತಿ ವಿಷಯಗಳ ಬಗ್ಗೆ ಸದನದಲ್ಲಿ ಒಪ್ಪಿರುವಂತೆ ಎಲ್ಲಾ ಗೊಂದಲಗಳನ್ನು ನಿವಾರಿಸಿ ಜಾರಿಗೆ ತರಲು ಸರ್ಕಾರ ಮುಂದಾಗುವುದೇ; ಸರ್ಕಾರದ ಮುಂದಿರುವ ಕ್ರಮಗಳೇನು?

## ವರ್ಗಾವಣೆಯ ನೀತಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೩೫೦೩ (೪೧೩೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಶಿಕ್ಷಕರ ಹಾಗೂ ಉಪನ್ಯಾಸಕರ ವರ್ಗಾವಣೆಗಳನ್ನು ನಿಗದಿತವಾಗಿ ನಡೆಸಲಾಗುತ್ತಿದೆಯೇ; ಇದ್ದರೆ, ೨೦೧೫–೧೬, ೨೦೧೬–೧೭ ಹಾಗೂ ೨೦೧೭–೧೮ನೇ ಸಾಲಿನ ವರ್ಗಾವಣೆ ನೀತಿ ಹಾಗೂ ವಾಸ್ತವಿಕವಾಗಿ ಕೈಗೊಂಡ ಕ್ರಮಗಳ ಬಗ್ಗೆ ಸವಿವರ ಮಾಹಿತಿ ನೀಡುವುದು;

(ಆ) ೨೦೧೭–೧೮ನೇ ಸಾಲಿನಲ್ಲಿ ಇಲಾಖೆಯಲ್ಲಿ ನಿಗದಿತ ಅವಧಿಯೊಳಗೆ ವರ್ಗಾವಣೆಯಾಗದೇ ಶಿಕ್ಷಕರು ಹಾಗೂ ಉಪನ್ಯಾಸಕರು ಆತಂಕದಲ್ಲಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಮಾಹಿತಿ ನೀಡುವುದು;

(ಇ) ಹಲವಾರು ವರ್ಷಗಳಿಂದ ಒಂದೇ ಸ್ಥಳದಲ್ಲಿ ಸೇವೆಯನ್ನು ಸಲ್ಲಿಸುತ್ತಿರುವ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ ಪ್ರಸ್ತುತ ಸಾಲಿನಲ್ಲಿ ವರ್ಗಾವಣೆ ಭಾಗ್ಯ ನೀಡಲು ಸರ್ಕಾರ ಮುಂದಾಗುವುದೇ; (ಮಾಹಿತಿ ನೀಡುವುದು)

(ಈ) ನಿಗದಿತ ಅವಧಿಯಲ್ಲಿ ವರ್ಗಾವಣೆಯನ್ನು ಮಾಡಲು ಸರ್ಕಾರ ಮುಂದಾಗುವುದೇ; ಇದ್ದರೆ, ಸರ್ಕಾರದ ಮುಂದಿರುವ ಕ್ರಮಗಳೇನು?

## ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ತಿನ ಸದಸ್ಯರ ಧರಣಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೫೦೪ (೪೧೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ: ೦೬.೦೯.೨೦೧೭ ರಿಂದ ೧೫.೦೯.೨೦೧೭ರವರೆಗೆ ವಿಧಾನ ಪರಿಷತ್ತಿನ ೧೩ ಸದಸ್ಯರು (ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರದ) ೧೦ ದಿವಸಗಳ ಕಾಲ ವಿಧಾನಸೌಧ ಹತ್ತಿರವಿರುವ ಮಹಾತ್ಮಗಾಂಧಿ ಪುತ್ಥಳಿ ಹತ್ತಿರ ಅಹೋರಾತ್ರಿ ಧರಣಿ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ೧೦ ದಿವಸಗಳ ಅಹೋರಾತ್ರಿ ಧರಣಿಯ ಹಿನ್ನಲೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: ೧೫.೦೯.೨೦೧೭ ಹಾಗೂ ೨೭.೦೯.೨೦೧೭ರಂದು ನಡೆದ ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯರು ಸಲ್ಲಿಸಿರುವ ಬೇಡಿಕೆಗಳು ಹಾಗೂ ಚರ್ಚಿಸಿದ ವಿಷಯಗಳಾವುವು; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಮೇಲೆ ಕೈಗೊಂಡ ನಿರ್ಣಯಗಳೇನು; (ಕೈಗೊಂಡ ನಿರ್ಣಯಗಳ ಆದೇಶದ ಪ್ರತಿಗಳನ್ನು ನೀಡುವುದು)

(ಈ) ಸದರಿ ಸಭೆಯಲ್ಲಿ ಕೈಗೊಂಡ ನಿರ್ಣಯಗಳಂತೆ ಇಲಾಖೆಯಿಂದ ಆದೇಶಗಳನ್ನು ಹೊರಡಿಸಲಾಗಿದೆಯೇ? (ವಿವರ ನೀಡುವುದು)

## ಇಂಧನ ಉಳಿತಾಯ ಮಾಸಿಕ ಆಚರಣೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು)–**

೩೫೦೫ (೪೦೪೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿರುವ ಬಸ್ಸುಗಳ ಸಂಖ್ಯೆ ಎಷ್ಟು;

(ಆ) ಪ್ರತಿ ವರ್ಷ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಇಂಧನ ಉಳಿತಾಯ ಮಾಸಿಕವನ್ನು ಆಚರಿಸಲಾಗುತ್ತಿದೆಯೇ;

(ಇ) ಕಳೆದ ೦೫ ವರ್ಷಗಳಲ್ಲಿ ಇಂಧನ ಉಳಿತಾಯ ಮಾಸಿಕ ಸಂದರ್ಭದಲ್ಲಿ ನಿಗಧಿಪಡಿಸಿದ ಗುರಿ ಹಾಗೂ ಸಾಧಿಸಿದ ಪ್ರಗತಿ ಏನು; (ಸಂಪೂರ್ಣ ವಿವರ ನೀಡುವುದು)

(ಈ) ಇಂಧನ ಉಳಿತಾಯ ಮಾಸಿಕದ ಆಚರಣೆಗೆ ಕಳೆದ ೦೫ ವರ್ಷಗಳಲ್ಲಿ ಖರ್ಚು ಮಾಡಿದ ಮೊತ್ತವೆಷ್ಟು? (ವಿವರ ನೀಡುವುದು)

## ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ತಿನ ಸದಸ್ಯರ ಧರಣೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೫೦೬ (೪೧೩೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ: ೦೬.೦೯.೨೦೧೭ ರಿಂದ ೧೫.೦೯.೨೦೧೭ರವರೆಗೆ ವಿಧಾನ ಪರಿಷತ್ತಿನ ೧೩ ಸದಸ್ಯರು (ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರದ) ೧೦ ದಿವಸಗಳ ಕಾಲ ವಿಧಾನಸೌಧ ಹತ್ತಿರವಿರುವ ಮಹಾತ್ಮಗಾಂಧಿ ಪುತ್ತಳಿ ಹತ್ತಿರ ಅಹೋರಾತ್ರಿ ಧರಣಿ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ೧೦ ದಿವಸಗಳ ಅಹೋರಾತ್ರಿ ಧರಣಿಯ ಹಿನ್ನಲೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: ೧೫.೦೯.೨೦೧೭ ಹಾಗೂ ೨೭.೦೯.೨೦೧೭ರಂದು ನಡೆದ ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯರು ಸಲ್ಲಿಸಿರುವ ಬೇಡಿಕೆಗಳು ಹಾಗೂ ಚರ್ಚಿಸಿದ ವಿಷಯಗಳಾವುವು; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಮೇಲೆ ಕೈಗೊಂಡ ನಿರ್ಣಯಗಳೇನು; (ಕೈಗೊಂಡ ನಿರ್ಣಯಗಳ ಆದೇಶದ ಪ್ರತಿಗಳನ್ನು ನೀಡುವುದು)

(ಈ) ಸದರಿ ಸಭೆಯಲ್ಲಿ ಕೈಗೊಂಡ ನಿರ್ಣಯಗಳಂತೆ ಇಲಾಖೆಯಿಂದ ಆದೇಶಗಳನ್ನು ಹೊರಡಿಸಲಾಗಿದೆಯೇ? (ವಿವರ ನೀಡುವುದು)

## ರಾಜ್ಯದಲ್ಲಿನ ಶಿಕ್ಷಣ ಸಂರಚನೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೫೦೭ (೪೦೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಿರಿಯ ಪ್ರಾಥಮಿಕ ಶಾಲೆ, ಹಿರಿಯ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಶಾಲೆ ಹಾಗೂ ಪದವಿ ಪೂರ್ವ ಶಿಕ್ಷಣದಲ್ಲಿ ಯಾವ ಯಾವ ತರಗತಿಗಳನ್ನು ನಡೆಸಲಾಗುತ್ತಿದೆ;

(ಆ) ಇವುಗಳಿಗೆ ಬೋಧಿಸುವ ಶಿಕ್ಷಕರ ವೃಂದ ಹಾಗೂ ನೇಮಕಾತಿ ನಿಯಮಾವಳಿಗಳೇನು;

(ಇ) ೮ನೇ ತರಗತಿ ಪ್ರಾಥಮಿಕ ಶಿಕ್ಷಣದಲ್ಲಿದೆಯೋ ಅಥವಾ ಪ್ರೌಢ ಶಿಕ್ಷಣದಲ್ಲಿದೆಯೇ;

(ಈ) ರಾಜ್ಯದಲ್ಲಿ ಶಿಕ್ಷಣ ಸಂರಚನೆಯನ್ನು ಬದಲಾಯಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ? (ಸಂಪೂರ್ಣವಾದ ಮಾಹಿತಿಯನ್ನು ನೀಡುವುದು)

## ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೫೦೮ (೪೦೮೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಅಧಿಸೂಚನೆ ಹೊರಡಿಸಿದ್ದು ಯಾವಾಗ; ಅಧಿಸೂಚನೆಯ ಪ್ರತಿಯನ್ನು ನೀಡುವುದು;

(ಆ) ಪ್ರಸ್ತುತ ನೇಮಕಾತಿ ಪ್ರಕ್ರಿಯೆಯು ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಇ) ಎಷ್ಟು ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿತ್ತು; ಎಷ್ಟು ಜನರಿಗೆ ನೇಮಕಾತಿ ಮಾಡಿ ಆದೇಶ ಹೊರಡಿಸಲಾಗಿದೆ; ಬಾಕಿ ಉಳಿದವರ ಸಂಖ್ಯೆ ಎಷ್ಟು;

(ಈ) ಈ ಪ್ರಕ್ರಿಯೆಯಲ್ಲಿ ಉಂಟಾಗಿರುವ ಸಮಸ್ಯೆಗಳು ಯಾವುವು; (ವಿವರ ನೀಡುವುದು)

(ಉ) ನೇಮಕಾತಿ ಪರಿಶೀಲನೆಗಾಗಿ ಉನ್ನತ ಶಿಕ್ಷಣ ಪರಿಷತ್ತಿನಿಂದ ಸಮಿತಿ ರಚನೆ ಮಾಡಲಾಗಿತ್ತೇ; ಹಾಗಿದ್ದಲ್ಲಿ, ಸಮಿತಿಯ ವರದಿಯ ಪ್ರತಿ ನೀಡುವುದು;

(ಊ) ನೇಮಕಾತಿ ಪ್ರಕ್ರಿಯೆಯಲ್ಲಿ ಉಂಟಾಗಿರುವ ಸಮಸ್ಯೆಗಳ ಪರಿಹಾರಕ್ಕೆ ಹಾಗೂ ಬಾಕಿ ಉಳಿದಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಸರ್ಕಾರ ಕೈಗೊಂಡ ಹಾಗೂ ಕೈಗೊಳ್ಳಬೇಕಾಗಿರುವ ಕ್ರಮಗಳೇನು?

## ೨೦೧೭–೧೮ನೇ ಸಾಲಿನ ವರ್ಗಾವಣೆ ಪ್ರಕ್ರಿಯೆ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೩೮೯ (೪೦೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ನೇ ಸಾಲಿನ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸದೇ ಇರಲು ಕಾರಣವೇನು; ಅದಕ್ಕಿರುವ ಅಡೆತಡೆಗಳೇನು;

(ಆ) ವರ್ಗಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸುವುದು ಯಾವಾಗ; ವರ್ಗಾವಣೆ ಪ್ರಕ್ರಿಯೆ ಪ್ರಾರಂಭವಾಗದೇ ಶಿಕ್ಷಕರು ಪರದಾಡುತ್ತಿದ್ದು ತಕ್ಷಣ ವರ್ಗಾವಣೆ ಮಾಡಲು ಸರ್ಕಾರ ಮುಂದಾಗುವುದೇ;

(ಇ) ಈ ಬಾರಿಯ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯಲ್ಲಿ ಸರ್ಕಾರ ಅಳವಡಿಸಿಕೊಂಡಿರುವ ಅಮೂಲಾಗ್ರ ಬದಲಾವಣೆಗಳೇನು; ಹೊಸ ನಿಯಮಾವಳಿಗಳ (ಬದಲಾವಣೆಗಳ) ಕುರಿತು ವಿಸ್ತೃತ ವರದಿ ನೀಡುವುದು?

## ೧೯೯೫ರ ನಂತರ ಪ್ರಾರಂಭವಾದ ಶಾಲಾ, ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೩೯೦ (೪೦೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೫ರ ನಂತರ ಪ್ರಾರಂಭವಾದ ಅನುದಾನಿತ ಶಾಲಾ, ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಸರ್ಕಾರದ ನಿಲುವೇನು;

(ಆ) ಈ ಶಾಲಾ, ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ಚಿಂತನೆ ನಡೆಸಿದೆಯೇ;

(ಇ) ೧೯೯೫ರ ನಂತರ ಪ್ರಾರಂಭವಾದ ಅನುದಾನ ರಹಿತ ಶಾಲಾ, ಕಾಲೇಜುಗಳ ಸಂಖ್ಯೆ ಎಷ್ಟು; ಈ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ಸರ್ಕಾರದ ಬೊಕ್ಕಸಕ್ಕೆ ತಗಲಬಹುದಾದ ವೆಚ್ಚ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ಧಾರ್ಮಿಕ ಅಲ್ಪ ಸಂಖ್ಯಾತರಿಗಾಗಿ ಒದಗಿಸಿದ ಅನುದಾನ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೫೧೧ (೪೦೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆಯವ್ಯಯದಲ್ಲಿ ಕಳೆದ ೦೩ ವರ್ಷಗಳಲ್ಲಿ ಧಾರ್ಮಿಕ ಅಲ್ಪ ಸಂಖ್ಯಾತರಿಗಾಗಿ ಒದಗಿಸಿರುವ ಅನುದಾನ ಎಷ್ಟು; ವಿನಿಯೋಗಿಸಿದ ಅನುದಾನ ಎಷ್ಟು;

(ಆ) ಕರ್ನಾಟಕ ಸರ್ಕಾರ ಯಾವ ಯಾವ ಧರ್ಮಗಳನ್ನು/ಮತಗಳನ್ನು ಧಾರ್ಮಿಕ/ಮತೀಯ ಅಲ್ಪಸಂಖ್ಯಾತರೆಂದು ಪರಿಗಣಿಸಿದೆ; ಆಯಾ ಮತ/ಧರ್ಮವಾರು ಅನುದಾನ ಹಂಚಿಕೆ ಮಾಡಲಾಗಿದೆಯೇ; ಮಾಡಲಾಗಿದ್ದರೆ, ಆಯಾ ಧರ್ಮದವರಿಗೆ ಒದಗಿಸಿದ ಅನುದಾನದ ವಿವರ ನೀಡುವುದು;

(ಇ) ಧಾರ್ಮಿಕ ಅಲ್ಪಸಂಖ್ಯಾತರಿಗೆ ಕರ್ನಾಟಕ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳು ಯಾವುವು; ಧಾರ್ಮಿಕ/ಮತೀಯ ಅಲ್ಪ ಸಂಖ್ಯಾತರಿಗೆ ಶೈಕ್ಷಣಿಕ ಹಾಗೂ ಉದ್ಯೋಗ ಮೀಸಲಾತಿ ಪ್ರಮಾಣ ಎಷ್ಟು; ಈ ಮೀಸಲಾತಿಯ ಕಾರಣಕ್ಕೆ ಆ ಸಮುದಾಯಗಳಿಗಾಗಿರುವ ಲಾಭ ಹಾಗೂ ಸೌಲಭ್ಯಗಳೇನು?

## ಕಾಲೇಜುಗಳಲ್ಲಿ ರಾಷ್ಟ್ರೀಯ ಸೇವಾ ಶಿಕ್ಷಣ ಯೋಜನೆ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೧೨ (೩೯೦೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಕಾಲೇಜುಗಳಲ್ಲಿ NSS ರಾಷ್ಟ್ರೀಯ ಸೇವಾ ಶಿಕ್ಷಣ ಯೋಜನೆ ಅನ್ವಯ ಘಟಕಗಳು ಅಸ್ತಿತ್ವದಲ್ಲಿದೆ; ಭಾಗವಹಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಕಾಲೇಜುಗಳ ಸಂಖ್ಯೆ ಎಷ್ಟು;

(ಆ) NSS ಘಟಕದಿಂದ ನಿರ್ವಹಿಸುತ್ತಿರುವ ಸೇವಾ ಚಟುವಟಿಕೆಗಳು ಯಾವುವು;

(ಇ) NSS ಅಥವಾ NCC ಯಲ್ಲಿ ಕಡ್ಡಾಯವಾಗಿ ವಿದ್ಯಾರ್ಥಿಗಳು ಭಾಗವಹಿಸುವಂತೆ ಸರ್ಕಾರ ಕ್ರಮ ಕೈಗೊಳ್ಳುವುದೇ;

(ಈ) ವಿದ್ಯಾರ್ಥಿಗಳು NSS, NCC ಯಲ್ಲಿ ಉತ್ತಮ ಸಾಧನೆ/ಕಾರ್ಯ ಮಾಡಿದರೆ ಉತ್ತೇಜನ ನೀಡಲು ಸರ್ಕಾರದ ಯೋಜನೆಗಳೇನು? (ವಿವರ ನೀಡುವುದು)

## ಶಾಲೆಗಳಲ್ಲಿನ ಆಟದ ಮೈದಾನ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೧೩ (೩೯೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರೌಢಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಾಲೆಗಳಲ್ಲಿ ಆಟದ ಮೈದಾನ ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು; (ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಮೇಲ್ಕಂಡ ಸದರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರು ಇರುವ ಶಾಲೆಗಳ ಸಂಖ್ಯೆ ಎಷ್ಟು; (ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಆಟದ ಮೈದಾನ ಇಲ್ಲದ ಶಾಲೆಗಳ ವಿದ್ಯಾರ್ಥಿಗಳ ದೈಹಿಕ ಸಾಮರ್ಥ್ಯ ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಆಟದ ಮೈದಾನದ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಹಾಗೂ ಕೈಗೊಳ್ಳುವ ಕ್ರಮಗಳೇನು? (ವಿವರ ನೀಡುವುದು)

## ಪ್ರಾಥಮಿಕ ಶಾಲೆಗಳ ಸಬಲೀಕರಣ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೧೪ (೩೯೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಂದರಿಂದ–ಏಳನೇ ತರಗತಿಯವರೆಗೆ ಇರುವ ಪ್ರಾಥಮಿಕ ಶಾಲೆಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪ್ರಾಥಮಿಕ ಶಾಲೆಗಳ ಪೈಕಿ ಏಳೂ ತರಗತಿಗಳು ಸೇರಿ ೩೦ಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಮತ್ತು ೫೦ಕ್ಕಿಂತ ಕಡಿಮೆ ಇರುವ ವಿದ್ಯಾರ್ಥಿಗಳ ಶಾಲೆಗಳ ಸಂಖ್ಯೆ ಎಷ್ಟು; ಒಟ್ಟು ಶಿಕ್ಷಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಸಂಖ್ಯೆ ಕಡಿಮೆ ಇರುವ ಶಾಲೆಗಳನ್ನು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಒಟ್ಟಾಗಿ ಸೇರಿಸಿ ಶಾಲೆಯ ಗುಣಮಟ್ಟ ಹಾಗೂ ಶಿಕ್ಷಕರ ಪೂರ್ಣ ಉಪಯೋಗ ಪಡೆದುಕೊಳ್ಳುವ ಯೋಜನೆ ಸರ್ಕಾರದ ಮುಂದಿದೆಯೇ;

(ಈ) ಕೊರತೆ ಕಾರಣ ಮುಚ್ಚಬಹುದಾದ ಶಾಲೆಗಳನ್ನು ಸಬಲೀಕರಣ ಮಾಡಲು ಸರ್ಕಾರದ ಯೋಜನೆ ಏನು? (ವಿವರ ನೀಡುವುದು)

# ಸಾಮಾನ್ಯ ಆಡಳಿತ ಮಂಡಳಿಗಳ ಪ್ರಥಮ ದರ್ಜೆ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೫೧೫ (೪೧೩೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೪–೯೫ರವರೆಗೆ ಪ್ರಾರಂಭಿಸಿದ ಪರಿಶಿಷ್ಟ ಜಾತಿ/ಪಂಗಡಗಳ ಆಡಳಿತ ಮಂಡಳಿಗಳು  ನಡೆಸುತ್ತಿರುವ ಪ್ರಥಮ ದರ್ಜೆ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಯಾವಾಗ ಆದೇಶಿಸಲಾಯಿತು;

(ಆ) ಈ ಆದೇಶದನ್ವಯ ಎಷ್ಟು ಪ್ರಥಮ ದರ್ಜೆ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ;

(ಇ) ೧೯೯೪–೯೫ರವರೆಗೆ ಪ್ರಾರಂಭಿಸಿದ ಸಾಮಾನ್ಯ ಆಡಳಿತ ಮಂಡಳಿಗಳ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಸಚಿವ ಸಂಪುಟ ಉಪಸಮಿತಿಯನ್ನು ಯಾವಾಗ ರಚಿಸಲಾಗಿದೆ;

(ಈ) ಸಚಿವ ಸಂಪುಟ ಉಪಸಮಿತಿಯು ಎಷ್ಟು ಸಲ ಸಭೆ ಸೇರಿದೆ;

(ಉ) ಒಟ್ಟು ಎಷ್ಟು ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಶಿಫಾರಸ್ಸು ಮಾಡಲಾಗಿದೆ;

(ಊ) ಸಾಮಾನ್ಯ ಆಡಳಿತ ಮಂಡಳಿಗಳ ಪ್ರಥಮ ದರ್ಜೆ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ವಿಳಂಬ ಮಾಡುತ್ತಿರುವುದೇಕೆ;

(ಋ) ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಹಾಕಿಕೊಂಡ ಕಾಲಮಿತಿ ಯಾವುದು?

## ೧೯೯೫–೯೬ರವರೆಗೆ ಪ್ರಾರಂಭಿಸಿದ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೬೧೪ (೩೮೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೫–೯೬ರವರೆಗೆ ಪ್ರಾರಂಭಿಸಿದ ಎಷ್ಟು ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ; (ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಲ್ಲಿಯವರೆಗೆ ವೇತನಾನುದಾನಕ್ಕೆ ಒಳಪಡಿಸಿದ ಶಿಕ್ಷಣ ಸಂಸ್ಥೆಗಳಲ್ಲಿ ಅನುದಾನಕ್ಕೆ ಒಳಪಟ್ಟ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿನ ಸಿಬ್ಬಂದಿಯ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ೧೯೯೫–೯೬ರವರೆಗೆ ಪ್ರಾರಂಭಿಸಿದ ಎಷ್ಟು ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೊಳಪಡಿಸುವುದು ಬಾಕಿ ಇದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಪ್ರಸ್ತಾವನೆಗಳು ಯಾವ ಯಾವ ಹಂತದಲ್ಲಿವೆ;

(ಉ) ಜಿಲ್ಲಾ ಮಟ್ಟದಲ್ಲಿ ತ್ರಿಸದಸ್ಯ ಸಮಿತಿಯ ಸಂಪೂರ್ಣ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಶಿಫಾರಸ್ಸು ಮಾಡಿದ್ದರೂ ತಿರಸ್ಕರಿಸಲು ಅಥವಾ ತಡೆಹಿಡಿಯಲು ಕಾರಣಗಳೇನು;

(ಊ) ತ್ರಿಸದಸ್ಯ ಸಮಿತಿಯು ಕಳಿಸಿದ ಪ್ರಸ್ತಾವನೆಗಳು ತಿರಸ್ಕರಿಸಲ್ಪಟ್ಟರೆ ತಪ್ಪು ಪ್ರಸ್ತಾವನೆ ಕಳಿಸಿದ ಮುಖ್ಯಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಪನಿರ್ದೇಶಕರುಗಳು ಉತ್ತರದಾಯಿಗಳಾಗುವುದಿಲ್ಲವೆ;

(ಖು) ಹಾಗಿದ್ದಲ್ಲಿ, ಈ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳದಿರಲು ಕಾರಣಗಳೇನು?

**ರಾಜ್ಯದಲ್ಲಿ ಖಾಸಗಿ ಸಂಸ್ಥೆಗಳ ಬಸ್ಸುಗಳು ಓಡಾಡುತ್ತಿರುವ ಬಗ್ಗೆ**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೫೧೭ (೪೧೩೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಖಾಸಗಿ ಸಂಸ್ಥೆಗಳ ಬಸ್ಸುಗಳನ್ನು ಓಡಿಸಲಾಗುತ್ತಿದೆ; (ಆ ಸಂಸ್ಥೆಗಳ ಹೆಸರು ಹಾಗೂ ಮಾಲೀಕರ ಹೆಸರು ಸಹಿತ ವಿವರ ನೀಡುವುದು)

(ಆ) ಅವರಿಗೆ ಮಂಜೂರಾದ ಮಾರ್ಗಗಳು ಯಾವುವು; (ವಿವರ ನೀಡುವುದು)

(ಇ) ಅನುಮತಿ ಕೊಡುವಾಗ ವಿಧಿಸಿದಂತಹ ನಿಯಮಗಳೇನು; ನಿಯಮಗಳನ್ನು ಸದರಿ ಸಂಸ್ಥೆಗಳು ಪಾಲಿಸುತ್ತಿವೆಯೇ; ಪಾಲಿಸದಿದ್ದ ಎಷ್ಟು ಸಂಸ್ಥೆಗಳ ಮೇಲೆ ಕ್ರಮಕೈಗೊಳ್ಳಲಾಗಿದೆ;

(ಈ) ಹಬ್ಬ ಹರಿದಿನಗಳಲ್ಲಿ ಮತ್ತು ಸರ್ಕಾರಿ ರಜಾ ದಿನಗಳಲ್ಲಿ ೫ ರಿಂದ ೧೦ ಪಟ್ಟು ದರವನ್ನು ಹೆಚ್ಚಿಗೆ ಮಾಡಿ ಜನರಿಗೆ ಆರ್ಥಿಕ ತೊಂದರೆ ಹಾಗೂ ಹಿಂಸೆ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಏನು ಕ್ರಮಕೈಗೊಂಡಿದೆ;

(ಉ) ಇದೇ ಪದ್ಧತಿಯನ್ನು ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಅನುಸರಿಸುತ್ತಿರುವುದು ನಿಜವೇ; ನಿಜವಿದ್ದಲ್ಲಿ, ಕಾರಣಗಳೇನು?

## ರಾಜ್ಯದಲ್ಲಿ ನಷ್ಟದಲ್ಲಿರುವ ಸಾರಿಗೆ ನಿಗಮಗಳನ್ನು ಲಾಭದತ್ತ ಕೊಂಡೊಯ್ಯುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೫೧೮ (೪೧೩೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸಾರಿಗೆ ನಿಗಮಗಳಿವೆ ಹಾಗೂ ಅವುಗಳ ಹೆಸರು ಹಾಗೂ ಕೇಂದ್ರ ಸ್ಥಾನಗಳು ಎಲ್ಲಿವೆ;

(ಆ) ಕರ್ನಾಟಕ ರಾಜ್ಯ ರಸ್ತೆ ನಿಗಮಗಳನ್ನು ವಿಭಜಿಸಿದ ನಂತರ ಇಲ್ಲಿಯವರೆಗೆ ಈ ನಿಗಮಗಳು ಎಷ್ಟು ನಷ್ಟ ಹೊಂದಿವೆ;

(ಇ) ಕಳೆದ ೫ ವರ್ಷಗಳಲ್ಲಿ ಈ ನಿಗಮಗಳು ಅನುಭವಿಸಿರುವ ಆರ್ಥಿಕ ನಷ್ಟ ಎಷ್ಟು;

(ಈ) ಸಾರಿಗೆ ನಿಗಮಗಳು ನಷ್ಟ ಅನುಭವಿಸಲು ಕಾರಣಗಳೇನು; ಈ ಕುರಿತು ವೈಜ್ಞಾನಿಕವಾಗಿ ಅಧ್ಯಯನ ನಡೆಸಿದೆಯೇ;

(ಉ) ಈ ನಷ್ಟವನ್ನು ಭರಿಸಲು ಸರ್ಕಾರ ಹಾಕಿಕೊಂಡ ಕ್ರಿಯಾಯೋಜನೆ ಏನು?

## ಚಾಲಕರಿಗೆ ಸೌಲಭ್ಯಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೧೯ (೩೮೭೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಸ್ತೆ ಸಾರಿಗೆ ಸಂಸ್ಥೆಯ ಎಲ್ಲಾ ವಿಭಾಗಗಳಲ್ಲಿ ಚಾಲಕ, ನಿರ್ವಾಹಕ, ಚಾಲಕ ಕಂ ನಿರ್ವಾಹಕರಾಗಿ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಚಾಲಕ ಕರ್ತವ್ಯ ಮತ್ತು ಮಾರ್ಗಸೂಚಿಗಳನ್ನು ಸಾರಿಗೆ ಅಧಿಕಾರಿಗಳ ಒತ್ತಡದ ಆದೇಶಕ್ಕೆ ಹೆಚ್ಚುವರಿಯಾಗಿ ಬಸ್ ಓಡಿಸುತ್ತಿರುವುದರಿಂದ ಅಪಘಾತಗಳು ಸಂಭವಿಸುತ್ತಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ;

(ಇ) ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಿಕೆಯನ್ನು ತಡೆಯಲು ಸರ್ಕಾರ ಯಾವ ಸೂಕ್ತ ಮಾರ್ಗಸೂಚಿಯನ್ನು ಜಾರಿಗೊಳಿಸಿದೆ; (ವಿವರ ನೀಡುವುದು)

(ಈ) ಚಾಲಕ/ನಿರ್ವಾಹಕರಿಗೆ ಸಂಬಂಧಿಸಿದಂತೆ ಸರ್ಕಾರ ಯಾವ ಸೌಲಭ್ಯವನ್ನು ಕಲ್ಪಿಸಿದೆ ಹಾಗೂ ಕಲ್ಪಿಸಲು ಉದ್ದೇಶಿದೆ? (ವಿವರ ನೀಡುವುದು)

## KIADB ವತಿಯಿಂದ ಕೈಗೆತ್ತಿಕೊಂಡಿರುವ ನಿವೇಶನ ಹಾಗೂ ವಸತಿ ಗೃಹಗಳ ನಿರ್ಮಾಣ

**ಶ್ರೀ ಎನ್.ಎಸ್. ಬೋಸ್‌ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೨೦ (೪೦೭೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದ ಯರಮರಸ್ ಹತ್ತಿರ KIADB ವತಿಯಿಂದ ಕೈಗೆತ್ತಿಕೊಂಡಿರುವ ನಿವೇಶನ ಹಾಗೂ ವಸತಿ ಗೃಹಗಳ ನಿರ್ಮಾಣಕ್ಕೆ ಉದ್ದೇಶಿಸಿರುವ ಒಟ್ಟು ಜಾಗ ಎಷ್ಟು; ಇದಕ್ಕೆ ಖರ್ಚಾಗಿರುವ ಒಟ್ಟು ಮೊತ್ತ ಎಷ್ಟು;

(ಆ) ರಾಯಚೂರು ಜಿಲ್ಲೆಯಲ್ಲಿ KIADB ವತಿಯಿಂದ ನಿರ್ಮಾಣವಾಗಿರುವ ವಸತಿ ಗೃಹಗಳು ಹಾಗೂ ನಿವೇಶನಗಳನ್ನು ಮಂಜೂರಾತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಮಾನ್ವಿ ಪಟ್ಟಣದಲ್ಲಿರುವ ಕೈಗಾರಿಕಾ ಪ್ರದೇಶಗಳಿಗೆ ಸಾಕಷ್ಟು ಬೇಡಿಕೆ ಇರುವುದರಿಂದ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರು ಜಿಲ್ಲೆಯಲ್ಲಿರುವ ವಿವಿಧ ಕೈಗಾರಿಕಾ ಪ್ರದೇಶಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ಜಿಲ್ಲೆಯಲ್ಲಿ ಬರುವ ತಾಲ್ಲೂಕಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೨೧ (೪೦೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಬರುವ ರಾಯಚೂರು, ಮಾನ್ವಿ, ದೇವದುರ್ಗ, ಲಿಂಗಸುಗೂರು ತಾಲ್ಲೂಕುಗಳಲ್ಲಿ ಬಹು ಗ್ರಾಮ ಕುಡಿಯುವ ನೀರಿನ ಯೋಜನೆಯ ರೂ.೧,೪೦೦/– ಕೋಟಿಗಳ ಪ್ರಸ್ತಾವನೆಯ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಹಾಗೂ ಮಾನ್ವಿ ತಾಲ್ಲೂಕುಗಳಲ್ಲಿ ಉಳಿದಿರುವ ಗ್ರಾಮಗಳು, ತಾಂಡಾಗಳು, ಕ್ಯಾಂಪ್‌ಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) KRIDL ಸಂಸ್ಥೆಯಿಂದ ರಾಯಚೂರು ಜಿಲ್ಲೆಯಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಸಂಖ್ಯೆ ಹಾಗೂ ಕಾಮಗಾರಿಗಳಿಗೆ ಮಂಜೂರಾತಿಗಿರುವ ಅನುದಾನ ಎಷ್ಟು;

(ಈ) ರಾಯಚೂರು ಜಿಲ್ಲೆಯಲ್ಲಿ KRIDL ತೆಗೆದುಕೊಂಡ ಕಾಮಗಾರಿಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಉ) ರಾಯಚೂರು ಜಿಲ್ಲೆಯಲ್ಲಿ ವಿವಿಧ ಕಾಮಗಾರಿಗಳ ಯೋಜನೆಗಳಿಗೆ KRIDL ಗೆ ಜಮಾ ಆಗಿರುವ ಅನುದಾನ ಎಷ್ಟು?

## ರಾಯಚೂರು ನಗರದಲ್ಲಿ ವಿಶ್ವವಿದ್ಯಾಲಯ ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೨೨ (೪೦೭೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ವಿ ತಾಲ್ಲೂಕು, ಕವಿತಾಳ ಪಟ್ಟಣದಲ್ಲಿ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ನಗರದಲ್ಲಿ ನಿರ್ಮಿಸುತ್ತಿರುವ ಸರ್ಕಾರಿ ಇಂಜಿನೀಯರಿಂಗ್ ಕಾಲೇಜಿನ ಕಟ್ಟಡದ ಕಾಮಗಾರಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಮಾನ್ವಿ ಪಟ್ಟಣದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರು ನಗರದಲ್ಲಿ ವಿಶ್ವವಿದ್ಯಾಲಯ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಅಲ್ಪ ಸಂಖ್ಯಾತರ ಶಿಕ್ಷಣ ಅಭಿವೃದ್ಧಿ ಹಾಗೂ ವಕ್ಫ್ ಆಸ್ತಿಗಳನ್ನು ಸಂರಕ್ಷಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೨೩ (೪೦೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ವಕ್ಫ್ ಆಸ್ತಿಗಳನ್ನು ಸಂರಕ್ಷಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಶಿಕ್ಷಣ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಮರಳು ಕೊರತೆಯಿಂದ ಜನ ಸಾಮನ್ಯರಿಗೆ ಆಗಿರುವ ತೊಂದರೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೨೪ (೪೦೭೬) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಮರಳು ಕೊರತೆಯಿಂದ ಜನ ಸಾಮಾನ್ಯರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಮರಳು ಕೊರತೆಯಿಂದ ಜನ ಸಾಮಾನ್ಯರಿಗೆ ಆಗಿರುವ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಜ್ಯದ ಗಡಿಭಾಗಗಳಲ್ಲಿ ಇರುವ ತೆಲಗಾಂಣ, ಆಂಧ್ರಪ್ರದೇಶ ಹಾಗೂ ಇತರೆ ರಾಜ್ಯಗಳಲ್ಲಿ ಮರಳು ಸರಬರಾಜಿನ ಮೇಲೆ ಇರುವ ನಿರ್ಬಂಧಗಳನ್ನು ತೆಗೆದು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಕಳಪೆ ಗುಣಮಟ್ಟದ ಸಮವಸ್ತ್ರ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೩೫೨೫ (೪೦೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಯಾವ ವಿದ್ಯಾರ್ಥಿಗಳಿಗೆ (ಪ್ರಾಥಮಿಕ, ಪ್ರೌಢ, ಪದವಿ ಪೂರ್ವ, ಸರ್ಕಾರಿ ಅನುದಾನಿತ) ಉಚಿತವಾಗಿ ಸಮವಸ್ತ್ರಗಳನ್ನು ವಿತರಿಸಲಾಗುತ್ತಿದೆ;

(ಆ) ಪ್ರಸಕ್ತ ಸಾಲಿನಲ್ಲಿ ಎಷ್ಟು ಮಕ್ಕಳಿಗೆ ಸಮವಸ್ತ್ರ ವಿತರಿಸಲು ಉದ್ದೇಶಿಸಲಾಗಿದೆ; ಇದಕ್ಕೆ ಮೀಸಲಿರಿಸಿದ ಹಣವೆಷ್ಟು

(ಇ) ಸಮವಸ್ತ್ರ ಕಳಪೆ ಗುಣಮಟ್ಟದೆಂದು ಆರೋಪ ಬಂದಿರುವುದು ನಿಜವೇ;

(ಈ) ಸಮವಸ್ತ್ರಗಳನ್ನು ಯಾವ ಯಾವ ಮೂಲಗಳಿಂದ ಖರೀದಿಸಲಾಗುತ್ತದೆ ಮತ್ತು ಇದಕ್ಕಿರುವ ಮಾನದಂಡಗಳೇನು? (ವಿವರ ನೀಡುವುದು)

## ಅನುದಾನಿತ ಪದವಿ ಕಾಲೇಜುಗಳಲ್ಲಿ ಬೋಧಕೇತರ ಸಿಬ್ಬಂದಿಯನ್ನು ನೇಮಕಾತಿ ಮಾಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೩೫೨೬ (೪೦೬೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪದವಿ ಕಾಲೇಜುಗಳಲ್ಲಿ ಎಷ್ಟು ವರ್ಷಗಳಿಂದ ಬೋಧಕೇತರ ಸಿಬ್ಬಂದಿಯನ್ನು ನೇಮಕ ಮಾಡಿರುವುದಿಲ್ಲ;

(ಆ) ಬೋಧಕೇತರ ಸಿಬ್ಬಂದಿಯ ಕೊರತೆಯಿಂದ ಕಾಲೇಜಿನ ಆಡಳಿತದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ತೆಗೆದುಕೊಳ್ಳಲಾಗುವುದು;

(ಈ) ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿ ಸರ್ಕಾರಿ/ಅನುದಾನಿತ/ಖಾಸಗಿಯಾಗಿ ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳ ವಿವರ ಹಾಗೂ ಸಿಬ್ಬಂದಿಗೆ ನೀಡಬೇಕಾದ ಸೇವಾ ಸೌಲಭ್ಯದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೩೫೨ (೪೦೭೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ/ಅನುದಾನಿತ/ಖಾಸಗಿಯಾಗಿ ನಡೆಸಲ್ಪಡುತ್ತಿರುವ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; (ವಿವರಗಳನ್ನು ವಿಶ್ವವಿದ್ಯಾಲಯಗಳ ವ್ಯಾಪ್ತಿಗೊಳಪಡುವಂತೆ ನೀಡುವುದು)

(ಆ) ಈ ಪದವಿ ಕಾಲೇಜುಗಳಲ್ಲಿ ಪ್ರಸಕ್ತ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (೩ ವರ್ಷಗಳ ವಿವರ ನೀಡುವುದು)

(ಇ) ಖಾಸಗಿ ಪದವಿ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ; (ವಿವರ ನೀಡುವುದು)

(ಈ) ಖಾಸಗಿ ಪದವಿ ಕಾಲೇಜುಗಳಲ್ಲಿ ಬೋಧಕ ಮತ್ತು ಬೋಧಕೇತರ ವೃತ್ತಿಯಲ್ಲಿ ತೊಡಗಿಸಿಕೊಂಡಿರುವ ಸಿಬ್ಬಂದಿಗಳಿಗೆ ನೀಡಬೇಕಾಗಿರುವ ಕನಿಷ್ಠ ಸೇವಾ ಸೌಲಭ್ಯಗಳ ಕುರಿತು ಸರ್ಕಾರ ಏನು ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೫೨೮ (೪೦೩೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿ ಮೃತರಾದಾಗ ಅವರ ಕುಟುಂಬಕ್ಕೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಲು ಅವಕಾಶವಿದೆಯೇ;

(ಆ) ಈ ರೀತಿಯ ಅನುಕಂಪದ ಆಧಾರದ ಮೇಲೆ ನೌಕರಿ ಕೋರಿ ಬಂದಿರುವ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು;

(ಇ) ಸರ್ಕಾರಿ ನೌಕರರಿಗೆ ಇರುವಂತಹ ಈ ಅನುಕೂಲತೆಯನ್ನು ಅನುದಾನಿತ ಪದವಿ ಕಾಲೇಜುಗಳಲ್ಲಿ ಇರುವ ನೌಕರರಿಗೂ ಮುಂದುವರೆಸಲು ಇರುವ ಸಮಸ್ಯೆಗಳೇನು;

(ಈ) ಈ ಅನುಕಂಪದ ಆಧಾರದಲ್ಲಿ ನೇಮಕಾತಿಯನ್ನು ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುಸರಿಸುವಲ್ಲಿ ಸರ್ಕಾರದ ನಿಲುವೇನು?

## ರಾಜ್ಯದಲ್ಲಿರುವ ವಸತಿ ಸಹಿತ ಮದರಸಗಳಲ್ಲಿ ಬೋಧಿಸುತ್ತಿರುವ ವಿಷಯಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೩೫೯ (೪೦೩೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಸತಿ ಸಹಿತ ಮದರಸಗಳ ಸಂಖ್ಯೆ ಎಷ್ಟು; ಈ ವಸತಿ ಸಹಿತ ಮದರಸಗಳನ್ನು ಪ್ರಾರಂಭಿಸಲು ಯಾವ ನಿಯಮಗಳ ಅನ್ವಯ ಅನುಮತಿ ನೀಡಲಾಗಿದೆ; ಈ ಮದರಸಗಳಲ್ಲಿ ಯಾವ ಯಾವ ವಿಷಯಗಳ ಕುರಿತು ಪಾಠ ಮಾಡಲಾಗುತ್ತದೆ;

(ಆ) ಮದರಸಗಳಲ್ಲಿ ನೀಡುವ ಶಿಕ್ಷಣವು ಸಂವಿಧಾನದ ಅನ್ವಯ ನೀಡಬೇಕಾಗಿರುವ ಕಡ್ಡಾಯ ಶಿಕ್ಷಣ ವ್ಯಾಪ್ತಿಗೆ ಬರುತ್ತದೆಯೇ; ಹಾಗಿದ್ದಲ್ಲಿ, ಈ ರೀತಿಯಾಗಿ ವಸತಿ ಸಹಿತ ಮದರಸಗಳಲ್ಲಿ ಇರುವ ವಿದ್ಯಾರ್ಥಿಗಳು ಯಾವ ಭಾಷೆಯಲ್ಲಿ ಶಿಕ್ಷಣ ಪಡೆಯುತ್ತಿದ್ದಾರೆ; ಇವರಿಗೆ ಕಡ್ಡಾಯ ಕನ್ನಡ ಕಲಿಕೆಯ ರಾಜ್ಯದ ಆದೇಶವು ಅನ್ವಯವಾಗುತ್ತದೆಯೇ;

(ಇ) ವಸತಿ ಸಹಿತ ಮದರಸಗಳಲ್ಲಿ ಯಾವ ಯಾವ ರಾಜ್ಯ ಹಾಗೂ ದೇಶದ ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ; ಅಸ್ಸಾಂ, ಬಿಹಾರ, ಉತ್ತರಪ್ರದೇಶಗಳಿಂದ ಎಷ್ಟು ಮಕ್ಕಳು ನಮ್ಮ ರಾಜ್ಯದ ಮದರಸಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ; (ಸಂಪೂರ್ಣ ವಿವರ ನೀಡುವುದು)

(ಈ) ಇತ್ತೀಚಿನ ದಿನಗಳಲ್ಲಿ ಪತ್ರಿಕೆಗಳಲ್ಲಿ ವರದಿಯಾದಂತೆ ಬೆಂಗಳೂರು–ಗುವಾಹಟಿ ರೈಲಿನಲ್ಲಿ ಬೆಂಗಳೂರಿಗೆ ಬಂದಿರುವ ೨೫೬ ಮಕ್ಕಳು ರಾಜ್ಯದ ಯಾವ ಮದರಸಗಳಲ್ಲಿ ಶಿಕ್ಷಣ ಪಡೆಯುತ್ತಿದ್ದಾರೆ? (ವಿವರ ನೀಡುವುದು)

## ಗ್ರಂಥಪಾಲಕರ ಹುದ್ದೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೫೩೦ (೪೧೩೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಅನುದಾನಿತ ಹಾಗೂ ಅನುದಾನ ರಹಿತ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಈ ಕಾಲೇಜುಗಳಲ್ಲಿ ಖಾಲಿ ಇರುವ ಗ್ರಂಥಪಾಲಕರ ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಖಾಲಿ ಇರುವ ಗ್ರಂಥಪಾಲಕರ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು;

(ಈ) ಯಾವ ದಿನಾಂಕದೊಳಗೆ ಖಾಲಿ ಇರುವ ಗ್ರಂಥಪಾಲಕರ ಹುದ್ದೆಗಳಿಗೆ ನೇಮಕ ಮಾಡಲು ಪರವಾನಿಗೆ ನೀಡಲಾಗುವುದು?

## ಉದ್ಯೋಗ ಖಾತ್ರಿ ಯೋಜನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೫೩೧ (೪೧೪೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) MGNREGA ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ತೆಗೆದುಕೊಳ್ಳಬಹುದಾದ ಕಾಮಗಾರಿಗಳು ಯಾವುವು;

(ಆ) ಸದರಿ ಕಾಮಗಾರಿಗಳ ಸಾಮಗ್ರಿ ಹಾಗೂ ಕೂಲಿ ಅನುಪಾತವೆಷ್ಟು; (ವಿವರವಾಗಿ ಇಲಾಖೆವಾರು, ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಇಲ್ಲಿಯವರೆಗೆ ಕೇಂದ್ರ ಸರ್ಕಾರದಿಂದ ಈ ಯೋಜನೆಗೆ ಎಷ್ಟು ಹಣ ಬಂದಿದೆ?

## ಶಾಲೆಗಳ ಕಟ್ಟಡ ಶಿಥಿಲವಾಗಿರುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೩೫೩೨ (೪೧೪೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹಾಲಿ ಸರ್ಕಾರಿ ಪ್ರಾಥಮಿಕ, ಹಿರಿಯ ಪ್ರಾಥಮಿಕ ಮತ್ತು ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಶಾಲೆಗಳಲ್ಲಿ ಎಷ್ಟು ಶಾಲೆಗಳ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿವೆ; ಇವುಗಳನ್ನು ಹೊಸದಾಗಿ ನಿರ್ಮಿಸಲು ಸರ್ಕಾರ ಯಾವ ಕಾರ್ಯಕ್ರಮ ಹಾಕಿಕೊಂಡಿದೆ;

(ಇ) ಈ ಸಂಬಂಧ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಬಾಕಿ ಬರಬೇಕಾಗಿರುವ ಅನುದಾನ ಎಷ್ಟು; ಇದನ್ನು ಯಾವ ಮೂಲದಿಂದ ಭರಿಸಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಕೊಡಲಿಪೆಟ್ಟು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೩೩ (೪೧೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆಗಳು ಆಂಗ್ಲ ಮಾಧ್ಯಮ ಶಾಲೆಗಳಾಗಿ ಪರಿವರ್ತನೆಗೊಂಡಿವೆ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಆ) ಈ ಎರಡು ಜಿಲ್ಲೆಗಳಲ್ಲಿ ಎಷ್ಟು ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಗಳಿಗೆ ಅನುಮತಿ ನೀಡಲಾಗಿದೆ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಇ) ಹೊಸ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಗಳಿಗೆ ಅನುಮತಿ ನೀಡುವುದರಿಂದ ಹಾಗೂ ಕನ್ನಡ ಮಾಧ್ಯಮ ಶಾಲೆಗಳನ್ನು ಆಂಗ್ಲ ಮಾಧ್ಯಮ ಶಾಲೆಗಳಾಗಿ ಪರಿವರ್ತಿಸಲು ಅನುಮತಿ ನೀಡುವುದರಿಂದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಹೊಡೆತ ಬೀಳುವುದಿಲ್ಲವೇ; ಇದು ಸರ್ಕಾರದ ನೀತಿಗೆ ವಿರುದ್ಧವಲ್ಲವೆ; ಮಾತೃ ಭಾಷಾ ಶಿಕ್ಷಣಕ್ಕೆ ಕೊಡಲಿಪೆಟ್ಟು ಬೀಳುವುದಿಲ್ಲವೆ?

## ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಪದವಿ ಪಡೆದವರನ್ನು ಉಪನ್ಯಾಸಕರಾಗಿ ನೇಮಕಾತಿ ಮಾಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೩೪ (೪೧೨೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಂ.ಎ. ಸ್ನಾತಕೋತ್ತರ ಪದವಿ ಪಡೆದವರನ್ನು ಕಾಲೇಜು ಉಪನ್ಯಾಸಕರನ್ನಾಗಿ ನೇಮಕ ಮಾಡುತ್ತಿದ್ದು ಮುಕ್ತ ವಿಶ್ವವಿದ್ಯಾಲಯದಲ್ಲಿ ಎಂ.ಎ. ಸ್ನಾತಕೋತ್ತರ ಪದವಿ ಪಡೆದವರನ್ನು ಉಪನ್ಯಾಸಕ ಹುದ್ದೆಗೆ ನೇಮಕಾತಿ ಮಾಡಲಾಗುವುದೆ;

(ಆ) ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಯಾವುದೇ ಪೂರ್ವ ಶಿಕ್ಷಣವಿಲ್ಲದೆ ವಯಸ್ಸಿನ ಆಧಾರದ ಮೇಲೆ ನೇರವಾಗಿ ಎಂ.ಎ. ಪದವಿ ಪಡೆಯುವ ಅವಕಾಶವಿರುವುದರಿಂದ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುವುದಕ್ಕೆ ಅನುಭವದ ಕೊರತೆ ಉಂಟಾಗುವುದಿಲ್ಲವೆ;

(ಇ) ಇದರಿಂದ ಶಿಕ್ಷಣದ ಮಟ್ಟ ಕುಸಿದು ವಿದ್ಯಾರ್ಥಿಗಳಿಗೆ ಅನ್ಯಾಯವಾಗುವ ವಿಚಾರದಲ್ಲಿ ಸರ್ಕಾರದ ನಿಲುವೇನು?

## ಕ್ರಿಶ್ಚಿಯನ್ ಅಭಿವೃದ್ಧಿ ಪರಿಷತ್ತನ್ನು ನಿಗಮವಾಗಿ ಮೇಲ್ದರ್ಜೆಗೆ ಏರಿಸುವ ಬಗ್ಗೆ

**ಶ್ರೀ ಐವನ್ ಡಿ’ ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೫೩೫ (೩೮೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕ್ರಿಶ್ಚಿಯನ್ ಅಭಿವೃದ್ಧಿ ಪರಿಷತ್ತನ್ನು ನಿಗಮವನ್ನಾಗಿ ಪರಿವರ್ತಿಸಬೇಕೆನ್ನುವ ಬೇಡಿಕೆಯನ್ನು ಸರ್ಕಾರ ಪರಿಗಣಿಸದೇ ಇರಲು ಕಾರಣವೇನು; (ವಿವರ ಒದಗಿಸುವುದು)

(ಆ) ಯಾವ ಯಾವ ಸಮುದಾಯಗಳಿಗೆ ಅಭಿವೃದ್ಧಿ ನಿಗಮಗಳನ್ನು ರಚಿಸಲಾಗಿದೆ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿರುವ ಜಾತಿವಾರು ನಿಗಮಗಳ ಸಂಖ್ಯೆ ಎಷ್ಟು; ೨೦೧೬–೧೭ ಮತ್ತು ೨೦೧೭–೧೮ನೇ ಸಾಲುಗಳಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು; (ವಿವರ ಒದಗಿಸುವುದು)

(ಈ) ಕ್ರಿಶ್ಚಿಯನ್ ಅಭಿವೃದ್ಧಿ ಪರಿಷತ್ತನ್ನು ನಿಗಮವನ್ನಾಗಿ ಮೇಲ್ದರ್ಜೆಗೇರಿಸಲು ಇಲಾಖೆಗಿರುವ ತೊಂದರೆಗಳೇನು; (ವಿವರ ಒದಗಿಸುವುದು)

(ಉ) ಪ್ರಸ್ತುತ ಕ್ರಿಶ್ಚಿಯನ್ ಅಭಿವೃದ್ಧಿ ಪರಿಷತ್ತಿನ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಯಾರು; ಪ್ರಸ್ತುತ ಸದಸ್ಯರುಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೫೩೬ (೩೮೮೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿವೆ; ಸದರಿ ಶಾಲೆಗಳು ಪ್ರಾರಂಭಗೊಂಡಿದ್ದು ಯಾವಾಗ; ಉದ್ದೇಶವೇನು; (ವಿವರ ಒದಗಿಸುವುದು)

(ಆ) ಮಂಗಳೂರಿನ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಯಲ್ಲಿರುವ ಅಧ್ಯಾಪಕರ ಸಂಖ್ಯೆ ಎಷ್ಟು; ಖಾಲಿಯಿರುವ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಇ) ಸರ್ಕಾರಿ ಕಿರಿಯು ತಾಂತ್ರಿಕ ಶಾಲೆಯುಲ್ಲಿ ಗುತ್ತಿಗೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಎರಡು ವರ್ಷಗಳಿಂದ ಸಂಬಳ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ಒದಗಿಸುವುದು)

(ಈ) ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಕರ್ದಿ ಇಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು; ಗುತ್ತಿಗೆ ಆಧಾರದ ಶಿಕ್ಷಕರಿಗೆ ೨೦೧೬–೧೭ ಮತ್ತು ೨೦೧೭–೧೮ನೇ ಸಾಲುಗಳಲ್ಲಿ ಪಾವತಿ ಮಾಡಿದ ವೇತನ ಎಷ್ಟು? (ವಿವರ ಒದಗಿಸುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಂಚರಿಸುತ್ತಿರುವ ನರ್ಮ್ ಯೋಜನೆಯಡಿಯ ಬಸ್ಸಿನ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೩೩೭ (೩೮೮೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನರ್ಮ್ ಯೋಜನೆಯನ್ವಯ ದಕ್ಷಿಣಕನ್ನಡ ಜಿಲ್ಲೆಯಲ್ಲಿ ಸಂಚರಿಸುತ್ತಿರುವ ಬಸ್ಸುಗಳ ಸಂಖ್ಯೆ ಎಷ್ಟು; ಬೇಡಿಕೆ ಎಷ್ಟು; (ವಿವರ ನೀಡುವುದು)

(ಆ) ಮಂಗಳೂರು ನಗರ ಸಾರಿಗೆಯಲ್ಲಿ ನರ್ಮ್ ಬಸ್ಸುಗಳಿಗೆ ಹೆಚ್ಚಿನ ಬೇಡಿಕೆ ಇದ್ದರೂ ಬಸ್ಸುಗಳನ್ನು ಒದಗಿಸದೇ ಇರಲು ಕಾರಣಗಳೇನು; (ವಿವರ ಒದಗಿಸುವುದು)

(ಇ) ರಾಜ್ಯದ ಎಲ್ಲಾ ಬಸ್ ರೂಟ್‌ಗಳನ್ನು ರಾಷ್ಟ್ರೀಕರಣ ಮಾಡುವ ಚಿಂತನೆ ಇಲಾಖೆಯಲ್ಲಿದೆಯೇ; ಇದ್ದಲ್ಲಿ, ವಿವರ ಒದಗಿಸುವುದು?

## ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಗೆ ಮೀಸಲಿಟ್ಟ ಅನುದಾನದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೩೩೮ (೩೮೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಕಾಲೋನಿಗಳ ಅಭಿವೃದ್ಧಿಗೆ ಅಲ್ಪಸಂಖ್ಯಾತ ವಿಧಾನ ಪರಿಷತ್ತಿನ ಸದಸ್ಯರುಗಳಿಗೆ ಅನುದಾನವನ್ನು ನೀಡದೇ ಇರಲು ಕಾರಣಗಳೇನು;

(ಆ) ರಾಜ್ಯದಲ್ಲಿ ಎಲ್ಲಾ ಶಾಸಕರುಗಳಿಗೆ ಕಾಲೋನಿ ಅಭಿವೃದ್ಧಿ ಅನ್ವಯ ಹಣ ಬಿಡುಗಡೆ ಮಾಡಲಾಗಿದೆಯೇ; ಒಟ್ಟು ಮೀಸಲಿಟ್ಟ ಹಣವೆಷ್ಟು; ಬಿಡುಗಡೆ ಮಾಡಿದ ಹಣವೆಷ್ಟು; (ವಿವರ ಒದಗಿಸುವುದು)

(ಇ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ೨೦೧೭–೧೮ನೇ ಸಾಲಿನ ಆಯವ್ಯಯದಲ್ಲಿ ಮೀಸಲಿಟ್ಟ ಅನುದಾನವೆಷ್ಟು; ಬಿಡುಗಡೆ ಆದ ಅನುದಾನವೆಷ್ಟು? (ವಿವರ ಒದಗಿಸುವುದು)

## ಕರ್ನಾಟಕ ರಾಜ್ಯದ ಗ್ರಂಥಾಲಯ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೫೩೪ (೪೧೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸಾರ್ವಜನಿಕ ಗ್ರಂಥಾಲಯ ಕಾಯಿದೆಯ ಪ್ರಕಾರ ರಾಜ್ಯದಲ್ಲಿ ಪ್ರಸ್ತುತ ಎಷ್ಟು ಗ್ರಂಥಾಲಯಗಳನ್ನು ಪ್ರಾರಂಭಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳ ಅವಧಿಯಲ್ಲಿ ಪ್ರಸ್ತುತ ಬೇಡಿಕೆ ಇರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಎಷ್ಟು ಹೊಸ ಗ್ರಂಥಾಲಯಗಳನ್ನು ಪ್ರಾರಂಭಿಸಲಾಗಿದೆ;

(ಈ) ಹೊಸ ಗ್ರಂಥಾಲಯುಗಳನ್ನು ಪ್ರಾರಂಭಿಸಲು ಸರ್ಕಾರವು ಅನುದಾನವನ್ನು ಮೀಸಲಿಟ್ಟಿದೆಯೇ; ಹಾಗಿದ್ದಲ್ಲಿ, ಎಷ್ಟು ಮೊತ್ತದ ಅನುದಾನವನ್ನು ಮೀಸಲಿಟ್ಟಿದೆ? ( ವಿವರ ನೀಡುವುದು)

## ಉಪಕರ ಸಂಗ್ರಹಿಸಿ ಸರ್ಕಾರಕ್ಕೆ ಜಮಾ ಮಾಡದ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೫೪೦ (೪೧೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, ೧೯೯೩ರ ಪ್ರಕರಣ ೨೦೪ರಲ್ಲಿ ಸರ್ಕಾರವು ಸ್ಥಳೀಯ ಉಪಕರ ವಿಧಿಸಲು ಅವಕಾಶವಿದೆ. ಅದರಂತೆ ಗ್ರಾಮ ಪಂಚಾಯತ್‌ಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಕಳೆದ ೦೩ ವರ್ಷಗಳಲ್ಲಿ ಸಂಗ್ರಹಿಸಿರುವ ಮೊತ್ತವೆಷ್ಟು;

(ಆ) ಉಪಕರಗಳನ್ನು ಸಂಗ್ರಹಿಸಿ ಪೂರಕ ಇಲಾಖೆಗಳಿಗೆ ಭರಣ/ಜಮಾ ಮಾಡದೆ ಬಾಕಿ ಇರುವ ಮೊತ್ತವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಉಪಕರಗಳನ್ನು ಸಂಗ್ರಹಿಸಿ ಪೂರಕ ಇಲಾಖೆಗಳಿಗೆ ಜಮಾ ಮಾಡದೆ ಬಾಕಿ ಉಳಿದಿರುವುದಕ್ಕೆ ಕಾರಣಗಳೇನು?

## ಮಕ್ಕಳ ಉಚಿತ ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೫೪೧ (೪೧೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಕ್ಕಳ ಉಚಿತ ಹಾಗೂ ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆಯ ಪ್ರಕಾರ ೬ ರಿಂದ ೧೪ ವರ್ಷದೊಳಗಿನ ಎಷ್ಟು ಮಕ್ಕಳು ಶಾಲಾ ದಾಖಲಾತಿ ಪಡೆದಿದ್ದಾರೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಾಯಿದೆಯ ೧೨(೧) ಭಾಗದ ಪ್ರಕಾರ ಯಾವುದೇ ಪ್ರದೇಶದಲ್ಲಿ ದಾಖಲಾತಿ ಪಡೆಯಲು ಆದ್ಯತೆ ಅಥವಾ ಶಾಲೆಗಳ ಕ್ರಮವನ್ನು ಅನುಸರಿಸಲಾಗುತ್ತಿದೆಯೇ;

(ಇ) ರಾಜ್ಯದ ಯಾವುದೇ ಪ್ರದೇಶದಲ್ಲಿರುವ ಸರ್ಕಾರಿ ಶಾಲೆ/ಅನುದಾನಿತ ಶಾಲೆಗಳಲ್ಲಿ ಭರ್ತಿಯಾಗದೆ ಖಾಸಗಿ ಶಾಲೆಗಳಲ್ಲಿ ಭರ್ತಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಜಿಲ್ಲಾವಾರು/ಶಾಲಾವಾರು ಅಂಕಿ ಅಂಶ ಸಹಿತ ಮಾಹಿತಿ ನೀಡುವುದು)

(ಈ) ಈ ಕಾಯಿದೆಯ ಮುಖಾಂತರ ಕಳೆದ ೫ ವರ್ಷಗಳಲ್ಲಿ ಖಾಸಗಿ ಶಾಲೆಗಳಲ್ಲಿ ಭರ್ತಿಯಾದ ಮಕ್ಕಳಿಗೆ ಎಷ್ಟು ಶಿಕ್ಷಣ ಶುಲ್ಕವನ್ನು ಭರಿಸಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

## ಗ್ರಂಥಾಲಯ ಉಪಕರ ರೂಪದಲ್ಲಿ ತೆರಿಗೆ ಸಂಗ್ರಹಿಸುವ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೫೪೨ (೪೧೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಂಥಾಲಯ ಉಪಕರ ರೂಪದಲ್ಲಿ ಸರ್ಕಾರದ ಬೊಕ್ಕಸಕ್ಕೆ ಜಮೆಯಾಗಿರುವ ಮೊತ್ತ ಎಷ್ಟು;

(ಆ) ಮೊತ್ತದಿಂದ ಯಾವ ಯಾವ ಕಾರ್ಯಗಳಿಗೆ ಎಷ್ಟು ಮೊತ್ತವನ್ನು ಖರ್ಚು ಮಾಡಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಸಂಗ್ರಹಣಾ ಕಾರ್ಯದಿಂದ ಸರ್ಕಾರದ ವಿವಿಧ ಸಂಸ್ಥೆಗಳ ಬೊಕ್ಕಸಕ್ಕೆ ವಾರ್ಷಿಕ ಜಮೆಯಾಗಬೇಕಾಗಿರುವ ಅಂದಾಜು ಮೊತ್ತವೆಷ್ಟು; (ಜಿಲ್ಲಾವಾರು/ ತಾಲ್ಲೂಕುವಾರು ಅಂಕಿ ಅಂಶ ಸಹಿತ ವಿವರ ನೀಡುವುದು)

(ಈ) ಜಮೆಯಾದ ಮೊತ್ತವನ್ನು ಸರ್ಕಾರವು ಯಾವ ಯಾವ ರೀತಿಯ ಕಾರ್ಯಗಳಿಗೆ/ ಕಾಮಗಾರಿಗಳಿಗೆ ಉಪಯೋಗಿಸಿಕೊಳ್ಳುತ್ತಿದೆ? (ಜಿಲ್ಲಾವಾರು ಪೂರ್ಣ ವಿವರ ನೀಡುವುದು)

## N.R.E.G. ಯೋಜನೆಯಡಿ ಚೆಕ್ ಡ್ಯಾಂ ದುರಸ್ಥಿ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೪೩ (೪೦೨೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) N.R.E.G. ಯೋಜನೆಯಡಿ ಚೆಕ್ ಡ್ಯಾಂಗಳ ದುರಸ್ಥಿ ಕಾರ್ಯಕ್ಕೆ ಅನುದಾನ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಆ) ಇದ್ದಲ್ಲಿ, ಚೆಕ್ ಡ್ಯಾಂಗಳ ದುರಸ್ಥಿಗೆ ಅನುಸರಿಸಲಾಗಿರುವ ಮಾನದಂಡಗಳೇನು;

(ಇ) ಎಷ್ಟು ಅನುದಾನ ನೀಡಲು ಉದ್ದೇಶಿಸಲಾಗಿದೆ?

## ಹೊಸ ಪ್ರೌಢ ಶಾಲೆಗಳ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೪೪ (೪೦೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ನೇ ಸಾಲಿನಲ್ಲಿ ಹೊಸದಾಗಿ ಪ್ರೌಢ ಶಾಲೆಗಳನ್ನು ತೆರಯುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಆ) ಇದ್ದಲ್ಲಿ, ಜಿಲ್ಲಾವಾರು ಹಂಚಿಕೆ ಮಾಡಲಾಗುವ ಶಾಲೆಗಳ ಸಂಖ್ಯೆ ಎಷ್ಟು?

## ಮುಖ್ಯೋಪಾದ್ಯಾಯರ ಹುದ್ದೆಗೆ ಬಡ್ತಿ ನೀಡುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೫೪೫ (೩೮೬೮)(ಎ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿಯ ಹೆಚ್ಚುವರಿ ಶಿಕ್ಷಕರನ್ನು ಗುರುತಿಸುವ ಪ್ರಕ್ರಿಯೆ ನಡೆದಿದೆಯೇ;

(ಆ) ಧಾರವಾಡ ಆಯುಕ್ತಾಲಯದ ವ್ಯಾಪ್ತಿಯಲ್ಲಿ ಯಾವ ಯಾವ ಜಿಲ್ಲೆಯಲ್ಲಿ ಎಷ್ಟು ಜನ ಹೆಚ್ಚುವರಿ ಶಿಕ್ಷಕರಿದ್ದಾರೆ;

(ಇ) ಹೆಚ್ಚುವರಿ ಶಿಕ್ಷಕರನ್ನು ಗುರುತಿಸುವಲ್ಲಿ ರಿಯಾಯಿತಿ ಸೌಲಭ್ಯವೇನಾದರೂ ಇದೆಯೇ; ಇದ್ದಲ್ಲಿ, ಯಾರು ಯಾರಿಗೆ ಇದೆ ಎಂಬುದನ್ನು ತಿಳಿಸುವುದು;

(ಈ) ಪ್ರೌಢ ಶಾಲಾ ಮತ್ತು ಉನ್ನತೀಕರಿಸಿದ ಪ್ರಾಥಮಿಕ ಶಾಲಾ ಶಿಕ್ಷಕರನ್ನು ವರ್ಗಾವಣೆ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವಾಗ ಪ್ರಾರಂಭ ಮಾಡಲಾಗುವುದು;

(ಉ) ಉನ್ನತೀಕರಿಸಿದ ಪ್ರಾಥಮಿಕ ಶಾಲೆಗಳಲ್ಲಿಯ ಸಹ ಶಿಕ್ಷಕರು ಗ್ರೇಡ್–೨ (ಟಿ.ಜಿ.ಟಿ)ಇವರನ್ನು ವರ್ಗಾವಣೆ ಮಾಡುವ ವಿಚಾರ ಇದೆಯೇ; ವರ್ಗಾವಣೆಗೆ ಅನುಸರಿಸುವ ಮಾನದಂಡವೇನು;

(ಊ) ಇವರಿಗೆ ಪ್ರೌಢ ಶಾಲೆಗಳಲ್ಲಿ ಬಡ್ತಿ ನೀಡಲು ಪ್ರಕ್ರಿಯೆ ಪ್ರಾರಂಭವಿದೆಯೇ; ಪ್ರಾರಂಭವಾಗದೇ ಇರುವುದಕ್ಕೆ ಕಾರಣಗಳಾವುವು;

(ಋ) ಸರ್ವೋಚ್ಚನ್ಯಾಯಾಲಯದ ಮೀಸಲಾತಿ ಆದೇಶದ ಹಿನ್ನೆಲೆಯಲ್ಲಿ ತಡೆಹಿಡಿದಿದ್ದರೆ ಭಾಷಾ ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಆಡಳಿತ ಮಂಡಳಿಯಿಂದ ಒಂದೇ ಶಾಲೆ ನಡೆಯುತ್ತಿದ್ದರೆ ಅಲ್ಲಿ ಮೀಸಲಾತಿ ನಿಯಮ ಅನ್ವಯವಾಗುತ್ತಿದೆಯೇ; ಈ ನಿಯಮವು ಅನ್ವಯವಾಗದಿದ್ದಲ್ಲಿ, ಏಕೆ ಬಡ್ತಿ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿದೆ;

(ಎ) ಸದರಿ ಆದೇಶವನ್ನು ಸರಿಪಡಿಸುವ ವಿಚಾರ ಸರ್ಕಾರಕ್ಕೆ ಇದೆಯೇ?

## ಖಾಸಗಿ ಶಾಲೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೫೪೬ (೩೮೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ, ವಿಜಯಪುರ, ಬಾಗಲಕೋಟೆ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಶಾಲಾ ಹಾಗೂ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಶಾಲಾ ಹಾಗೂ ಕಾಲೇಜುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಮೇಲ್ಕಂಡ ಖಾಸಗಿ ಶಾಲಾ ಹಾಗೂ ಕಾಲೇಜುಗಳಲ್ಲಿ ವೇತನಾನುದಾನಕ್ಕೆ ಒಳಪಟ್ಟಂತಹ ಶಾಲಾ ಹಾಗೂ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಶಾಲಾ ಹಾಗೂ ಕಾಲೇಜುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರದಿಂದ ಅನುದಾನಕ್ಕೆ ಒಳಪಟ್ಟಂತಹ ಶಾಲಾ ಹಾಗೂ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ಶಿಕ್ಷಕರ ಹುದ್ದೆಗಳು ಖಾಲಿ ಇರುವುದರಿಂದ, ಶೈಕ್ಷಣಿಕ ಪ್ರಗತಿ ಕುಂಠಿತವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಬೆಳಗಾವಿ, ವಿಜಯಪುರ, ಬಾಗಲಕೋಟೆ ಜಿಲ್ಲೆಗಳಲ್ಲಿ ಅನುದಾನಕ್ಕೆ ಒಳಪಟ್ಟಂತಹ ಶಾಲಾ ಹಾಗೂ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳೇಷ್ಟು; (ಜಿಲ್ಲಾವಾರು, ಶಾಲಾ ಹಾಗೂ ಕಾಲೇಜುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಖಾಲಿಯಿರುವ ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಜ್ಯದಲ್ಲಿ ಮುಚ್ಚಿರುವ ಮತ್ತು ಪ್ರಾರಂಭಿಸುವ ಸರ್ಕಾರಿ ಶಾಲೆಗಳ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೫೪೭ (೪೦೩೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦ ರಿಂದ ೨೦೧೭ರ ಅವಧಿಯಲ್ಲಿ ಮುಚ್ಚಿರುವ ಸರ್ಕಾರಿ ಶಾಲೆಗಳೆಷ್ಟು; ಈ ಅವಧಿಯಲ್ಲಿ ಆರಂಭಗೊಂಡಿರುವ ಖಾಸಗಿ ಶಾಲೆಗಳೆಷ್ಟು; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಆ) ಸರ್ಕಾರಿ ಶಾಲೆಗಳನ್ನು ಮುಚ್ಚಲು ಕಾರಣಗಳೇನು;

(ಇ) ಸರ್ಕಾರಿ ಶಾಲೆಗಳನ್ನು ಸಧೃಡಗೊಳಿಸಿ, ಗುಣಮಟ್ಟದ ಶಿಕ್ಷಣ ನೀಡಲು ಕನ್ನಡ ಆಭಿವೃದ್ಧಿ ಪ್ರಾಧಿಕಾರ ರಚಿಸಿದ್ದ ಸರ್ಕಾರಿ ಶಾಲೆಗಳ ಸಬಲೀಕರಣ ಸಮಿತಿ ವರದಿ ಸಲ್ಲಿಸಿದೆಯೇ; ವರದಿಯಲ್ಲಿ ಪ್ರಸ್ತಾಪಿಸಿರುವ ಶಿಫಾರಸ್ಸುಗಳು ಯಾವುವು; ವರದಿಯ ಶಿಫಾರಸ್ಸುಗಳನ್ನು ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಪದವಿ ಪೂರ್ವ ಕಾಲೇಜು ಮತ್ತು ಪ್ರೌಢ ಶಾಲೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೫೪೮ (೩೮೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗದಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜುಗಳು ಮತ್ತು ಪ್ರೌಢ ಶಾಲೆಗಳಿಗೆ ಸ್ವಂತ ಕಟ್ಟಡ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ವಿಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢ ಶಾಲೆಗಳ ಮೂಲಭೂತ ಸೌಕರ್ಯಗಳಿಗೆ ನೀಡಿರುವ ಅನುದಾನದ ಮೊತ್ತವೆಷ್ಟು;

(ಇ) ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು? (ವಿವರ ನೀಡುವುದು)

## ಮುಖ್ಯೋಪಾದ್ಯಾಯರ ಹುದ್ದೆಗೆ ಬಡ್ತಿ ನೀಡುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೫೪೯ (೩೮೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ವ್ಯಾಪ್ತಿಯ ಬೆಳಗಾವಿ ವಿಭಾಗದಲ್ಲಿ ಪ್ರೌಢ ಶಾಲಾ ಸಹ ಶಿಕ್ಷಕರುಗಳಿಗೆ ಮುಖ್ಯೋಪಾಧ್ಯಾಯರ ಹುದ್ದೆಗೆ ಬಡ್ತಿ ನೀಡುವ ವಿಚಾರ ಸರ್ಕಾರದ ಮುಂದಿದೆಯೇ;

(ಆ) ಬಡ್ತಿ ನೀಡುವುದಾದರೆ ಯಾವ ಅನುಪಾತದಲ್ಲಿ ನೀಡುವಿರಿ; ಯಾವಾಗ ನೀಡಲಾಗುವುದು;

(ಇ) ಆಯುಕ್ತಾಲಯ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಮಂಜೂರಾದ ಮುಖ್ಯೋಪಾಧ್ಯಾಯರ ಹುದ್ದೆಗಳ ಸಂಖ್ಯೆ ಎಷ್ಟು;

(ಈ) ಇಲಾಖೆಯ ನಿಯಮದಂತೆ ಖಾಯಂ ಹುದ್ದೆಗಳ ಅನುಪಾತವನ್ನು ಕಾಯ್ದುಕೊಳ್ಳಲಾಗಿದೆಯೇ?

## ಕೆ.ಆರ್.ಐ.ಡಿ.ಎಲ್., ಅನುದಾನದ ಅಕ್ರಮ ರೇವಣಿ ಮತ್ತು ಅಕ್ರಮ ವರ್ಗಾವಣೆ ಕುರಿತು

**ಶ್ರೀ. ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೫೦ (೪೦೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ನಿಗಮದ ಅನುದಾನದ ಸಮರ್ಪಕ ಬಳಕೆಯಲ್ಲಿ ಇಲಾಖೆಯು ವಿಫಲವಾಗಿರುವುದು ನಿಜವೇ;

(ಆ) ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ನಿಗಮದ ಅನುದಾನವನ್ನು ಅಕ್ರಮವಾಗಿ ಠೇವಣಿ ಇರಿಸಿರುವುದು ಹಾಗೂ ಅಕ್ರಮ ಹಣ ವರ್ಗಾವಣೆ ಮಾಡಿರುವುದು ನಿಜವೇ; ಒಟ್ಟು ಎಷ್ಟು ಮೊತ್ತ ಅಕ್ರಮವೆಸಗಲಾಗಿದೆ; ಅಕ್ರಮಕ್ಕೆ ಕಾರಣೀಕರ್ತರಾದ ಅಧಿಕಾರಿಗಳ್ಯಾರು; ಅಂಥವರ ವಿರುದ್ಧ ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಯ ಯಾವ ಯಾವ ನಿಗಮದಲ್ಲಿ ಅನುದಾನವನ್ನು ಠೇವಣಿ ಇರಿಸಲಾಗಿದೆ; ಎಷ್ಟು ವರ್ಷದಿಂದ ಹಾಗೂ ಎಷ್ಟು ಅನುದಾನವನ್ನು ಠೇವಣಿ ಇರಿಸಲಾಗಿದೆ;

(ಈ) ಅಕ್ರಮ ಠೇವಣಿಯಿರಿಸಿ ಯೋಜನೆಗಳಿಗೆ ಅನುದಾನವಿಲ್ಲದೆ ಯೋಜನೆಗಳ ಕುಂಠಿತ ಮತ್ತು ಅನುದಾನವನ್ನು ಸಂಪೂರ್ಣವಾಗಿ ವಿನಿಯೋಗಿಸಲು ಸರ್ಕಾರ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಅಕ್ರಮ ಠೇವಣಿ ಸೇರಿದಂತೆ ಇಲಾಖೆಯ ವಿವಿಧ ಅವ್ಯವಹಾರ ಮತ್ತು ಲೋಪದ ತನಿಖೆಗಾಗಿ ಎಷ್ಟು ಸಮಿತಿಗಳನ್ನು ರಚಿಸಲಾಗಿದೆ; ಯಾವಾಗ ರಚಿಸಲಾಗಿದೆ; ಸಮಿತಿಯ ವರದಿಗಳೇನು; ಅದರಂತೆ ಕೈಗೊಂಡ ಕ್ರಮಗಳೇನು ?

## ಸಣ್ಣ ಪ್ರಕರಣಕ್ಕೆ ಗಂಭೀರ ಶಿಕ್ಷೆ

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೫೧ (೪೦೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಸ್ತರಗಳಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಅಮಾನತ್ತು ಮಾಡಲಾದ/ ವಜಾ ಮಾಡಲಾದ ನೌಕರರ ಸಂಖ್ಯೆ ಎಷ್ಟು; ಅವರ ಮೇಲಿನ ಆಪಾದನೆಗಳೇನು; ಅಮಾನತ್ತು ಮಾಡಲಾದ ನೌಕರರಲ್ಲಿ ಎಷ್ಟು ಮಂದಿಯನ್ನು ಯಾವ ಯಾವ ಹುದ್ದೆಯಲ್ಲಿ ಮುಂದುವರೆಸಲಾಗಿದೆ;

(ಆ) ಅನೇಕ ಗಂಭೀರವಲ್ಲದ ಸಣ್ಣ ಪ್ರಕರಣಗಳಲ್ಲಿ ನೌಕರರನ್ನು ಸೇವೆಯಿಂದ ವಜಾ ಮಾಡುವಂತಹ ಗಂಭೀರ ಶಿಕ್ಷೆಗೆ ಒಳಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಲೋಕಾಯುಕ್ತ/ಎಸಿಬಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರು ಮತ್ತು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ವಿರುದ್ಧ ದಾಖಲಾದ ದೂರಿನ ಪ್ರಕರಣಗಳ ಸಂಖ್ಯೆ ಎಷ್ಟು; ಸರ್ಕಾರದಿಂದ ಅನುಮತಿಸಲಾದ ಪ್ರಕರಣಗಳೆಷ್ಟು;

(ಈ) ಕೆಲವು ಗಂಭೀರವಲ್ಲದ ಪ್ರಕರಣಗಳಲ್ಲಿ ಲೋಕಾಯುಕ್ತ ಸೇರಿದಂತೆ, ಇತರ ತನಿಖಾ ಸಂಸ್ಥೆಗಳು, ತನಿಖೆಯ ನೆಪದಲ್ಲಿ ನೌಕರರಲ್ಲಿ ಮಾನಸಿಕ ಒತ್ತಡ ಸೃಷ್ಠಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## RTE ಕಾಯಿದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೫೨ (೪೦೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೪ ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕಾಗಿ ಸರ್ಕಾರ ಕಾಯ್ದಿರಿಸಿದ ಅನುದಾನ ಎಷ್ಟು; ಖರ್ಚಾದ ಅನುದಾನವೆಷ್ಟು ; (ವರ್ಷಾವಾರು ವಿವರ ನೀಡುವುದು)

(ಆ) ಆರ್.ಟಿ.ಇ., ಕಾಯಿದೆ ಅನುಷ್ಠಾನಕ್ಕಾಗಿ ಯೋಜನೆ ಪ್ರಾರಂಭದಿಂದ ಇಲ್ಲಿಯವರೆಗೆ ಖರ್ಚಾದ ಅನುದಾನವೆಷ್ಟು ; (ವರ್ಷಾವಾರು ವಿವರ ನೀಡುವುದು)

(ಇ) ಆರ್.ಟಿ.ಇ., ಕಾಯ್ದೆಯಡಿ ಕಳೆದ ವರ್ಷ ಮತ್ತು ಪ್ರಸಕ್ತ ಸಾಲಿನಲ್ಲಿ ಲಭ್ಯವಿದ್ದ ಸೀಟುಗಳೆಷ್ಟು; ಭರ್ತಿಯಾದ ಸೀಟುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಸೀಟು ಹಂಚಿಕೆಯ ಮಾನದಂಡಗಳೇನು ; (ಮಾರ್ಗಸೂಚಿ ಪ್ರತಿ ಒದಗಿಸುವುದು)

(ಈ) ಆರ್.ಟಿ.ಇ., ಸೀಟು ಹಂಚಿಕೆಯಲ್ಲಿನ ಗೊಂದಲಗಳನ್ನು ನಿವಾರಿಸಲು ಹಾಗೂ ಕಾಯಿದೆಯ ಸಮರ್ಪಕ ಅನುಷ್ಠಾನಕ್ಕಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) RTE ಯೋಜನೆಯನ್ನು ಸ್ಥಗಿತಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; RTE ಮುಂದುವರಿಸುವ ಬಗ್ಗೆ ಸರ್ಕಾರದ ನಿಲುವೇನು; ಈ ಕುರಿತು ಗೊಂದಲ ಪರಿಹಾರಕ್ಕೆ ಸರ್ಕಾರದ ಕ್ರಮಗಳೇನು ? (ವಿವರ ನೀಡುವುದು)

**ಸರ್ಕಾರಿ ಶಾಲೆಗಳಿಗೆ ಅಗತ್ಯ ಮೂಲ ಸೌಕರ್ಯ ಒದಗಿಸುವ ಬಗ್ಗೆ**

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೫೩ (೪೦೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಸರ್ಕಾರಿ ಶಾಲೆಯ ಮೂಲಭೂತ ಸೌಕರ್ಯಕ್ಕಾಗಿ ವೆಚ್ಚ ಮಾಡಿದ ಅನುದಾನವೆಷ್ಟು; ಕೇಂದ್ರ ಹಾಗೂ ರಾಜ್ಯದ ಪಾಲೆಷ್ಟು;

(ಆ) ರಾಜ್ಯದಲ್ಲಿರುವ ಖಾಸಗಿ ಹಾಗೂ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು; (ಕಿರಿಯ, ಹಿರಿಯ ಮತ್ತು ಪ್ರೌಢ)

(ಇ) ಎಷ್ಟು ಶಾಲೆಗಳಲ್ಲಿ ಬಾಲಕ ಮತ್ತು ಬಾಲಕಿಯರಿಗೆ ಪ್ರತ್ಯೇಕ ಶೌಚಾಲಯವಿದೆ ; ಎಷ್ಟು ಶಾಲೆಗಳಲ್ಲಿ ನೀರಿನ ವ್ಯವಸ್ಥೆಯಿದೆ; (ತಾಲ್ಲೂಕುವಾರು, ಜಿಲ್ಲಾವಾರು ವಿವರದೊಂದಿಗೆ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಪಂಚಾಯತ್‌ವಾರು ವಿವರ ನೀಡುವುದು ಹಾಗೂ ಸರ್ಕಾರಿ ಮತ್ತು ಖಾಸಗಿ ಶಾಲೆಯ ಪ್ರತ್ಯೇಕ ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷದಲ್ಲಿ ಮುಚ್ಚಲಾದ ಮತ್ತು ವಿಲೀನಗೊಳಿಸಲಾದ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು; ಹೊಸದಾಗಿ ಅನುಮತಿ ನೀಡಲಾದ ಖಾಸಗಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಪಂಚಾಯತ್‌ಗೊಂದು ಮಾದರಿ ಶಾಲೆ ಪ್ರಾರಂಭಿಸಲಾಗಿದೆಯೇ; ಸರ್ಕಾರದ ಈ ಯೋಜನೆ ಯಾವ ಹಂತದಲ್ಲಿದೆ; ಯೋಜನೆ ವಿಳಂಬಕ್ಕೆ ಕಾರಣಗಳೇನು ;ಯೋಜನೆ ಕಾರ್ಯಗತಗೊಳಿಸುವುದು ಯಾವಾಗ ;

(ಊ) ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿ ಸಂಖ್ಯೆಗನುಗುಣವಾಗಿ ಶಿಕ್ಷಕರು, ಕೊಠಡಿ, ಕುಡಿಯುವ ನೀರು, ಶೌಚಾಲಯ ಸೇರಿದಂತೆ ಉತ್ತಮ ಮೂಲ ಸೌಕರ್ಯ ಒದಗಿಸುವುದರೊಂದಿಗೆ ಸರ್ಕಾರಿ ಶಾಲೆಗೆ ಹೆಚ್ಚೆಚ್ಚು ಮಕ್ಕಳು ದಾಖಲಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಉಡುಪಿ ಜಿಲ್ಲೆಯ ಕುಂದಾಪುರದಲ್ಲಿ ಪ್ರಾದೇಶಿಕ ಸಾರಿಗೆ ಕೇಂದ್ರ ಪ್ರಾರಂಭಿಸುವ ಕುರಿತು

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೫೪ (೪೦೫೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಲ್ಲೆಲ್ಲಿ ಹೊಸದಾಗಿ "ಪ್ರಾದೇಶಿಕ ಸಾರಿಗೆ ಕಛೇರಿ" ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ;

(ಆ) ಉಡುಪಿ ಜಿಲ್ಲೆಯ ಕುಂದಾಪುರದಲ್ಲಿ ಹೊಸದಾಗಿ ಪ್ರಾದೇಶಿಕ ಸಾರಿಗೆ ಕಛೇರಿ ಪ್ರಾರಂಭಿಸಲು ಸರ್ಕಾರಕ್ಕಿರುವ ತೊಡಕುಗಳೇನು; ಈ ಬಗ್ಗೆ ಸರ್ಕಾರದ ನಿಲುವೇನು ;

(ಇ) ಕುಂದಾಪುರದಲ್ಲಿ RTO ಕೇಂದ್ರ ಪ್ರಾರಂಭಿಸಲು ಸರ್ಕಾರ ಯಾವ ಕಾಲಮಿತಿಯಲ್ಲಿ ಏನೇನು ಕ್ರಮಗಳನ್ನು ಕೈಗೊಳ್ಳಲಿದೆ ?

## ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್.) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೫೫ (೩೯೧೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸರ್ಕಾರದ ಅಧೀನದಲ್ಲಿರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು;

(ಆ) ಈ ವಿಶ್ವವಿದ್ಯಾಲಯಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಯಿಂದ ಹಿಡಿದು ಪ್ರೊಫೆಸರ್ ಹುದ್ದೆಯವರೆಗೆ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿಶ್ವವಿದ್ಯಾಲಯಗಳವಾರು ಮಾಹಿತಿ ನೀಡುವುದು)

(ಇ) ಈ ಹುದ್ದೆಗಳು ಎಷ್ಟು ವರ್ಷಗಳಿಂದ ಖಾಲಿ ಇವೆ; (ಮಾಹಿತಿ ನೀಡುವುದು)

(ಈ) ಖಾಲಿ ಇರುವ ಬೋಧಕೇತರ ಹುದ್ದೆಗಳೆಷ್ಟು; ಎಷ್ಟು ವರ್ಷಗಳಿಂದ ಈ ಹುದ್ದೆಗಳು ಖಾಲಿ ಇವೆ; (ಮಾಹಿತಿಯನ್ನು ವಿಶ್ವವಿದ್ಯಾಲಯಗಳವಾರು ನೀಡುವುದು)

(ಉ) ಹಲವಾರು ವರ್ಷಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;(ವಿವರ ನೀಡುವುದು)

(ಊ) ಇರುವ ವಿಶ್ವವಿದ್ಯಾಲಯಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಕೊರತೆ ಇರಬೇಕಾದರೆ ಹೊಸ ಹೊಸ ವಿಶ್ವವಿದ್ಯಾಲಯಗಳನ್ನು ಸರ್ಕಾರ ತೆರೆಯಲು ಮುಂದಾಗಿರುವುದು ಸರಿಯೇ? (ವಿವರ ನೀಡುವುದು)

## ತುಮಕೂರು ಜಿಲ್ಲೆಯಲ್ಲಿರುವ ಡಿಪೋಗಳ ಮತ್ತು ಬಸ್ ನಿಲ್ದಾಣಗಳಲ್ಲಿರುವ ಸೌಕರ್ಯಗಳ ಬಗ್ಗೆ

**ಶ್ರೀ ಕಾಂತರಾಜು** (ಬಿ.ಎಂ.ಎಲ್.) (**ಸ್ಥಳೀಯ ಸಂಸ್ಥೆಗಳ ಕ್ಷೇತ್ರ**) –

೩೫೫೬ (೩೯೦೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿರುವ ಬಸ್ ನಿಲ್ದಾಣ ಮತ್ತು ಡಿಪೋಗಳ ಸಂಖ್ಯೆ ಎಷ್ಟು;

(ಆ) ಈ ಡಿಪೋಗಳಲ್ಲಿ ಮತ್ತು ಬಸ್ ನಿಲ್ದಾಣಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಜಿಲ್ಲೆಯಲ್ಲಿರುವ ಅನೇಕ ಬಸ್ ನಿಲ್ದಾಣಗಳು ಗುಂಡಿಬಿದ್ದು, ದೂಳುಮಯವಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ರಾಜ್ಯದ ಪ್ರಾಥಮಿಕ ಮತ್ತು ಪದವಿಪೂರ್ವ ಕಾಲೇಜಿನವರೆಗೆ ಕ್ರೀಡಾ ಶುಲ್ಕ ವಸೂಲಾತಿ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್.) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೫೭ (೩೯೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಶಾಲೆಯಿಂದ ಹಿಡಿದು ಪದವಿ ಪೂರ್ವ ಕಾಲೇಜಿನವರೆಗೆ ವಿದ್ಯಾರ್ಥಿಗಳು (ಸರ್ಕಾರಿ/ಖಾಸಗಿ/ಅನುದಾನ ವಿದ್ಯಾ ಸಂಸ್ಥೆಗಳು ಸೇರಿದಂತೆ) ಶಾಲಾ ಕಾಲೇಜುಗಳಿಗೆ ದಾಖಲಾಗುವಾಗ ಕ್ರೀಡಾ ಶುಲ್ಕವನ್ನು ಎಷ್ಟು ಪ್ರಮಾಣದಲ್ಲಿ ವಸೂಲಿ ಮಾಡಲಾಗುತ್ತಿದೆ;

(ಆ) ರಾಜ್ಯದಾದ್ಯಂತ ವರ್ಷಕ್ಕೆ ಈ ವಸೂಲಾತಿಯಾದ ಕ್ರೀಡಾ ಶುಲ್ಕದ ಒಟ್ಟು ಮೊತ್ತವೆಷ್ಟು; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ವಸೂಲಾದ ಕ್ರೀಡಾ ಶುಲ್ಕದ ಒಟ್ಟು ಮೊತ್ತವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ವಸೂಲಾದ ಕ್ರೀಡಾ ಶುಲ್ಕದಲ್ಲಿ ಕಳೆದ ೩ ವರ್ಷದಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಬಳಿಸಿಕೊಂಡ ಮೊತ್ತವೆಷ್ಟು; (ವಿವರ ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ವಸೂಲಾದ ಕ್ರೀಡಾ ಶುಲ್ಕದ ಮೊತ್ತವನ್ನು ಕ್ರೀಡಾ ಚಟುವಟಿಕೆಗಳಿಗಲ್ಲದೆ ಬೇರೆ ಉದ್ದೇಶಕ್ಕೆ ಬಳಸಿಕೊಂಡಿರುವ ಮೊತ್ತವೆಷ್ಟು; (ವಿವರ ನೀಡುವುದು)

(ಊ) ಶಾಲಾ ವಿದ್ಯಾರ್ಥಿಗಳು ಹಲವಾರು ಕ್ರೀಡೆಗಳಲ್ಲಿ ಪ್ರತಿಭೆ ಹೊಂದಿದ್ದರೂ ಸಹ ಆರ್ಥಿಕ ಮುಗ್ಗಟ್ಟಿನ ಕಾರಣ ರಾಜ್ಯ/ಅಂತರ್ ರಾಜ್ಯ/ದೇಶ ವಿದೇಶಗಳ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸದೆ ವಂಚಿತರಾದವರಿಗೆ ಸರ್ಕಾರ ಯಾವ ರೀತಿಯಲ್ಲಿ ಪ್ರೋತ್ಸಾಹಿಸುತ್ತಿದೆ? (ವಿವರ ನೀಡುವುದು)

## ಬೋಧಕ/ಬೋಧಕೇತರ ಸಿಬ್ಬಂದಿಗಳ ಕೊರತೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೫೮ (೪೦೪೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾತೆ ಅಕ್ಕ ಮಹಾದೇವಿ ಹೆಸರಿನಲ್ಲಿ ಸ್ಥಾಪಿಸಿರುವ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅಲ್ಲಿನ ಬೋಧಕ/ಬೋಧಕೇತರ ಸಿಬ್ಬಂದಿಗಳ ಕೊರತೆಯಿಂದ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದರೂ ನೇಮಕಾತಿ ಪ್ರಕ್ರಿಯೆಗೆ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು;

(ಇ) ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯಕ್ಕೆ ವಿವಿಧ ವಿಭಾಗಗಳಿಗೆ ಬೋಧಕರ ಹಾಗೂ ಬೋಧಕೇತರ ಸಿಬ್ಬಂದಿಗಳ ಮಂಜೂರಾದ ಒಟ್ಟು ಹುದ್ದೆಗಳೆಷ್ಟು; (ವಿಷಯುವಾರು/ವರ್ಗಾವಾರು, ವಿಭಾಗದ ಮುಖ್ಯಸ್ಥರನ್ನೊಳಗೊಂಡಂತೆ ವಿವರ ನೀಡುವುದು)

(ಈ) ಹಾಲಿ ಕಾರ್ಯ ನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು/ ವರ್ಗಾವಾರು, ವಿಭಾಗದ ಮುಖ್ಯಸ್ಥರನ್ನೊಳಗೊಂಡಂತೆ ವಿವರ ನೀಡುವುದು)

(ಉ) ಸದರಿ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು; (ವಿವರ ನೀಡುವುದು)

(ಊ) ಸದರಿ ಮಹಿಳಾ ವಿಶ್ವವಿದ್ಯಾಲಯಕ್ಕೆ ಮೂಲ ಸೌಲಭ್ಯ ಅಭಿವೃದ್ಧಿಗೆ ನೀಡಲಾಗಿರುವ ಅನುದಾನ ಎಷ್ಟು ; ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ? (ವಿವರ ಒದಗಿಸುವುದು)

## ಸರ್ವ ಶಿಕ್ಷಣ ಅಭಿಯಾನ ಯೋಜನೆ ವಿಫಲವಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೫೯ (೪೦೪೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಕ್ಕಳ ಕಲಿಕಾ ಗುಣಮಟ್ಟವನ್ನು ಹೆಚ್ಚಿಸುವ ಮತ್ತು ಶಾಲೆ ತೊರೆದ ಮಕ್ಕಳನ್ನು ಮರಳಿ ಮುಖ್ಯವಾಹಿನಿಗೆ ತರುವಲ್ಲಿ ರೂಪಿಸಿರುವ ಸರ್ವಶಿಕ್ಷಣ ಅಭಿಯಾನ ಯೋಜನೆಯು ರಾಜ್ಯದಲ್ಲಿ ಕಳಪೆ ಸಾಧನೆ ಮಾಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ವಶಿಕ್ಷಣ ಅಭಿಯಾನದ ಯೋಜನೆಯಡಿಯಲ್ಲಿ ನಿಗದಿಪಡಿಸಲಾಗಿದ್ದ ಗುರಿ ತಲುಪಲು ಕರ್ನಾಟಕವು ಸಂಪೂರ್ಣ ವಿಫಲವಾಗಲು ಕಾರಣಗಳೇನು; (ವಿವರ ನೀಡುವುದು)

(ಇ) ೨೦೧೪–೨೦೧೫ ರಿಂದ ೨೦೧೬–೨೦೧೮ನೇ ಸಾಲಿನಲ್ಲಿ ಸರ್ವಶಿಕ್ಷಣ ಅಭಿಯಾನದಡಿ ರಾಜ್ಯವು ಹಮ್ಮಿಕೊಂಡ ಕಾರ್ಯಕ್ರಮಗಳೇನು; ಸದರಿ ಕಾರ್ಯಕ್ರಮಗಳಿಗೆ ಖರ್ಚು ಮಾಡಿದ ಅನುದಾನವೆಷ್ಟು; ಇದರಲ್ಲಿ, ಕೇಂದ್ರದಿಂದ ನೀಡಿದ ಅನುದಾನವೆಷ್ಟು ? (ವಿವರ ನೀಡುವುದು)

## ಮೋಡ ಬಿತ್ತನೆ ಯೋಜನೆಯ ಹೆಸರಿನಲ್ಲಿ ಕೋಟ್ಯಾಂತರ ರೂಪಾಯಿಗಳು ಪೋಲಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೬೦ (೪೦೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೋಡ ಬಿತ್ತನೆ ಹೆಸರಿನಲ್ಲಿ ಕೋಟ್ಯಾಂತರ ರೂಪಾಯಿ ಹಣವನ್ನು ಲೂಟಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮೋಡ ಬಿತ್ತನೆ ಹೆಸರಿನಲ್ಲಿ ಸರ್ಕಾರದ ಬೊಕ್ಕಸಕ್ಕಾಗುವ ನಷ್ಟವನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಮೋಡ ಬಿತ್ತನೆ ಯೋಜನೆಗೆ ಸರ್ಕಾರವು ಯಾವ ಲೆಕ್ಕ ಶೀರ್ಷಿಕೆಯಡಿ ಒಟ್ಟು ಎಷ್ಟು ಅನುದಾನ ಮೀಸಲಿರಿಸಿತ್ತು; ಖರ್ಚಾಗಿರುವ ಹಣ ಎಷ್ಟು; (ವಿವರ ನೀಡುವುದು)

(ಇ) ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಮೋಡ ಬಿತ್ತನೆ ಮಾಡಲಾಗಿದೆ; ಮೋಡ ಬಿತ್ತನೆ ಮಾಡಿದ ಸ್ಥಳಗಳಲ್ಲಿ ಮಳೆಯಾಗಿದೆಯೇ; ಸದರಿ ಸ್ಥಳಗಳಲ್ಲಿ ಎಷ್ಟೆಷ್ಟು ಸೆಂ.ಮೀ ಮಳೆಯಾಗಿದೆ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಇನ್ನೂ ಮೋಡ ಬಿತ್ತನೆ ಕಾರ್ಯ ನಡೆಯುತ್ತಿದೆಯೇ; ಪ್ರಾರಂಭಗೊಂಡಿದ್ದು ಯಾವಾಗ; ಮೋಡ ಬಿತ್ತನೆ ಕಾರ್ಯ ನಿಲ್ಲಿಸಲಾಗಿದ್ದು ಯಾವಾಗ? (ವಿವರ ನೀಡುವುದು)

## ರಾಜ್ಯದಲ್ಲಿ ಶಿಥಿಲಗೊಂಡ ಶಾಲಾ ಕಟ್ಟಡಗಳು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೬೧ (೪೦೪೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಿಥಿಲಾವಸ್ಥೆಯಲ್ಲಿರುವ ಶಾಲೆಗಳ ಸಂಖ್ಯೆ ಎಷ್ಟು ; ಸದರಿ ಶಾಲಾ ಕಟ್ಟಡಗಳನ್ನು ದುರಸ್ಥಿಗೊಳಿಸಿ/ ಪುನಃಶ್ಚೇತನಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ೨೦೧೫–೧೬ ಹಾಗೂ ೨೦೧೬–೨೦೧೭ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ದುರ್ಬಲ ಶಾಲಾ ಕಟ್ಟಡಗಳನ್ನು ಪುನಃಶ್ಚೇತನಗೊಳಿಸಲಾಗಿದೆ; ಅವುಗಳಿಗೆ ಖರ್ಚಾದ ಅನುದಾನವೆಷ್ಟು; (ಶಾಲಾವಾರು ವಿವರ ಒದಗಿಸುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಹಳೆಯ ಶಿಥಿಲಗೊಂಡ ಶಾಲಾ ಕಟ್ಟಡಗಳನ್ನು ಗುರುತಿಸಲಾಗಿದೆ; ಎಷ್ಟು ವರ್ಷಗಳಷ್ಟು ಹಳೆಯದಾಗಿವೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಸದರಿ ಶಿಥಿಲಗೊಂಡ ಶಾಲಾ ಕಟ್ಟಡಗಳು ಕುಸಿದು ಸಾವು ನೋವುಗಳಾಗುವ ಮುಂಚೆ ಯಾವ ಕಾಲಮಿತಿಯಲ್ಲಿ ಇವುಗಳನ್ನು ರಿಪೇರಿ ಮಾಡಿಸಿ ಪುನಃಶ್ಚೇತನಗೊಳಿಸಲಾಗುವುದು? (ವಿವರ ನೀಡುವುದು)

## RURBAN ಯೋಜನೆ

**ಶ್ರೀ ಕೆ.ಸಿ.ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೬೨ (೪೦೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) RURBAN ಯೋಜನೆ ಅಡಿಯಲ್ಲಿ ಕರ್ನಾಟಕದ ಎಷ್ಟು ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಆ) ಬಳ್ಳಾರಿ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನ ದನಪೂರ (ಆದಿವಾಸಿ) ವನ್ನು ಈ ಯೋಜನೆಯಡಿಯಲ್ಲಿ ಆಯ್ಕೆ ಮಾಡಲಾಗಿದ್ದು, ಈ ಯೋಜನೆಯ ಹಣಕಾಸಿನ ಹಾಗೂ ಇತರೆ ಅಂಶಗಳ ವಿವರಗಳನ್ನು ನೀಡುವುದು; (ದನಪೂರ ಜಿಲ್ಲಾ ಪಂಚಾಯತಿಯಲ್ಲಿ ಇವತ್ತಿನವರೆಗೆ ಮಾಡಲಾದ ಬಿಡುಗಡೆ ಹಾಗೂ ಖರ್ಚಿನ ವಿವರಗಳನ್ನು ನೀಡುವುದು;

(ಇ) ಈಗಾಗಲೇ ಭಾರತ ಸರ್ಕಾರವು RURBAN phase-2 ಕಾರ್ಯಕ್ರಮವನ್ನು ಪ್ರಾರಂಭಿಸಿದೆಯೇ ; phase-2 ರಡಿಯಲ್ಲಿ ನಮ್ಮ ರಾಜ್ಯದ ಎಷ್ಟು ಗ್ರಾಮ ಪಂಚಾಯತಿಗಳನ್ನು ಸೂಚಿಸಲಾಗಿದೆ? (ವಿವರಗಳನ್ನು ಒದಗಿಸುವುದು)

## ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಉತ್ತೇಜನ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೫೬೩ (೪೧೦೨) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು; ಅವು ಯಾವುವು;

(ಆ) ಬಹುತೇಕ ನೇಕಾರರು ಇರುವ ಈ ಕೇತ್ರದಲ್ಲಿ ಬಡ ಕೂಲಿ ಕಾರ್ಮಿಕ ನೇಕಾರರಿಗೆ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರ ಉತ್ತೇಜನ ನೀಡಲು ಕೈಗೊಂಡಿರುವ ಕ್ರಮಗಳೇನು;

(ಇ) ಸರ್ಕಾರಿ ಜಾಗ ಪಡೆದು ಸಣ್ಣ ಕೈಗಾರಿಕೆ ಮಾಡಲು ಅನುಸರಿಸಬೇಕಾದ ನಿಯಮಾವಳಿಗಳೇನು?

## ಮಧ್ಯಮ ಕೈಗಾರಿಕೆ ಘಟಕಗಳನ್ನು ತೆರೆಯುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೫೬೪ (೪೧೦೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಘಟಕಗಳ ಸಂಖ್ಯೆ ಎಷ್ಟು; ಅವು ಯಾವುವು;

(ಆ) ಈ ಕ್ಷೇತ್ರದಲ್ಲಿ ಮಧ್ಯಮ ಕೈಗಾರಿಕಾ ಘಟಕಗಳನ್ನು ತೆರೆಯಲು ಇರುವ ಹೊಸ ನಿಯಮಾವಳಿಗಳೇನು;

(ಇ) ಪ್ರಸಕ್ತ ಸಾಲಿನಲ್ಲಿ ಹೊಸ ಕೈಗಾರಿಕಾ ಘಟಕ ಪ್ರಾರಂಭಿಸಲು ಸರ್ಕಾರದ ಉತ್ತೇಜನವೇನು;

(ಈ) ಸರ್ಕಾರಿ ಜಾಗ ಪಡೆದು ಘಟಕ ಪ್ರಾರಂಭಿಸಲು ಅನುಸರಿಸುವ ಮಾರ್ಗಸೂಚಿ ಯಾವುದು? (ವಿವರ ನೀಡುವುದು)

## ಗ್ರಾಮ ಪಂಚಾಯತಿಗಳ ಅನುದಾನದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೫೬೫ (೪೦೯೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು; ಅವು ಯಾವುವು; (ಗ್ರಾಮಗಳ ಸಮೇತ ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಕ್ಷೇತ್ರದಲ್ಲಿ ಬರುವ ಗ್ರಾಮ ಪಂಚಾಯತಿಗಳಿಗೆ ನೀಡಿರುವ ಅನುದಾನ ಎಷ್ಟು;

(ಇ) ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ಯಾವ್ಯಾವ ಹಳ್ಳಿಗೆ ಶುದ್ಧ ಕುಡಿಯುವ ನೀರಿನ ಘಟಕ ಕೊಡಲಾಗಿದೆ;

(ಈ) ಪ್ರಸಕ್ತ ಸಾಲಿನಲ್ಲಿ ಬೇಡಿಕೆ ಇರುವ ಹಳ್ಳಿಗಳು ಯಾವುವು; ಈ ವರ್ಷದಲ್ಲಿ ಅವುಗಳಿಗೆ ನೀಡಲಾಗುವುದೆ?

**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ಶಿಕ್ಷಣ ಕೊರತೆ ಬಗ್ಗೆ**

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೫೬೬ (೪೧೦೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; ಅವು ಯಾವುವು; ಎಲ್ಲೆಲ್ಲಿ, ವಿವರ ನೀಡುವುದು;

(ಆ) ಕನ್ನಡ ಶಾಲೆ, ಉರ್ದುಶಾಲೆ, ಮರಾಠಿಶಾಲೆ, ಶಿಕ್ಷಕರ ಸಮೇತ ಹಾಗೂ ವಿಳಾಸ ಸಮೇತ ವಿವರ ನೀಡುವುದು;

(ಇ) ಈ ಕ್ಷೇತ್ರದಲ್ಲಿ ಶಿಕ್ಷಕರ ಕೊರತೆ ಇರುವುದನ್ನು ಸರ್ಕಾರ ಗಮನಿಸಿದೆಯೆ? ಹಾಗಿದ್ದಲ್ಲಿ, ಕೊರತೆ ತುಂಬಲಾಗುವುದು ಯಾವಾಗ?

## ಚಿಕ್ಕಮಗಳೂರು ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೬೭ (೩೯೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಶಾಲೆಗಳು ಮತ್ತು ಬಾಡಿಗೆ ಕಟ್ಟಡಗಳನ್ನು ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು;

(ಇ) ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಕಟ್ಟಡಗಳ ದುರಸ್ಥಿಗೆಂದು ಕಳೆದ ಎರಡು ವರ್ಷಗಳಲ್ಲಿ ಮಂಜೂರು ಮಾಡಿರುವ ಮೊತ್ತವೆಷ್ಟು; (ಶಾಲಾವಾರು ಮಾಹಿತಿ ನೀಡುವುದು)

(ಈ) ಅನೇಕ ಸರ್ಕಾರಿ ಶಾಲೆಗಳಲ್ಲಿ ಮೂಲ ಸೌಕರ್ಯಗಳ ಕೊರತೆ, ಕೊಠಡಿಗಳ ಕೊರತೆ, ಶೌಚಾಲಯಗಳ ಕೊರತೆ, ಕುಡಿಯುವ ನೀರಿನ ಕೊರತೆ, ಶಿಥಿಲಗೊಂಡ ಕೊಠಡಿಗಳಲ್ಲಿ ವ್ಯಾಸಂಗ ಇಂತಹ ಅನೇಕ ಸಮಸ್ಯೆಗಳಿಂದ ಮಕ್ಕಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಅಂತಹ ಶಾಲೆಗಳಾವುವು; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಚಿಕ್ಕಮಗಳೂರು ಜಿಲ್ಲೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಮೂಲ ಸೌಕರ್ಯಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೬೮ (೩೯೧೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ, ಕೊಠಡಿಗಳು, ಲ್ಯಾಬ್ ಇತ್ಯಾದಿಗಳಿಲ್ಲದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಂತಹ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಇವೆ; ಸದರಿ ಕಾಲೇಜುಗಳಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಲು ಏನು ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಆ) ಸದರಿ ಕಾಲೇಜುಗಳಿಗೆ ಮಂಜೂರಾದ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳು ಎಷ್ಟು; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ಶಾಶ್ವತ ಕುಡಿಯುವ ನೀರಿನ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೬೯ (೩೮೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳು ನಿರಂತರವಾಗಿ ಬರಗಾಲಕ್ಕೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಆ) ಹಾಗಿದ್ದಲ್ಲಿ, ಈ ಎರಡು ಜಿಲ್ಲೆಗಳ ಶಾಶ್ವತ ಕುಡಿಯುವ ನೀರಿಗಾಗಿ ಯಾವ ಯೋಜನೆಯನ್ನು ರೂಪಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಶಾಶ್ವತ ಕುಡಿಯುವ ನೀರಿನ ಯೋಜನೆಗಾಗಿ ರಾಜ್ಯ ಸರ್ಕಾರ ಕಳೆದ ೩ ವರ್ಷಗಳಲ್ಲಿ ನಿಗದಿಪಡಿಸಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯ ಸರ್ಕಾರ ನೀಡಿರುವ ಅನುದಾನದಲ್ಲಿ ಎರಡು ಜಿಲ್ಲೆಗಳ ನಗರ ಮತ್ತು ಗ್ರಾಮೀಣ ಪ್ರದೇಶಗಳಿಗೆ ಸಮರ್ಪಕವಾಗಿ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆಯೇ;

(ಉ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ನೀಡಿದ ಅನುದಾನದಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿಗಾಗಿ ಕಳೆದ ೩ ವರ್ಷಗಳಲ್ಲಿ ವೆಚ್ಚವಾಗಿರುವ ಮೊತ್ತವೆಷ್ಟು? (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿರುವ ಗ್ರಂಥಾಲಯಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೭೦ (೩೯೦೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿರುವ ಒಟ್ಟು ಗ್ರಂಥಾಲಯಗಳ ಸಂಖ್ಯೆ ಎಷ್ಟು;(ವಿಧಾನಸಭೆ ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ಈ ಗ್ರಂಥಾಲಯಗಳಲ್ಲಿ ಕಾರ್ಯನಿರ್ವಹಿಸಿತ್ತಿರುವ ಗ್ರಂಥಪಾಲಕರು/ ಮೇಲ್ವಿಚಾರಕರ ಹುದ್ದೆಗಳ ಸಂಖ್ಯೆ ಎಷ್ಟು; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಇ) ಈ ಗ್ರಂಥಾಲಯಗಳಲ್ಲಿ ಕಾರ್ಯನಿರ್ವಹಿಸಿತ್ತಿರುವ ಗ್ರಂಥಪಾಲಕರು/ ಮೇಲ್ವಿಚಾರುಗಳಿಗೆ ಸರ್ಕಾರ ಪ್ರಸ್ತುತ ನೀಡುತ್ತಿರುವ ವೇತನ ಹಾಗೂ ಇತರೆ ಭತ್ಯೆಗಳ ಮೊತ್ತವೆಷ್ಟು; ( ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಗ್ರಂಥಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಂಥಪಾಲಕರು/ ಮೇಲ್ವಿಚಾಕರುಗಳಿಗೆ ಕನಿಷ್ಠ ವೇತನವನ್ನು ನಿಗಧಿಪಡಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

(ಉ) ಅವರುಗಳನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಊ) ಹಾಗಿದ್ದಲ್ಲಿ, ಖಾಯಂಗೊಳಿಸುವುದು ಯಾವಾಗ; ಖಾಯಂಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

## ಗ್ರಾಮೀಣ ಕುಡಿಯುವ ನೀರಿನ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೭೧ (೩೯೮೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ಯೋಜನೆಗಾಗಿ ಕಳೆದ ೩ ವರ್ಷಗಳಲ್ಲಿ ರಾಜ್ಯ ಸರ್ಕಾರ ನಿಗಧಿಪಡಿಸಿದ, ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವನ್ನು ಎರಡು ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಿಗೆ ಹಂಚಿಕೆ ಮಾಡಲಾಗಿದೆಯೇ; (ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವನ್ನು ಕುಡಿಯುವ ನೀರಿನ ಯೋಜನೆಗಾಗಿ ಎಲ್ಲಾ ತಾಲ್ಲೂಕುಗಳಲ್ಲಿಯೂ ಸಮರ್ಪಕವಾಗಿ ಬಳಸಿಕೊಳ್ಳಲಾಗಿದೆಯೇ;

(ಈ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ನೀಡಿರುವ ಅನುದಾನದಲ್ಲಿ ಎರಡು ಜಿಲ್ಲೆಗಳ ಎಷ್ಟು ಗ್ರಾಮಗಳಿಗೆ ಕುಡಿಯುವ ನೀರನ್ನು ಸರಬರಾಜು ಮಾಡಲಾಗಿದೆ; (ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯ ಸರ್ಕಾರ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಾಗಿ ನೀಡುತ್ತಿರುವ ಅನುದಾನವನ್ನು ಕೆಲವು ತಾಲ್ಲೂಕುಗಳಲ್ಲಿ ಸಮರ್ಪಕವಾಗಿ ಬಳಸಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಹಾಗಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮೂಲ ಸೌಕರ್ಯಗಳ ಕೊರತೆ ಬಗ್ಗೆ

**ಶ್ರೀ ಕೆ.ವಿ.ನಾರಾಯಣ ಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೭೨ (೪೦೩೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಆ ಪೈಕಿ ಮೂಲ ಸೌಕರ್ಯಗಳಿಲ್ಲದೇ ಇರುವ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಆ ಪೈಕಿ ಸೂಕ್ತ ಕಟ್ಟಡಗಳಿಲ್ಲದ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಎಷ್ಟು ಕಾಲೇಜುಗಳಿಗೆ ನೀರಿನ ಸಂಪರ್ಕ ನೀಡಲಾಗಿದೆ; ನೀರನ ಸಂಪರ್ಕವಿಲ್ಲದ ಕಾಲೇಜುಗಳ ಸಂಖ್ಯೆ ಎಷ್ಟು;

(ಈ) ಎಷ್ಟು ಕಾಲೇಜುಗಳಲ್ಲಿ ಶೌಚಾಲಯುಗಳನ್ನು ನಿರ್ಮಾಣ ಮಾಡಲಾಗಿದೆ; ಅವುಗಳಲ್ಲಿ ಬಳಕೆ ಮಾಡಲು ಯೋಗ್ಯವಾಗಿರುವ ಶೌಚಾಲಯಗಳ ಸಂಖ್ಯೆ ಎಷ್ಟು;

(ಉ) ೨೦೧೨–೧೩ ರಿಂದ ಇಲ್ಲಿಯವರೆಗೆ ಎಷ್ಟು ಪ್ರಥಮ ದರ್ಜೆ ಕಾಲೇಜುಗಳಿಗೆ ಕಟ್ಟಡ ಮತ್ತು ಶೌಚಾಲಯ ನಿರ್ಮಾಣ ಮಾಡಲಾಗಿದೆ? (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

## B.M.T.C ಬಸ್‌ಗಳ ಕೊರತೆಯ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೭೩ (೪೧೪೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ B.M.T.C ಬಸ್‌ಗಳ ಕೊರತೆ ಕೆಲವು ಭಾಗಗಳಲ್ಲಿದ್ದು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರ ತ್ವರಿತವಾಗಿ B.M.T.C ಬಸ್ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳುವುದೆ;

(ಇ) ಯಲಹಂಕ ಕ್ಷೇತ್ರ ವ್ಯಾಪ್ತಿಯಲ್ಲಿ B.M.T.C ಬಸ್ಸ್ ಸೌಲಭ್ಯ ಕಡಿಮೆ ಇದ್ದು ಹೆಚ್ಚಿನ ಸೌಲಭ್ಯ ಕಲ್ಪಿಸಲು ಸರ್ಕಾರ ಸಮೀಕ್ಷೆ ನಡೆಸಿದೆಯೇ;

(ಈ) ಹಾಗಿದ್ದಲ್ಲಿ, ಬೆಂಗಳೂರು ನಗರ ಸುತ್ತಮುತ್ತಲಿನ ಹಳ್ಳಿ ಪ್ರದೇಶಗಳಿಗೆ ಹೆಚ್ಚಿನ B.M.T.C ಬಸ್ಸ್ ಸೌಲಭ್ಯವನ್ನು ಕಲ್ಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

## ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೭೪ (೪೧೪೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪದವಿ ಹಾಗೂ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ವೇತನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ;

(ಆ) ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡುತ್ತಿರುವ ಗೌರವಧನ ಎಷ್ಟು;

(ಇ) ಗೌರವ ಧನ ಹೆಚ್ಚಿಸುವ ಕುರಿತು ಸರ್ಕಾರದ ನಿಲುವೇನು;

(ಈ) ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ದಾಲ್‌ಮಿಲ್‌ಗಳ ಸಮಸ್ಯೆಯ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೭೫ (೪೦೮೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ದಾಲ್‌ಮಿಲ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ದಾಲ್‌ಮಿಲ್‌ಗಳು ಕೆಲವು ಸಮಸ್ಯೆಗಳಿಂದ ಮುಚ್ಚುವ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅದಕ್ಕೆ ಕಾರಣವೇನು; (ವಿವರ ನೀಡುವುದು)

(ಇ) ದಾಲ್‌ಮಿಲ್‌ಗಳನ್ನು ಪುನಃಶ್ಚೇತನಗೊಳಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಸಮುದಾಯ ಶೌಚಾಲಯಗಳ ನಿರ್ಮಾಣ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೭೬ (೪೦೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸ್ವಚ್ಛ ಭಾರತ ಮಿಷನ್ ಅಡಿಯಲ್ಲಿ ಎಷ್ಟು ಸಮುದಾಯ ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಬಯಲು ಬಹಿರ್ದೆಸೆ ಮುಕ್ತ ಮಾಡಲು ಆಯ್ಕೆ ಮಾಡಿಕೊಂಡಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಇದುವರೆವಿಗೂ ಎಷ್ಟು ಗ್ರಾಮ ಪಂಚಾಯಿತಿಗಳನ್ನು ಬಯಲು ಬಹಿರ್ದೆಸೆ ಮುಕ್ತ ಗ್ರಾಮ ಪಂಚಾಯಿತಿಗಳೆಂದು ಘೋಷಿಸಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಮನೆಗೊಂದು ಶೌಚಾಲಯ ನಿರ್ಮಾಣದ ಯೋಜನೆ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೭೭ (೪೧೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸ್ವಚ್ಛ ಭಾರತ ಯೋಜನೆಯಡಿ ಗ್ರಾಮೀಣ ಪ್ರದೇಶದಲ್ಲಿ ಮನೆಗೊಂದು ಶೌಚಾಲಯ ಯೋಜನೆ ಜಾರಿಯಲ್ಲಿರುವುದು ನಿಜವೇ;

(ಆ) ಹಾಗಿದ್ದರೆ, ಈ ಯೋಜನೆಯಡಿ ೨೦೧೩–೧೪ ರಿಂದ ಇಲ್ಲಿಯವರೆಗೆ ನಿರ್ಮಾಣ ಮಾಡಿರುವ ಶೌಚಾಲಯಗಳ ಸಂಖ್ಯೆ ಎಷ್ಟು; ಯೋಜನೆಗೆ ಮೀಸಲಿಟ್ಟ ಹಣ ಎಷ್ಟು; ಖರ್ಚು ಮಾಡಿರುವ ಹಣದ ಮೊತ್ತ ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ಈ ಯೋಜನೆಗೆ ಕೇಂದ್ರ ಸರ್ಕಾರದ ಪಾಲು ಎಷ್ಟು; ರಾಜ್ಯ ಸರ್ಕಾರದ ಪಾಲು ಇದ್ದರೆ, ಅದರ ಪಾಲು ಎಷ್ಟು; ೨೦೧೩–೧೪ ರಿಂದ ಇಲ್ಲಿಯವರೆಗೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಣ ಎಷ್ಟು; ಖರ್ಚು ಮಾಡಿರುವ ಹಣ ಎಷ್ಟು; ಬಾಕಿ ಹಣ ಎಷ್ಟು? (ಪೂರ್ಣ ವಿವರ ನೀಡುವುದು)

## ಪ್ರಧಾನಮಂತ್ರಿ ಸಂಸದ್ ಆದರ್ಶ ಗ್ರಾಮ ಯೋಜನೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೭೮ (೪೧೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನಮಂತ್ರಿ ಸಂಸದ್ ಆದರ್ಶ ಗ್ರಾಮ ಯೋಜನೆ ಜಾರಿಯಲ್ಲಿರುವುದು ನಿಜವೇ;

(ಆ) ಹಾಗಿದ್ದರೆ, ಕರ್ನಾಟಕ ರಾಜ್ಯದ ಸಂಸದರು ಯಾವ ಯಾವ ಗ್ರಾಮಗಳನ್ನು ಆಯ್ಕೆ ಮಾಡಿಕೊಂಡಿದ್ದಾರೆ; (ವಿವರ ನೀಡುವುದು)

(ಇ) ಸಂಸದರು ಆಯ್ಕೆ ಮಾಡಿಕೊಂಡ ಗ್ರಾಮಗಳಿಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ಹಣ ಎಷ್ಟು; ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು; ಯೋಜನೆಗೆ ತಗುಲಿದ ವೆಚ್ಚ ಎಷ್ಟು? (ವರ್ಷಾವಾರು ಗ್ರಾಮಗಳ ಸಹಿತ ವಿವರವನ್ನು ನೀಡುವುದು)

## ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೭೯ (೪೧೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಿಂದ ವಿವಿಧ ಯೋಜನೆಗಳಿಗೆ ಅನುದಾನ ನೀಡಿರುವುದು ನಿಜವೇ;

(ಆ) ಹಾಗಿದ್ದರೆ, ಅಂತಹ ಯೋಜನೆಗಳ ವಿವರ ನೀಡುವುದು;

(ಇ) ೨೦೧೩–೧೪ ರಿಂದ ೨೦೧೭–೧೮ರವರೆಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಮೀಸಲಿಟ್ಟ ಹಣ ಎಷ್ಟು; ಬಿಡುಗಡೆ ಮಾಡಿದ ಹಾಗೂ ಖರ್ಚು ಮಾಡಿದ ಹಣ ಎಷ್ಟು; ಬಾಕಿ ಎಷ್ಟು; (ವಿವರವನ್ನು ವರ್ಷಾವಾರು, ಯೋಜನಾವಾರು ನೀಡುವುದು)

(ಈ) ೨೦೧೩–೧೪ ರಿಂದ ಇದುವರೆಗೆ ಈ ಯೋಜನೆಗಳಿಂದ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು? (ವರ್ಷಾವಾರು ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೮೦ (೩೮೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಲ್ಪ ಸಂಖ್ಯಾತರ ಕಲ್ಯಾಣಕ್ಕೆ ಹಲವಾರು ಸಂಸ್ಥೆಗಳಿಂದ ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸಿರುವುದು ನಿಜವೇ;

(ಆ) ಹಾಗಿದ್ದರೆ, ಸಂಸ್ಥೆಗಳವಾರು ಕಾರ್ಯಕ್ರಮಗಳ ಪೂರ್ಣ ವಿವರ ನೀಡುವುದು;

(ಇ) ಆ ಪ್ರತಿ ಕಾರ್ಯಕ್ರಮಗಳಿಗೆ ೨೦೧೩–೧೪ ರಿಂದ ೨೦೧೭–೧೮ ರವರೆಗೆ ಆಯವ್ಯಯದಲ್ಲಿ ಮೀಸಲಿಟ್ಟ ಹಣ ಎಷ್ಟು; ಬಿಡುಗಡೆ ಮಾಡಿದ ಹಾಗೂ ಖರ್ಚು ಮಾಡಿದ ಹಣವೆಷ್ಟು; ಫಲಾನುಭವಿಗಳ ಸಂಖ್ಯೆ ಎಷ್ಟು? (ವರ್ಷಾವಾರು, ಯೋಜನೆವಾರು ಪೂರ್ಣ ವಿವರ ನೀಡುವುದು)

## ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೫೮೧ (೪೧೧೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ “ಇನ್ವೆಸ್ಟ್ ಕರ್ನಾಟಕ” ನಡೆದಿರುವುದು ನಿಜವೇ;

(ಆ) ಹಾಗಿದ್ದರೆ, ೨೦೧೩–೧೪ ರಿಂದ ೨೦೧೭–೧೮ರವರೆಗೆ ರಾಜ್ಯದಲ್ಲಿ ನಡೆದಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶಗಳಲ್ಲಿ ಆದಂತಹ ಒಪ್ಪಂದಗಳು ಯಾವುವು; ಹೂಡಿಕೆಯ ಮೊತ್ತ ಎಷ್ಟು; ಎಷ್ಟು ಉದ್ಯೋಗಗಳನ್ನು ಸೃಷ್ಟಿಸಲಾಗಿದೆ; (ವಲಯವಾರು ಪ್ರತ್ಯೇಕ ವಿವರ ನೀಡುವುದು)

(ಇ) ಸದರಿ ಬಂಡವಾಳ ಹೂಡಿಕೆಯ ಸಮಾವೇಶದಿಂದ ರಾಜ್ಯಕ್ಕೆ ಆದಂತಹ ಪ್ರಗತಿ ಏನು; (ಬಂಡವಾಳ ಹೂಡಿಕೆ, ಉದ್ಯೋಗ ಸೃಷ್ಟಿ, ವಲಯಗಳ ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಇನ್‌ವೆಸ್ಟ್ ಕರ್ನಾಟಕ ಮುಖಾಂತರ ನೂತನವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರವನ್ನು ನೀಡುವುದು)

## ಗ್ರಾಮ ಪಂಚಾಯತಿಗಳಿಗೆ ಹೊಸ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೮೨ (೩೯೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತಿಗಳಿಗೆ ಹೊಸ ಕಟ್ಟಡ ಕಟ್ಟುವಾಗ ೧೬ ಲಕ್ಷದ ೨೫ ಸಾವಿರ ರೂಪಾಯಿಗಳ ಯೋಜನೆ ಮಾತ್ರ ಇದೆಯೇ;

(ಆ) ಈ ಅಂದಾಜು ವೆಚ್ಚ ಯಾವ ವರ್ಷದಿಂದ ಚಾಲ್ತಿಯಲ್ಲಿದೆ; ಕಟ್ಟಡ ಅಂದಾಜು ವೆಚ್ಚವನ್ನು ೧೬.೨೫ ಲಕ್ಷಗಳಿಂದ ಹೆಚ್ಚಿಸುವ ಉದ್ದೇಶವಿದೆಯೇ;

(ಇ) ಗ್ರಾಮ ಪಂಚಾಯತಿಗಳಿಗೆ ೧೦೦ ಸೇವೆಗಳನ್ನು ನೀಡುತ್ತಿರುವುದರಿಂದ ವಿಶಾಲ ಕಟ್ಟಡ ಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ರಾಜ್ಯದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸರ್ಕಾರ ಗ್ರಂಥಾಲಯಗಳನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೮೩ (೩೯೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸರ್ಕಾರ ಗ್ರಂಥಾಲಯಗಳನ್ನು ಪ್ರಾರಂಭಿಸಿದೆಯೇ;

(ಆ) ಈ ಗ್ರಂಥಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮೇಲ್ವಿಚಾರಕರುಗಳಿಗೆ ಸೇವಾ ಭದ್ರತೆಯೊಂದಿಗೆ ಕನಿಷ್ಠ ವೇತನ ನೀಡಲಾಗುತ್ತಿದೆಯೇ; ಅವರುಗಳನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿಗಳಿಗೆ ಬಸ್ಸ್ ಖರೀದಿ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೮೪ (೩೯೦೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಸಾರಿಗೆ ವ್ಯವಸ್ಥೆಗೆ ಖರೀದಿಸಿರುವ ಬಸ್‌ಗಳ ಸಂಖ್ಯೆ ಎಷ್ಟು; (ಕೆ.ಎಸ್.ಆರ್.ಟಿ.ಸಿ/ಬಿ.ಎಂ.ಟಿ.ಸಿವಾರು ವಿವರ ನೀಡುವುದು)

(ಆ) ಯಾವ ಕಂಪನಿಗಳಿಂದ ಬಸ್ಸುಗಳನ್ನು ಖರೀದಿಸಲಾಗಿದೆ; ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿ ಜಾಹೀರಾತುಗಳಿಂದ ಸಾರಿಗೆ ಸಂಸ್ಥೆಗೆ ಬಂದಿರುವ ಆದಾಯ ಎಷ್ಟು; (ವಿವರ ನೀಡುವುದು)

(ಇ) ಸಾರಿಗೆ ಸಂಸ್ಥೆಯ ಚಾಲಕರ ವಿದ್ಯಾರ್ಹತೆಯ ಜೊತೆಗೆ ಐ.ಟಿ.ಐ ವಿದ್ಯಾರ್ಹತೆ ಪಡೆದವರನ್ನು ಸಹ ಚಾಲಕ ಹುದ್ದೆಗೆ ಪರಿಗಣಿಸಲು ಸರ್ಕಾರ ಚಿಂತಿಸಿದೆಯೇ?

## ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆಗಳ ಕಟ್ಟಡದ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೮೫ (೩೮೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಕಟ್ಟಡಗಳು ಯೋಗ್ಯವಾಗಿರುವ ಬಗ್ಗೆ ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆಯೇ; (ವಿವರಗಳನ್ನು ಒದಗಿಸುವುದು)

(ಆ) ಕಟ್ಟಡಗಳು ಯೋಗ್ಯವಾಗಿದೆ ಎಂಬುದರ ಬಗ್ಗೆ ಇಂಜಿನಿಯರ್‌ಗಳ ವಿಭಾಗದಿಂದ ಪಡೆದಿರುವ ಪ್ರಮಾಣ ಪತ್ರಗಳ ವಿವರಗಳನ್ನು ನೀಡುವುದು; (ಜಿಲ್ಲಾವಾರು ವಿವರ ನೀಡುವುದು)

(ಇ) ಹಾಲಿ ಜಿಂಕ್ ಶೀಟ್, ಹೆಂಚು ಮತ್ತು ಕಲ್ನಾರ್ ಶೀಟ್‌ಗಳಿಂದ ಇರುವ ಕಟ್ಟಡಗಳ ಜಿಲ್ಲಾವಾರು ವಿವರ ನೀಡುವುದು;

(ಈ) ಹೊಸ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಮರಳು ಗಣಿಗಾರಿಕೆಯ ರಾಜಧನದಲ್ಲಿ ಶೇ. ೨೫ ರಷ್ಟನ್ನು ಗ್ರಾಮಪಂಚಾಯತಿಗೆ ನೀಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೮೬ (೪೩೬೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಉಡುಪಿ ಜಿಲ್ಲೆಯಲ್ಲಿ CRZ ಮತ್ತು Non-CRZ ವಲಯಗಳ ಮರಳು ಬ್ಲಾಕ್‌ಗಳಲ್ಲಿನ ಮರಳಿನಿಂದ ಸಂಗ್ರಹವಾದ ರಾಜಧನವೆಷ್ಟು; (ನದಿ, ಗ್ರಾಮ, ಬ್ಲಾಕ್‌ವಾರು ವಿವರ ನೀಡುವುದು)

(ಆ) ಸರ್ಕಾರದ ಸುತ್ತೋಲೆ ಸಂಖ್ಯೆ ೧೭೦ ಎಂಎಂಎಸ್ ೨೦೧೪, ದಿನಾಂಕ:೦೮.೦೯.೨೦೧೪ರಂತೆ ಸಂಗ್ರಹಿಸಲಾದ ರಾಜಧನದಲ್ಲಿ ಶೇ. ೨೫ ರಷ್ಟನ್ನು ಗ್ರಾಮ ಪಂಚಾಯತಿಗೆ ಪಾವತಿಸಲಾಗಿದೆಯೇ; ಇಲ್ಲವಾದಲ್ಲಿ, ಕಾರಣವೇನು; ಪಾವತಿಗೆ ಸರ್ಕಾರದ ಕಾಲಮಿತಿ ಯಾವುದು;

(ಇ) ಉಡುಪಿ ಜಿಲ್ಲೆಯಲ್ಲಿ ಕಳೆದ ಒಂದೂವರೆ ವರ್ಷದಿಂದ ಮರಳುಗಾರಿಕೆಯ ಮೇಲಿನ ತಡೆಯಿಂದಾಗಿ ಅಕ್ರಮ ಮರಳುಗಾರಿಕೆಯು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಜನರಿಗೆ ಅಗತ್ಯವಾದ ಮರಳನ್ನು ಪೂರೈಸಲು ಸರ್ಕಾರದ ಕ್ರಮವೇನು?

## ಗ್ರಾಮ ಪಂಚಾಯತಿ ಆದಾಯದಲ್ಲಿ ನಷ್ಟವಾಗುತ್ತಿರುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೮೭ (೪೩೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯತ್‌ನ ಬಾಡಿಗೆ ಕಟ್ಟಡಗಳ ಏಲಂನ ನಿಯಮಾವಳಿಯನ್ನು ರೂಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; ಈ ನಿಯಮಾವಳಿಯು ಇಲ್ಲದೇ ಇರುವುದರಿಂದ ಬಾಡಿಗೆ ಕಟ್ಟಡಗಳು ಅತಿ ಕಡಿಮೆ ಬೆಲೆಗೆ ಏಲಂ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಗ್ರಾಮ ಪಂಚಾಯತ್‌ನ ಆದಾಯಕ್ಕೆ ಆಗುವ ನಷ್ಟ ತಡೆಗಟ್ಟಲು ಸರ್ಕಾರದ ಕ್ರಮವೇನು;

(ಆ) ಗ್ರಾಮ ಪಂಚಾಯತಿಯ ಹೆಚ್ಚಿನ ಅನುದಾನವು ಕುಡಿಯುವ ನೀರಿನ ಬೋರ್‌ವೆಲ್‌ಗಳ ರಿಪೇರಿಗೆ ಮತ್ತು ಬಾವಿಗೆ ಅಳವಡಿಸಲು ವ್ಯಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಶೆಡ್ಯೂಲ್ ದರಗಳನ್ನು ಬೋರ್‌ವೆಲ್ ರಿಪೇರಿ ಅಳವಡಿಕೆಗೆ ನಿಗದಿಪಡಿಸಲಾಗಿದೆಯೇ; ಹೌದಾದಲ್ಲಿ, ಪ್ರತಿ ಒದಗಿಸುವುದು; ಇಲ್ಲದಿದ್ದಲ್ಲಿ, ಸರ್ಕಾರದ ಕ್ರಮವೇನು;

(ಇ) ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತಿಗಳಲ್ಲಿ ಮಂಜೂರಾತಿಗೆ ಅವಕಾಶವಿದ್ದರೂ ತಾತ್ಕಾಲಿಕ ನೆಲೆಗಟ್ಟಿನಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಈ) ಗ್ರಾಮ ಪಂಚಾಯತಿಗಳು ಸಿಬ್ಬಂದಿ ನೇಮಕಾತಿಯ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಿದ ದಿನಾಂಕ ಯಾವುದು; ಸಿಬ್ಬಂದಿಗಳ ಹುದ್ದೆ ಮಂಜೂರಾತಿಗೆ ಇರುವ ತೊಡಕುಗಳು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಉ) ಗ್ರಾಮ ಪಂಚಾಯತಿಯ ಆಯವ್ಯಯದ ಮೇಲೆ ಗ್ರಾಮ ಪಂಚಾಯತಿಯ ನಿರ್ಣಯದ ಮೇರೆಗೆ ಜಿಲ್ಲಾ ಪಂಚಾಯತಿಯ ಅನುಮೋದನೆ ಪಡೆದು ಸಿಬ್ಬಂದಿ ಹುದ್ದೆ ಮಂಜೂರಾತಿ ಮಾಡಲು ಅವಕಾಶವಿದೆಯೇ; ಉಡುಪಿ

ಜಿಲ್ಲೆಯಲ್ಲಿ ಹೆಚ್ಚುವರಿ ಗುಮಾಸ್ತ ಹುದ್ದೆಗೆ ನಿರ್ಣಯವನ್ನು ಅಂಗೀಕರಿಸಿದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು? (ಗ್ರಾಮ ಪಂಚಾಯತಿವಾರು ವಿವರ ನೀಡುವುದು)

## MGNREGA ಯೋಜನೆಯ ಅನುಷ್ಠಾನದಲ್ಲಿ ತೊಡಕುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೫೮೮ (೪೩೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಲ್ಲಿ ಕೆಲಸ ನಿರ್ವಹಿಸಿದ ಕೂಲಿಕಾರರಿಗೆ ಅವರು ಗ್ರಾಮಪಂಚಾಯಿತಿಗೆ ನೀಡಿದ ಬ್ಯಾಂಕ್ ಖಾತೆಯ ಬದಲಾಗಿ ಆಧಾರ್ ಸಂಖ್ಯೆಯ ಜೋಡಣೆಯ ಮೇರೆಗೆ ಬೇರೆ ಬೇರೆ ಬ್ಯಾಂಕ್‌ಗಳ ಖಾತೆಗಳಿಗೆ ಹೋಗಿ ಕೂಲಿಕಾರ್ಮಿಕರಿಗೆ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಗೊಂದಲ ತಪ್ಪಿಸಲು ಸರ್ಕಾರದ ಕ್ರಮವೇನು;

(ಆ) MGNREGA ಯ ಸಾಮಗ್ರಿ ವೆಚ್ಚವನ್ನು ಎಷ್ಟು ದಿನಗಳಿಗೊಮ್ಮೆ ಬಿಡುಗಡೆ ಮಾಡಲಾಗುತ್ತಿದೆ; ಅನಿಮಿತವಾಗಿ ಸಾಮಗ್ರಿ ವೆಚ್ಚವನ್ನು ಬಿಡುಗಡೆ ಮಾಡಲಾಗುತ್ತಿರುವುದು ಸರಿಯಾದ ಕ್ರಮವೇ; ಸಕಾಲದಲ್ಲಿ ಸಾಮಗ್ರಿ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಕ್ರಮವೇನು;

(ಇ) MGNREGA ಯ ಸಾಮಾಜಿಕ ಲೆಕ್ಕ ಪರಿಶೋಧನೆಯ ಉದ್ದೇಶವೇನು; ತಾಂತ್ರಿಕ ಅರ್ಹತೆ ಇಲ್ಲದೆ ಮನಸೋ ಇಚ್ಛೆ ವರದಿ ಮಾಡಿ

ಗ್ರಾಮಸಭೆಯಲ್ಲಿ ಪಂಚಾಯತ್ ಅಧ್ಯಕ್ಷರು, ಸದಸ್ಯರು ಅವ್ಯವಹಾರ ನಡೆಸುತ್ತಿರುವ ರೀತಿಯಲ್ಲಿ ಬಿಂಬಿಸಿ, ಮುಜುಗರ ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಸದಸ್ಯರ ಮನೋಸ್ಥೈರ್ಯ ಕುಗ್ಗಿ ಯೋಜನೆಗೆ ಹಿನ್ನಡೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರದ ಕ್ರಮವೇನು?

## ಮಂಗಳೂರು ವಿಮಾನ ನಿಲ್ದಾಣದ ವಿಸ್ತರಣೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೫೮೯ (೩೮೮೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ವಿಮಾನ ನಿಲ್ದಾಣದ ವಿಸ್ತರಣೆ ಕಾಮಗಾರಿ ಯಾವ ಹಂತದಲ್ಲಿದೆ; ವಿಮಾನ ನಿಲ್ದಾಣದ ವಿಸ್ತರಣೆಗೆ ಇರುವ ಅಡ್ಡಿಗಳೇನು; (ವಿವರ ಒದಗಿಸುವುದು)

(ಆ) ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಎಷ್ಟು ಮೀಟರ್ ರನ್‌ವೇ ಬೇಕಾಗುವುದು; (ವಿವರ ಒದಗಿಸುವುದು)

(ಇ) ರನ್‌ವೇ ಉದ್ದ ಕಡಿಮೆಯಿರುವ ಕಾರಣಕ್ಕಾಗಿ ಅಂತರರಾಷ್ಟ್ರೀಯ ಮಟ್ಟದ ವಿಮಾನಗಳು ಇಳಿಯಲು ಸಾಧ್ಯವಾಗುವುದಿಲ್ಲ ಎಂಬುದು ಸರಿಯೇ; (ವಿವರ ಒದಗಿಸುವುದು)

(ಈ) ಮಂಗಳೂರು ವಿಮಾನ ನಿಲ್ದಾಣದಲ್ಲಿ ಏರೋಬ್ರಿಡ್ಜ್‌ಗಳ ಸಂಖ್ಯೆ ಎಷ್ಟು; ಇವುಗಳನ್ನು ಹೆಚ್ಚಿಸಲು ಬೇಡಿಕೆ ಇದ್ದರೂ ಕ್ರಮಕೈಗೊಳ್ಳದಿರಲು ಕಾರಣಗಳೇನು? (ವಿವರ ಒದಗಿಸುವುದು)

## ೧೫ನೇ ಹಣಕಾಸಿನ ಕ್ರಿಯಾ ಯೋಜನೆಯನ್ನು ಜಿಲ್ಲಾ ಪಂಚಾಯಿತಿ ಮೂಲಕ ಅನುಮೋದನೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೯೦ (೩೯೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೫ನೇ ಹಣಕಾಸಿನ ಕ್ರಿಯಾ ಯೋಜನೆಯನ್ನು ಜಿಲ್ಲಾ ಪಂಚಾಯತಿ ಮೂಲಕ ಅನುಮೋದನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಹಿಂದೆ ಗ್ರಾಮ ಪಂಚಾಯತಿಗಳು ಮಾಡಿದ ಕ್ರಿಯಾ ಯೋಜನೆಯನ್ನು ತಾಲ್ಲೂಕು ಪಂಚಾಯತಿ ಅನುಮೋದನೆ ನೀಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ;

(ಇ) ಈ ವ್ಯವಸ್ಥೆಯನ್ನು ಸರಿಪಡಿಸಿ ತಾಲ್ಲೂಕು ಪಂಚಾಯತಿ ಮಟ್ಟದಲ್ಲಿ ಅನುಮೋದನೆ ನೀಡುವ ಕುರಿತು ಸರ್ಕಾರ ಗಮನ ಹರಿಸುವುದೇ?

## ವಿಶ್ವವಿದ್ಯಾನಿಲಯಗಳ ಹುದ್ದೆಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೯೧ (೪೦೯೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವವಿದ್ಯಾನಿಲಯಗಳಲ್ಲಿ ಮಂಜೂರಾದ ಬೋಧಕರ ಹುದ್ದೆಗಳಲ್ಲಿ ಪ್ರಾಧ್ಯಾಪಕ, ಸಹ ಪ್ರಾಧ್ಯಾಪಕರ ಹುದ್ದೆಗಳ ಸಂಖ್ಯೆ ಎಷ್ಟು; ಭರ್ತಿ ಮಾಡಲಾದ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿಶ್ವವಿದ್ಯಾನಿಲಯವಾರು ವಿವರ ನೀಡುವುದು)

(ಆ) ವಿಶ್ವವಿದ್ಯಾನಿಲಯಗಳಿಂದ ಅನ್ಯ ಇಲಾಖೆಗಳಿಗೆ ನಿಯೋಜನೆಗೊಂಡಿರುವ ಬೋಧಕರ ಸಂಖ್ಯೆ ಎಷ್ಟು; (ವಿಶ್ವವಿದ್ಯಾನಿಲಯವಾರು ವಿವರ ನೀಡುವುದು)

(ಇ) ವಿಶ್ವವಿದ್ಯಾನಿಲಯಗಳಲ್ಲಿ ಅನೇಕ ಬೋಧಕರ ಹುದ್ದೆಗಳು ಖಾಲಿ ಇದ್ದರೂ ಯು.ಜಿ.ಸಿ ನಿಯಮ ಉಲ್ಲಂಘಿಸಿ ಅನ್ಯ ಇಲಾಖೆಗಳಿಗೆ ಬೋಧಕರನ್ನು ನಿಯೋಜನೆ ಮಾಡಲು ಕಾರಣಗಳೇನು; ನಿಯೋಜನೆಯಿಂದ ಹಿಂಪಡೆಯಲಾಗುವುದು ಯಾವಾಗ;

(ಈ) ವಿಶ್ವವಿದ್ಯಾನಿಲಯದಲ್ಲಿ ಅನೇಕ ಬೋಧಕರ ಹುದ್ದೆಗಳು ಖಾಲಿ ಇದ್ದರೂ ಇವರನ್ನು ಅನ್ಯ ಇಲಾಖೆಗೆ ನಿಯೋಜಿಸಿ ನಂತರ ವಿಲೀನಗೊಳಿಸಲು ಸರ್ಕಾರದ ಹಂತದಲ್ಲಿರುವ ಪ್ರಸ್ತಾವನೆಗಳ ವಿವರ ನೀಡುವುದು?

## ಮೋಡ ಬಿತ್ತನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೨ (೪೧೯೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಕೈಗೊಂಡ ಮೋಡ ಬಿತ್ತನೆ ಯೋಜನೆ ಯಶಸ್ವಿಯಾಗಿದೆಯೇ; ಹಾಗಿದ್ದಲ್ಲಿ, ಈ ಯೋಜನೆಗಾಗಿ ಸರ್ಕಾರ ಮೀಸಲಿಟ್ಟ ಹಣವೆಷ್ಟು;

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಮೋಡ ಬಿತ್ತನೆ ಮಾಡಲಾಗಿದೆ; (ಜಿಲ್ಲಾವಾರು/ದಿನಾಂಕವಾರು ಮಾಹಿತಿ ನೀಡುವುದು)

(ಇ) ಮೋಡ ಬಿತ್ತನೆಗಾಗಿ ಯಾವ ಯಾವ ಕಂಪನಿಗಳಿಂದ ಟೆಂಡರ್ ಸಲ್ಲಿಕೆಯಾಗಿತ್ತು; ಯಾವ ಕಂಪನಿಯವರಿಗೆ ಟೆಂಡರ್ ನೀಡಲಾಗಿದೆ; ಟೆಂಡರ್ ಪ್ರಕ್ರಿಯೆಯ ಮಾನದಂಡಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಉಪನ್ಯಾಸಕರ ನೇಮಕಾತಿ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ ) –**

೩೫೯೩ (೪೦೬೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ಹುದ್ದೆಗಳನ್ನು ತುಂಬಲು ಪ್ರಕಟಣೆ ಹೊರಡಿಸಲಾಗಿದ್ದು ಯಾವಾಗ; ಪ್ರಕಟಣೆಯಂತೆ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ; (ವಿವರ ನೀಡುವುದು)

(ಇ) ಮೂಲ ನೇಮಕಾತಿ ಪ್ರಕಟಣೆಯನ್ನು ಬದಲಾವಣೆ ಮಾಡಿ ನೇಮಕಾತಿ ಪ್ರಕ್ರಿಯೆಯಲ್ಲಿ ಬದಲಾವಣೆ ಮಾಡಲಾಗಿದೆಯೇ; (ವಿವರ ನೀಡುವುದು)

(ಈ) ಸದರಿ ಹುದ್ದೆಗಳಲ್ಲಿ ಇದುವರೆಗೆ ೩೦೦ಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡದಿರಲು ಕಾರಣಗಳೇನು;

(ಉ) ಸದರಿ ಹುದ್ದೆಗಳಿಗೆ ಯಾವ ಕಾಲಮಿತಿಯಲ್ಲಿ ನೇಮಕಾತಿ ಆದೇಶ ನೀಡಲಾಗುವುದು? (ವಿವರ ನೀಡುವುದು)

## ವಿಶ್ವವಿದ್ಯಾಲಯಗಳಲ್ಲಿರುವ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ ) –**

೩೫೯೪ (೪೦೬೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿಶ್ವವಿದ್ಯಾಲಯಗಳಿಗೆ ಮಂಜೂರಾಗಿರುವ ಬೋಧಕ ಮತ್ತು ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು; (ವಿಶ್ವವಿದ್ಯಾಲಯವಾರು, ವಿಷಯವಾರು ವಿವರ ನೀಡುವುದು)

(ಆ) ಮಂಜೂರಾದ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು)

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡದೆ ಇರುವುದರಿಂದ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸದರಿ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕಾಲಮಿತಿಯಲ್ಲಿ ಅನುಮತಿ ನೀಡುವುದು? (ವಿವರ ನೀಡುವುದು)

## ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ ) –**

೩೫೯೫ (೪೦೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಭಾಗ ಹಾಗೂ ಬೆಳಗಾವಿ ವಿಭಾಗದಲ್ಲಿರುವ ಜಿಲ್ಲೆಗಳಲ್ಲಿ ೧೯೮೬–೮೭ ರಿಂದ ೨೯೯೪–೯೫ರ ಸಾಲಿನಲ್ಲಿ ಪ್ರಾರಂಭವಾಗಿರುವ ಅನುದಾನರಹಿತ ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಇದುವರೆವಿಗೆ ಎಷ್ಟು ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ; (ವಿವರ ನೀಡುವುದು)

(ಇ) ಉಳಿದಿರುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೊಳ–ಪಡಿಸದಿರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುತ್ತದೆ; (ವಿವರ ನೀಡುವುದು)

(ಈ) ಈ ಅವಧಿಯಲ್ಲಿ ಪ್ರಾರಂಭವಾಗಿ ನಡೆಯುತ್ತಿದ್ದು ಸ್ಥಳಾಂತರಗೊಂಡಿರುವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

(ಉ) ಈ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸದೆ ಇರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ವೇತನಾನುದಾನಕ್ಕೊಳ ಪಡಿಸಲಾಗುತ್ತದೆ? (ವಿವರ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಪ್ರಾಂಶುಪಾಲರ ಹುದ್ದೆ ತುಂಬುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ ) –**

೩೫೯೬ (೪೦೬೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಮಾಹಿತಿ ವಿಳಾಸ ಸಹಿತ ನೀಡುವುದು)

(ಆ) ಈ ಕಾಲೇಜುಗಳಲ್ಲಿ ಮಂಜೂರಾಗಿರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಸದರಿ ಕಾಲೇಜುಗಳಲ್ಲಿ ಎಷ್ಟು ಹುದ್ದೆಗಳಲ್ಲಿ ಖಾಯಂ ಪ್ರಾಂಶುಪಾಲರು ಕಾರ್ಯನಿರ್ವಹಿಸುತ್ತಿದ್ದಾರೆ; (ವಿವರ ನೀಡುವುದು)

(ಈ) ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು; (ವಿವರ ನೀಡುವುದು)

(ಉ) ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು?

## ಕುಲಸಚಿವರುಗಳ ನೇಮಕಾತಿ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ ) –**

೩೫೯೭ (೪೦೫೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; (ಹೆಸರು ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕುಲಸಚಿವರುಗಳ (ಆಡಳಿತ, ಮೌಲ್ಯಮಾಪನ) ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಕುಲಸಚಿವರ ನೇಮಕಾತಿಗೆ ಅನುಸರಿಸುತ್ತಿರುವ ಮಾನದಂಡಗಳೇನು; ಕುಲಸಚಿವರ ಸೇವಾವಧಿ ಎಷ್ಟು; (ನೇಮಕಾತಿ ನಿಯಮಗಳ ಬಗ್ಗೆ ಸಂಪೂರ್ಣ ವಿವರ ನೀಡುವುದು)

(ಈ) ರಾಜ್ಯದಲ್ಲಿ ೨೦೧೩ನೇ ಸಾಲಿನಿಂದ ಇದುವರೆಗೆ ಎಷ್ಟು ಜನರನ್ನು ಕುಲಸಚಿವರನ್ನಾಗಿ ನೇಮಕಾಗಿ ಮಾಡಲಾಗಿದೆ; (ವಿವರ ನೀಡುವುದು)

(ಉ) ಸೇವಾ ಅವಧಿಗೆ ಮುಂಚಿತವಾಗಿಯೇ ಹಲವಾರು ಕುಲಸಚಿವರನ್ನು ಬದಲಾವಣೆ ಮಾಡುತ್ತಿರಲು ಕಾರಣಗಳೇನು; ಈ ರೀತಿ ಬದಲಾವಣೆ ಮಾಡಿರುವ ಕುಲಸಚಿವರುಗಳ ವಿವರ ನೀಡುವುದು; ಬದಲಾವಣೆ ಮಾಡಲು ಕಾರಣಗಳೆನು? (ವಿವರ ನೀಡುವುದು)

## ಗಣಿತ ಉಪನ್ಯಾಸಕರನ್ನು ಪರಿಗಣಿಸದಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದರು) –**

೩೫೮ (೩೮೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿಜ್ಞಾನ ವಿಭಾಗದಲ್ಲಿ ಬರುವ ಎಲ್ಲಾ ಐಚ್ಛಿಕ ವಿಷಯಗಳನ್ನು ಪರಿಗಣಿಸಿ ಉಪನ್ಯಾಸಕರ ಹುದ್ದೆಗಳನ್ನು ವೇತನ ಅನುದಾನಕ್ಕೆ ಒಳಪಡಿಸಲಾಗಿರುವುದು ನಿಜವಲ್ಲವೇ;

(ಆ) ಹಾಗಿದ್ದಲ್ಲಿ, ವಿಜ್ಞಾನ ವಿಭಾಗದಲ್ಲಿ ಬರುವ ಗಣಿತ ವಿಷಯದ ಉಪನ್ಯಾಸಕರನ್ನು ಯಾವ ಕಾಲಮಿತಿಯೊಳಗೆ ವೇತನ ಅನುದಾನಕ್ಕೆ ಒಳಪಡಿಸಲಾಗುವುದು; (ಮಾಹಿತಿ ನೀಡುವುದು)

(ಇ) ಗಣಿತ ವಿಷಯಕ್ಕೆ ಸಂಬಂಧಿಸಿದ ಉಪನ್ಯಾಸಕರು ಜಿಲ್ಲೆಯ ಯಾವುದಾದರೂ ಒಂದು ಅನುದಾನಿತ ಕಾಲೇಜಿನಲ್ಲಿ ಗಣಿತ ವಿಷಯಕ್ಕೆ ಸಂಬಂಧಪಟ್ಟ ಕಾರ್ಯಾಭಾರಕ್ಕೆ ಒಪ್ಪಿಕೊಂಡರೆ ಕರ್ತವ್ಯ ನಿರ್ವಹಿಸಲು ಅನುವು ಮಾಡಿಕೊಟ್ಟಲ್ಲಿ ಅಂತಹ ಉಪನ್ಯಾಸಕರನ್ನು ಯಾವ ಕಾಲಮಿತಿಯೊಳಗೆ ವೇತನ ಅನುದಾನಕ್ಕೆ ಒಳಪಡಿಸಲಾಗುವುದು? (ಸ್ಪಷ್ಟ ಮಾಹಿತಿ ನೀಡುವುದು)

## ರಸ್ತೆಗಳ ಅಭಿವೃದ್ಧಿಗೆ ಹಣ ಬಿಡುಗಡೆ.

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದರು) –**

೩೫೯ (೩೯೨೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ ಹಾಗೂ ೨೦೧೬–೧೭ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಅಡಿಯಲ್ಲಿ ಬೀದರ್ ಜಿಲ್ಲೆಯ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರು ಮಾಡಲಾಗಿರುವ ಅನುದಾನದ ಮೊತ್ತವೆಷ್ಟು; (ಮಾಹಿತಿ ನೀಡುವುದು)

(ಆ) ಯಾವ ಯಾವ ರಸ್ತೆಗಳಿಗೆ ಹಣ ಬಿಡುಗಡೆ ಮಾಡಲಾಗಿದೆ; (ಸ್ಪಷ್ಟ ಮಾಹಿತಿ ಒದಗಿಸುವುದು)

(ಇ) ಈ ರಸ್ತೆಗಳ ಅಭಿವೃದ್ಧಿಗೆ ಕೇಂದ್ರ ಹಾಗು ರಾಜ್ಯ ಸರ್ಕಾರದ ಅನುದಾನದಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ಯೋಜನೆಗಳ ವಿವರ ನೀಡುವುದು)

(ಈ) ಬೀದರ್ ವಿಧಾನಸಭಾ ಕ್ಷೇತ್ರಗಳಿಗೂ ರಸ್ತೆಗಳ ದುರಸ್ಥಿಗೆ ಹಣ ಬಿಡುಗಡೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಸ್ಪಷ್ಟ ಮಾಹಿತಿ ಒದಗಿಸುವುದು?

## ಶಾಲಾ ಕಾಲೇಜುಗಳಲ್ಲಿ ಶೌಚಾಲಯಗಳ ಕೊರತೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದರು) –**

೩೬೦೦ (೩೯೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಎಲ್ಲಾ ವಿಧಾನ ಸಭೆ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶೌಚಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಶೌಚಾಲಯಗಳ ಕೊರತೆಯಿರುವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು; (ಶಾಲಾ ಕಾಲೇಜುಗಳವಾರು ಮತ್ತು ಸರ್ಕಾರಿ–ಅನುದಾನಿತವಾರು ವಿವರ ನೀಡುವುದು)

(ಇ) ಶೌಚಾಲಯಗಳಿಲ್ಲದ ಸರ್ಕಾರಿ/ಅನುದಾನಿತ ಶಾಲಾ ಕಾಲೇಜುಗಳಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಮಾಹಿತಿ ನೀಡುವುದು)

(ಈ) ಬೀದರ್ ಜಿಲ್ಲೆಯ ಗ್ರಾಮಾಂತರ ಮತ್ತು ಗಡಿ ಪ್ರದೇಶದಲ್ಲಿನ ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳು ಹಾಗೂ ಅಗತ್ಯ ನೀರಿನ ಸಂಪರ್ಕ ಕಲ್ಪಿಸುವಲ್ಲಿ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? (ಸ್ಪಷ್ಟ ಮಾಹಿತಿ ನೀಡುವುದು)

## ಬಸ್ಸುಗಳು ಹಾಳಾಗಿ ಪ್ರಯಾಣಿಕರಿಗೆ ಅನಾನುಕೂಲವಾಗುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದರು) –**

೩೬೦೧ (೩೯೧೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್‌ನಿಂದ ಹೈದ್ರಾಬಾದ್ ಮಾರ್ಗವಾಗಿ ಬೆಂಗಳೂರು ತಲುಪುವ ಬಸ್ಸುಗಳು ಸಮರ್ಪಕವಾಗಿಲ್ಲದೆ ಪ್ರಯಾಣಿಕರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಕೈಗೊಂಡಿರುವ ಕ್ರಮಗಳೇನು;

(ಆ) ಈ ಬಸ್ಸುಗಳಲ್ಲಿ ಪ್ರಯಾಣಿಕರಿಗೆ ನೀಡಬೇಕಾದ ಮೂಲಸೌಲಭ್ಯಗಳನ್ನು ನೀಡದೇ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಅಧಿಕಾರಿಗಳಿಗೆ ಅನೇಕ ಬಾರಿ ಸಾರ್ವಜನಿಕರು ತಿಳಿಸಿದ್ದರೂ ಈವರೆಗೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು; (ವಿವರ ನೀಡುವುದು)

(ಇ) ಬೀದರ್‌ನಿಂದ ಹೈದ್ರಾಬಾದ್ ಮಾರ್ಗವಾಗಿ ಬೆಂಗಳೂರು ತಲುಪಲು ಸಾರ್ವಜನಿಕರು ಬಹಳ ದಿನಗಳಿಂದ ಹವಾನಿಯಂತ್ರಿತ ಸ್ಲೀಪರ್ ಬಸ್ಸುಗಳ ಬೇಡಿಕೆ ಸಲ್ಲಿಸುತ್ತಿದ್ದು, ಇದನ್ನು ಪ್ರಾರಂಭಿಸಲಾಗುವುದು ಯಾವಾಗಿನಿಂದ? (ವಿವರ ನೀಡುವುದು)

## ಪಠ್ಯ ಪುಸ್ತಕಗಳಲ್ಲಿ ಆಗಿರುವ ಮುದ್ರಣ ಲೋಪಗಳ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೬೦೨ (೪೦೯೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈ ಬಾರಿ ಮುದ್ರಣವಾಗಿರುವ ಪ್ರಥಮ ಪಿ.ಯು.ಸಿಯ ಹಿಂದಿ ಮತ್ತು ಇಂಗ್ಲೀಷ್ ಪಠ್ಯ ಪುಸ್ತಕದ ಮುದ್ರಣದಲ್ಲಿ ದೋಷ ಉಂಟಾಗಿದ್ದು ಕೆಲವು ಪುಟಗಳೆ ಮಾಯವಾಗಿರುವುದು ನಿಜವೇ; (ವಿವರ ನೀಡುವುದು)

(ಆ) ಇತರೆ ಪಠ್ಯ ಪುಸ್ತಕಗಳ ಹೊಸ ಆವೃತ್ತಿಯ ಮುದ್ರಣದಲ್ಲಿಯೂ ಪ್ರಮಾದಗಳಾಗಿರುವುದು ನಿಜವೇ; (ವಿವರ ನೀಡುವುದು)

(ಇ) ಪದವಿಪೂರ್ವ ಶಿಕ್ಷಣ ಇಲಾಖೆಯು ದೋಷ ಪೂರಿತ ಪುಸ್ತಕಗಳನ್ನು ವಾಪಸ್ಸು ಪಡೆದು, ಹೊಸ ಪುಸ್ತಕಗಳನ್ನು ಸರಬರಾಜು ಮಾಡುವಂತೆ ಸೂಚನೆ ನೀಡಿರುವುದು ನಿಜವೇ;

(ಈ) ನಿಜವಾಗಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗುವುದು? (ವಿವರ ನೀಡುವುದು)

## ಬಿ.ಎಂ.ಟಿ.ಸಿ ನೌಕರರಿಗೆ ಮುಂಬಡ್ತಿ ನೀಡುವಲ್ಲಿ ಆಗಿರುವ ತಾರತಮ್ಯದ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೬೦೩ (೪೮೯೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಸೇವೆ ಸಲ್ಲಿಸುತ್ತಿರುವ ನಿರ್ವಾಹಕರಿಗೆ ಕಾಲ ಕಾಲಕ್ಕೆ ಮುಂಬಡ್ತಿ ಸಿಗದೆ ಸರ್ಕಾರಕ್ಕೆ ಮನವಿ ಸಲ್ಲಿಸಿರುವುದು ನಿಜವೆ; ನಿಜವಾಗಿದ್ದಲ್ಲಿ ಅವರ ಪ್ರಮುಖ ಬೇಡಿಕೆಗಳು ಯಾವುವು;

(ಆ) ಸದರಿ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಿರಿಯ ಸಹಾಯಕ, ಭದ್ರತಾ ಪಡೆ, ಮೆಕ್ಯಾನಿಕ್, ಎಲ್ಲ ವರ್ಗದ ಟ್ರಾಫಿಕ್ ಇನ್ಸ್‌ಪೆಕ್ಟರ್, ಸೂಪರ್ ವೈಸರ್‌ಗಳಿಗೆ ಕಾಲಕಾಲಕ್ಕೆ ನೀಡುತ್ತಿರುವ ಮುಂಬಡ್ತಿಗೂ ನಿರ್ವಾಹಕರಿಗೆ ನೀಡುತ್ತಿರುವ ಮುಂಬಡ್ತಿಗೂ ವ್ಯತ್ಯಾಸ ಏನು; (ವಿವರ ನೀಡುವುದು)

(ಇ) ಈ ಸಂಬಂಧ ಮುಂಬಡ್ತಿಯ ತಾರತಮ್ಯವನ್ನು ಪರಿಹರಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು?

## ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೬೦೪ (೪೮೯೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೮೭ ರಿಂದ ೧೯೯೫ರ ವರೆಗೆ ಪ್ರಾರಂಭವಾಗಿ ವೇತನಾನುದಾನಕ್ಕೆ ಒಳಪಡಿಸುವಂತೆ ಸರ್ಕಾರಕ್ಕೆ ಕೋರಿರುವ ರಾಜ್ಯದ ಪ್ರಾಥಮಿಕ, ಪ್ರೌಢ, ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ವೇತನಾನುದಾನಕ್ಕೆ ಒಳಪಡಿಸುವಂತೆ ಕೋರಿಕೆ ಸಲ್ಲಿಸಿದ್ದ ವಿದ್ಯಾಲಯಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ವಿದ್ಯಾಲಯಗಳನ್ನು ಅನುದಾನಕ್ಕೆ ಒಳಪಡಿಸಲಾಗುವುದು ಯಾವಾಗ?

## ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೩೬೦೫ (೪೦೯೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉನ್ನತ ಶಿಕ್ಷಣ ಇಲಾಖೆಗೆ ಸೇರಿದ ವಿಶ್ವ ವಿದ್ಯಾನಿಲಯಗಳು ಯಾವುವು; ವಿವರ ನೀಡುವುದು;

(ಆ) ಸದರಿ ವಿಶ್ವ ವಿದ್ಯಾನಿಲಯಗಳಲ್ಲಿ ಮತ್ತು ವಿಶ್ವವಿದ್ಯಾನಿಲಯಗಳಿಗೆ ಸೇರಿದ ಸರ್ಕಾರಿ ಕಾಲೇಜುಗಳಿಗೆ ಮಂಜೂರು ಮಾಡಲಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಮಂಜೂರು ಮಾಡಲಾದ ಹುದ್ದೆಗಳಲ್ಲಿ ಭರ್ತಿ ಮಾಡಿರುವ ಖಾಯಂ ಹುದ್ದೆಗಳ ಸಂಖ್ಯೆ ಎಷ್ಟು; ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಸದರಿ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಶೇಕಡಾವಾರು ವಿವರ ನೀಡುವುದು?

## ಡೀಸೆಲ್ ಆಟೋ ಕ್ಯಾಬ್‌ಗಳನ್ನು ನೋಂದಾಯಿಸುವ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೩೬೦೬ (೪೦೫೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಡೀಸೆಲ್ ಆಟೋ ಕ್ಯಾಬ್‌ಗಳನ್ನು ಹೊರತುಪಡಿಸಿ ಎಲ್.ಪಿ.ಜಿ/ಪೆಟ್ರೋಲ್ (ದ್ವಿ–ಇಂದನ) ಆಟೋ ರಿಕ್ಷಾ ಕ್ಯಾಬ್‌ಗಳನ್ನು ಮಾತ್ರ ನೋಂದಾಯಿಸಲು/ಪರವಾನಗಿ ನೀಡಲು ಅಧಿಸೂಚನೆ ಹೊರಡಿಸಿದೆಯೇ; ಇದ್ದಲ್ಲಿ, ಯಾವ ಕಾನೂನು ಅಡಿಯಲ್ಲಿ ಅಧಿಸೂಚನೆ ಹೊರಡಿಸಲಾಗಿದೆ; (ಕಾನೂನಿನ ಕಾಯ್ದೆ, ಕಲಂ ಹಾಗೂ ನಿಬಂದನೆಗಳನ್ನು ವಿವರವಾಗಿ ನೀಡುವುದು)

(ಆ) ಡೀಸೆಲ್ ಆಟೋ ಕ್ಯಾಬ್‌ಗಳನ್ನು ರದ್ದುಪಡಿಸಲು ಸಾರ್ವಜನಿಕವಾಗಿ ಯಾವ ಆಧಾರ ಹಾಗೂ ಹಿನ್ನಲೆಯನ್ನು ಪರಿಗಣಿಸಲಾಗಿದೆ; (ವಿವರವಾಗಿ ನೀಡುವುದು)

(ಇ) ಬೆಂಗಳೂರು ನಗರದಲ್ಲಿ ಡೀಸೆಲ್ ಇಂಧನದಿಂದ ಚಲಿಸುವ ಬಸ್, ವ್ಯಾನ್, ಕಾರು, ಲಾರಿ, ಟೆಂಪೋ ಮತ್ತು ಇತರ ವಾಹನಗಳು ಪ್ರತಿ ದಿನ ಎಷ್ಟು ಚಲಿಸುತ್ತಿದೆ; (ಸಂಪೂರ್ಣವಾದ ಪ್ರತಿ ವಾಹನದ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಈ) ಬೆಂಗಳೂರು ನಗರದಲ್ಲಿ ವಾಯು ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸಾರಿಗೆ ಇಲಾಖೆಗೆ ಯಾವುದಾದರೂ ಪರಿಸರದ ಬಗ್ಗೆ ವರದಿ ನೀಡಲಾಗಿದೆಯೇ; ನೀಡಿದ್ದಲ್ಲಿ, ವರದಿಯೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು ;

(ಉ) BS IV ತಾಂತ್ರಿಕತೆ ಉಳ್ಳ ವಾಹನದ ಬಗ್ಗೆ ಸಾರಿಗೆ ಇಲಾಖೆಯಲ್ಲಿ ಮಾಹಿತಿ ಇದೆಯೇ; ಇದ್ದಲ್ಲಿ, ಸಂಪೂರ್ಣ ಮಾಹಿತಿಯನ್ನು ನೀಡುವುದು ;

(ಊ) ಡೀಸೆಲ್ ಇಂಧನದ ವಾಹನ ರದ್ದುಪಡಿಸುವ ಬಗ್ಗೆ ೨೦೧೩ ರಲ್ಲಿ ಉಚ್ಚ ನ್ಯಾಯಾಲಯದಿಂದ ಆದೇಶವಾಗಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು? (ಮಾಹಿತಿ ನೀಡುವುದು)

## ನಗರ ಜಿಲ್ಲಾ ವ್ಯಾಪ್ತಿಯಲ್ಲಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೩೬೦೭ (೪೧೦೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿನ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ವಲಯಗಳ ಸಂಪೂರ್ಣ ಮಾಹಿತಿ ನೀಡುವುದು;

(ಆ) ಬೆಂಗಳೂರು ನಗರ ಜಿಲ್ಲೆಯಲ್ಲಿನ ಐ.ಟಿ/ಬಿ.ಟಿ ಹಾಗೂ ಎಸ್.ಇ.ಜೆಡ್. ವಲಯಗಳ ಬಗ್ಗೆ ಮಾಹಿತಿ ನೀಡುವುದು?

## ಫ್ಲೋರೈಡ್‌ಯುಕ್ತ ಅಂತರ ಜಲದಿಂದ ಆರೋಗ್ಯದ ಮೇಲೆ ಉಂಟಾಗಿರುವ ಸಮಸ್ಯೆ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೩೬೦೮ (೪೧೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ರವರೆವಿಗೂ ಹೆಚ್ಚು ಗಡಸು ಹಾಗೂ ಫ್ಲೋರೈಡ್‌ಯುಕ್ತ ಅಂತರಜಲ ನೀರಿನ ಸೇವನೆಯಿಂದ ಜನರಿಗೆ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗಿದ್ದ ಜಿಲ್ಲೆ ಮತ್ತು ತಾಲ್ಲೂಕುಗಳು ಯಾವುವು: (ಮಾಹಿತಿ ನೀಡುವುದು)

(ಆ) ಈ ರೀತಿಯ ನೀರು ಸೇವನೆಯಿಂದ ಆಗಿರುವ ದುಷ್ಪರಿಣಾಮ ಹಾಗೂ ವಸ್ತುಸ್ಥಿತಿಯು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಮಾಹಿತಿ ನೀಡುವುದು;

(ಇ) ೨೦೧೩ ರಿಂದ ಇಲ್ಲಿಯವರೆವಿಗೂ ಸ್ಥಾಪಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

## ಆರ್.ಎಂ.ಎಸ್.ಎ ಯೋಜನೆ ಕುರಿತು

**ಶ್ರೀ ರಮೇಶ ಬಾಬು (ಶಿಕ್ಷಕರ ಕ್ಷೇತ್ರ) –**

೩೬೦೯ (೪೨೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಯೋಜನೆಯಲ್ಲಿ ೨೦೧೩–೧೪ನೇ ಸಾಲಿನಿಂದ ಎಷ್ಟು ಅನುಪಾತದಲ್ಲಿ ಎಷ್ಟು ಮೊತ್ತದ ಹಣ ಹಂಚಿಕೆ ಮಾಡಲಾಗಿದೆ; ಸದರಿ ಯೋಜನೆಯಲ್ಲಿ ೨೦೧೩–೧೪ನೇ ಸಾಲಿನಿಂದ ೨೦೧೭–೧೮ನೇ ಸಾಲಿನವರೆಗೆ ಎಷ್ಟು ಕಟ್ಟಡ ಕಾಮಗಾರಿಗಳು ಮಂಜೂರಾಗಿರುತ್ತವೆ; ಸದರಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆಯೇ;

(ಆ) ಆರ್.ಎಂ.ಎಸ್.ಎ ಯೋಜನೆಯಲ್ಲಿ ಪೂರ್ಣ ಪ್ರಮಾಣದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ; ಕೈಗೊಳ್ಳದೇ ಇದ್ದಲ್ಲಿ, ಕಾರಣಗಳೇನು;

(ಇ) ಆರ್.ಎಂ.ಎಸ್.ಎ ಯೋಜನೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಎಷ್ಟು ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ; ಇವುಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು; ಬಾಕಿಯಿರುವ ಕಾಮಗಾರಿಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಆರ್.ಎಂ.ಎಸ್.ಎ ಯೋಜನೆಯಲ್ಲಿ ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಬಾಕಿ ಇರುವ ಕಾಮಗಾರಿಗಳೆಷ್ಟು; ಯಾವ ಗುತ್ತಿಗೆದಾರರಿಗೆ ಕಾಮಗಾರಿ ನೀಡಲಾಗಿದೆ ಮತ್ತು ಪೂರ್ಣಗೊಂಡಿರುವ ಕಟ್ಟಡಗಳನ್ನು ಸರ್ಕಾರದ ವಶಕ್ಕೆ ಪಡೆಯಲಾಗಿದೆಯೇ; ಪ್ರಸಕ್ತ ಸಾಲಿನಲ್ಲಿ (೨೦೧೭-೧೮) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಆರ್.ಎಂ.ಎಸ್.ಎ ಯೋಜನೆಯಲ್ಲಿ ಎಷ್ಟು ಕಾಮಗಾರಿ ಮಂಜೂರಾಗಿದೆ; ಇದರ ಹಣ ಬಿಡುಗಡೆ ಆಗಿದೆಯೇ?

## ನಿಷ್ಕ್ರಿಯಗೊಂಡಿರುವ ಬಸ್ಸುಗಳ ಕುರಿತು

**ಶ್ರೀ ರಮೇಶ ಬಾಬು (ಶಿಕ್ಷಕರ ಕ್ಷೇತ್ರ) –**

೩೬೧೦ (೪೨೯೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸಾರಿಗೆ ಇಲಾಖೆಯಲ್ಲಿ (ಎಲ್ಲಾ ನಿಗಮಗಳೂ ಸೇರಿ) ನಿಷ್ಕ್ರಿಯಗೊಂಡಿರುವ ಎಷ್ಟು ಬಸ್ಸುಗಳು ಇರುತ್ತವೆ; ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸಾರಿಗೆ ಇಲಾಖೆಯು ನಿಷ್ಕ್ರಿಯಗೊಂಡ ಎಷ್ಟು ಬಸ್ಸುಗಳನ್ನು ಹರಾಜು ಮೂಲಕ ವಿಲೇವಾರಿ ಮಾಡಿರುತ್ತದೆ; ಬಸ್ಸುಗಳನ್ನು ನಿಷ್ಕ್ರಿಯ ಎಂದು ಘೋಷಿಸಲು ರಾಜ್ಯ ಸಾರಿಗೆ ಇಲಾಖೆ ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ;

(ಆ) ತುಮಕೂರು ಜಿಲ್ಲೆಯಲ್ಲಿ ಒಟ್ಟು ಎಷ್ಟು ಬಸ್ ಡಿಪೋಗಳು ಇರುತ್ತವೆ; (ತಾಲ್ಲೂಕುವಾರು ವಿವರ ನೀಡುವುದು) ತುಮಕೂರು ಜಿಲ್ಲೆಯಲ್ಲಿ ಎಷ್ಟು ಖಾಸಗಿ ಬಸ್ಸುಗಳು ಸಾರಿಗೆ ಇಲಾಖೆಯ ಅನುಮತಿ ಪಡೆದು ಓಡಾಡುತ್ತಿವೆ; ಅನಧಿಕೃತ ಬಸ್ಸುಗಳು ಪರ್ಮಿಟ್ ಇಲ್ಲದೇ ಚಾಲನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; ಬಂದಿದ್ದಲ್ಲಿ, ಇವುಗಳ ನಿಗ್ರಹಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಗ್ರಾಮೀಣ ಸಾರಿಗೆ ಅಡಿಯಲ್ಲಿ ಎಷ್ಟು ಬಸ್ಸುಗಳು ಪ್ರತಿ ದಿನ ಓಡಾಟ ಮಾಡುತ್ತವೆ; ಸದರಿ ತಾಲ್ಲೂಕಿನಲ್ಲಿ ಎಲ್ಲಾ ಹಳ್ಳಿಗಳಿಗೆ ಗ್ರಾಮೀಣ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವಾಗ ಗ್ರಾಮೀಣ ಸಾರಿಗೆಯನ್ನು ಕಲ್ಪಿಸಲಾಗುವುದು;

(ಈ) ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ನಗರದಿಂದ ಬೆಂಗಳೂರು, ಮೈಸೂರು, ಶಿವಮೊಗ್ಗ, ದಾವಣಗೆರೆ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಚಿತ್ರದುರ್ಗ ಜಿಲ್ಲಾ ಕೇಂದ್ರಗಳಿಗೆ ನೇರ ಪ್ರಯಾಣದ ಎಷ್ಟು ಬಸ್ಸುಗಳನ್ನು ಸಾರಿಗೆ ಇಲಾಖೆಯಿಂದ ನೀಡಲಾಗಿದೆ; ನೀಡದಿದ್ದಲ್ಲಿ, ಕಾರಣವೇನು; ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಸಾರಿಗೆ ಇಲಾಖೆಯ ಎಷ್ಟು ಬಸ್ ಡಿಪೋಗಳು ಇರುತ್ತವೆ?

## ಸಣ್ಣ ಕೈಗಾರಿಕೆಗಳ ಮಾಹಿತಿ ಕೋರಿ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೬೧೧ (೪೨೯೮) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕದಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ತೆರೆಯಲಾಗಿದೆ; ರಾಜ್ಯ ಸರ್ಕಾರವು ಸಣ್ಣ ಕೈಗಾರಿಕೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಿರುತ್ತದೆ;

(ಆ) ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಮೂಲಕ ಕಳೆದ ಮೂರು ವರ್ಷಗಳಲ್ಲಿ ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ; (ವಿವರ ನೀಡುವುದು)

(ಇ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಸಣ್ಣ ಕೈಗಾರಿಕಾ ಇಲಾಖೆಯು ಸಣ್ಣ ಕೈಗಾರಿಕಾ ಅಭಿವೃದ್ಧಿಗೆ ಯಾವುದಾದರೂ ಯೋಜನೆಯನ್ನು ಕೈಗೊಂಡಿದೆಯೇ; ಇಲ್ಲದೇ ಹೋದಲ್ಲಿ, ಯೋಜನೆಯನ್ನು ಕೈಗೊಳ್ಳುವ ಪ್ರಸ್ತಾಪ ಸರ್ಕಾರದ ಮುಂದಿದೆಯೆ; ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಹಾಲಿ ಎಷ್ಟು ಸಣ್ಣ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿವೆ;

(ಈ) ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಮೂಲಕ ವಿಶ್ವ ಯೋಜನೆಯಲ್ಲಿ ರಾಜ್ಯದಲ್ಲಿ ಎಷ್ಟು ಕೈಗಾರಿಕಾ ಷೆಡ್‌ಗಳನ್ನು ನಿರ್ಮಿಸಲಾಗಿದೆ; ಇವುಗಳಲ್ಲಿ ಎಷ್ಟು ಕೈಗಾರಿಕಾ ಷೆಡ್‌ಗಳನ್ನು ಬಳಸಲಾಗುತ್ತಿದೆ; ನಿಷ್ಕ್ರೀಯವಾಗಿರುವ ಷೆಡ್‌ಗಳೆಷ್ಟು; ಇವುಗಳ ಮರು ಬಳಕೆಗೆ ರಾಜ್ಯ ಸರ್ಕಾರ ಯೋಜನೆಯನ್ನು ರೂಪಿಸಿದೆಯೇ;

(ಉ) ರಾಜ್ಯದಲ್ಲಿ ಒಟ್ಟು ಎಷ್ಟು ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ; ಇವುಗಳಲ್ಲಿ ಸರ್ಕಾರಿ/ಸಹಕಾರಿ/ಅರೆ ಸರ್ಕಾರಿ ಹಾಗೂ ಖಾಸಗಿ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು; ರಾಜ್ಯ ಸರ್ಕಾರವು ಕಬ್ಬು ಬೆಳೆಗಾರರಿಗೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮೊತ್ತದ ಬೆಂಬಲ ಬೆಲೆಯನ್ನು ಮಂಜೂರು ಮಾಡಿರುತ್ತದೆ ಮತ್ತು ಹಂಚಿಕೆಯಾಗಿರುವ ಹಣವೆಷ್ಟು; ಪಾವತಿಗೆ ಬಾಕಿಯಿರುವ ಹಣವೆಷ್ಟು?

## ತುಮಕೂರು ಜಿಲ್ಲೆಯ ಗಣಿಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೬೧೨ (೪೨೯೬) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಇರುವ ಸಿ–ಕ್ಯಾಟಗರಿ ಕಬ್ಬಿಣದ ಅದಿರಿನ ಗಣಿಗಳೆಷ್ಟು; ಇವುಗಳಲ್ಲಿ ಎಷ್ಟು ಗಣಿಗಳನ್ನು ಹರಾಜು ಮೂಲಕ ನೀಡಲಾಗಿದೆ; ಸದರಿ ತಾಲ್ಲೂಕಿನಲ್ಲಿ ಎಷ್ಟು ಕಬ್ಬಿಣದ ಅದಿರಿನ ಗಣಿಗಳನ್ನು ಹರಾಜು ಮಾಡಲು ಪ್ರಕ್ರಿಯೆ ಮಾಡಲಾಗಿದೆ;

(ಆ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕಬ್ಬಿಣದ ಅದಿರಿನ ಗಣಿಗಳನ್ನು ಹೊರತುಪಡಿಸಿ ಉಳಿದ ಎಷ್ಟು ವಿಧದ ಗಣಿಗಳಿಗೆ ಅನುಮತಿ ನೀಡಲಾಗಿದೆ; (ವಿವರವಾದ ಪಟ್ಟಿಯನ್ನು ಹೆಸರು ಸಹಿತವಾಗಿ ವಿಸ್ತೀರ್ಣದೊಂದಿಗೆ ನೀಡುವುದು)

(ಇ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ಗಣಿಗಳ ಮೂಲಕ ಎಷ್ಟು ರಾಜಸ್ವವನ್ನು ಸಂಗ್ರಹ ಮಾಡಲಾಗಿದೆ; ಬಾಕಿಯಿರುವ ರಾಜಸ್ವ ಎಷ್ಟು; ಜಿಲ್ಲಾಧಿಕಾರಿಗಳು

ಸೆಸ್ ಮೂಲಕ ಗಣಿಗಳಿಂದ ಎಷ್ಟು ಹಣವನ್ನು ಸಂಗ್ರಹ ಮಾಡಿರುತ್ತಾರೆ; ಅದನ್ನು ಯಾವ ಖಾತೆಯಲ್ಲಿ ಇಡಲಾಗಿದೆ; ಮತ್ತು ಇದನ್ನು ಸ್ಥಳೀಯ ಪ್ರದೇಶಾಭಿವೃದ್ಧಿಗೆ ಬಳಸಲು ಸರ್ಕಾರ ಕ್ರಿಯಾ ಯೋಜನೆ ರೂಪಿಸಿದೆಯೇ;

(ಈ) ತುಮಕೂರು ಜಿಲ್ಲೆಯಲ್ಲಿ ಗಣಿ ಇಲಾಖೆಯು ಎಷ್ಟು ಮರಳುಗಾರಿಕೆ ಗಣಿಗಳಿಗೆ ಅನುಮತಿ ನೀಡಿರುತ್ತದೆ; ತುಮಕೂರು ಜಿಲ್ಲೆಯಲ್ಲಿ ಮರಳು ಗಣಿಗಾರಿಕೆಗೆ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿರುತ್ತವೆ; ಅನುಮತಿ ನೀಡಿದ ಮತ್ತು ಬಾಕಿ ಇರುವ ಅರ್ಜಿಗಳು ಎಷ್ಟು; ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಮರಳುಗಾರಿಕೆಗೆ ಅನುಮತಿ ಪತ್ರಗಳನ್ನು ನೀಡಲಾಗಿದೆಯೇ; ನೀಡಿದ್ದಲ್ಲಿ, ಯಾರಿಗೆ ಮತ್ತು ಎಷ್ಟು ಅವಧಿಗೆ ನೀಡಲಾಗಿರುತ್ತದೆ?

## ಜಿಲ್ಲಾ ಪಂಚಾಯತ್ ಇಲಾಖೆಗೆ ಒದಗಿಸಿರುವ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೬೧೩ (೩೮೬೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ರಿಂದ ೨೦೧೭–೧೮ರವರೆಗೆ ರಾಜ್ಯದಲ್ಲಿ ಜಿಲ್ಲಾ ಪಂಚಾಯತಿ ಇಲಾಖೆಗೆ ಒದಗಿಸಿದ ಅನುದಾನ ಎಷ್ಟು; (ವಿವರ ನೀಡುವುದು)

(ಆ) ಈ ಇಲಾಖೆಯಿಂದ ನಿರ್ವಹಿಸಲ್ಪಡುವ ಅಭಿವೃದ್ಧಿ ಕೆಲಸ, ಯೋಜನೆಗಳು ಯಾವುವು;

(ಇ) ಈ ಇಲಾಖೆಯಿಂದ ಹಾವೇರಿ ಜಿಲ್ಲೆಗೆ ಮಂಜೂರಾದ, ಬಿಡುಗಡೆಯಾದ ಹಾಗೂ ಖರ್ಚಾದ ಹಣ ಎಷ್ಟು;

(ಈ) ಹಾವೇರಿ ಜಿಲ್ಲೆಯಲ್ಲಿ ೬ ವಿಧಾನ ಸಭಾ ಕ್ಷೇತ್ರದಲ್ಲಿ ಆದ ಕಾಮಗಾರಿಗಳು ಯಾವುವು; ಅವುಗಳು ಯಾವುವು; ಈ ಕಾಮಗಾರಿಗಳಿಗಾಗಿ ಖರ್ಚು ಮಾಡಿದ ಹಣವೆಷ್ಟು; ಯಾವ ಹಂತದಲ್ಲಿವೆ? (ಸಂಪೂರ್ಣ ವಿವರ ನೀಡುವುದು)

## ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಶಿಕ್ಷಕರ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೬೧೪ (೪೯೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಶಿಕ್ಷಕ/ ಉಪನ್ಯಾಸಕರು ಕುಮಾರ್ ನಾಯಕ್ ವರದಿ ಜಾರಿಗೊಳಿಸುವ ನಿಟ್ಟಿನಲ್ಲಿ ಹೋರಾಟ ಕೈಗೊಂಡ ಸಂದರ್ಭದಲ್ಲಿ ಸರ್ಕಾರವು ಒಂದು ವೇತನ ಬಡ್ತಿ ನೀಡುವುದಾಗಿ ಘೋಷಣೆ ಮಾಡಿದ್ದು ನಿಜವೇ;

(ಆ) ಈ ಬಗ್ಗೆ ಆದೇಶ ಹೊರಡಿಸಲಾಗಿದೆಯೇ; (ಆದೇಶದ ಪ್ರತಿ ಒದಗಿಸುವುದು) ಇದು ಮೂಲ ವೇತನದ ಭಾಗವಾಗಿರುವುದೇ; ಯಾವ ಯಾವ ಶಿಕ್ಷಕ ವೃಂದದವರಿಗೆ ನೀಡಲಾಗಿದೆ; (ಪ್ರತಿಯೊಂದು ಆದೇಶದ ಪ್ರತಿ ನೀಡುವುದು)

(ಇ) ಈ ವೇತನ ಬಡ್ತಿಯನ್ನು ಡಿ.ಎಡ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕ/ಪ್ರಾಂಶುಪಾಲರಿಗೆ ನೀಡಲಾಗಿದೆಯೇ; ನೀಡಿದ್ದರೆ ಆದೇಶ ಪ್ರತಿ ನೀಡುವುದು; ಈ ಉಪನ್ಯಾಸಕ/ಪ್ರಾಂಶುಪಾಲರ ಸಂಖ್ಯೆ ಎಷ್ಟು; ನೀಡದೆ ಇದಲ್ಲಿ ಯಾವಾಗ ನೀಡಲಾಗುವುದು; ನೀಡದಿರಲು ಕಾರಣವೇನು;

ಈ) ಡಿ.ಎಡ್ ಶಿಕ್ಷಕ/ಉಪನ್ಯಾಸಕರು ಯಾವ ವೃಂದಕ್ಕೆ ಸೇರಿದವರು?

## ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಕಟ್ಟಡಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೬೧೫ (೪೧೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೦೧ ರಿಂದ ೦೭ನೇ ತರಗತಿ ಶಾಲೆಗಳ ಸಂಖ್ಯೆ ಎಷ್ಟು; ಕನ್ನಡ ಮಾಧ್ಯಮದ ಬಾಲಕ ಮತ್ತು ಬಾಲಕಿಯರ ಶಾಲೆಗಳ ಸಂಖ್ಯೆ ಮತ್ತು ಕೊಠಡಿಗಳ ಸಂಖ್ಯೆ ಎಷ್ಟು;

(ಆ) ರಾಜ್ಯದಲ್ಲಿ ೦೮ ರಿಂದ ೧೦ನೇ ತರಗತಿಯವರೆಗೆ ಇರುವ ಶಾಲೆಗಳ ಸಂಖ್ಯೆ ಎಷ್ಟು; ಕನ್ನಡ ಮಾಧ್ಯಮದ ಬಾಲಕ ಮತ್ತು ಬಾಲಕಿಯರ ಶಾಲೆಗಳ ಸಂಖ್ಯೆ ಮತ್ತು ಕೊಠಡಿಗಳ ಸಂಖ್ಯೆ ಎಷ್ಟು;

(ಇ) ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳಿವೆಯೇ;

(ಈ) ಈ ಕೊಠಡಿಗಳಲ್ಲಿ ಎಷ್ಟು ಸುಸ್ಥಿತಿಯಲ್ಲಿರುವ ಕೊಠಡಿಗಳಿವೆ; ಎಷ್ಟು ದುರಸ್ಥಿಯಲ್ಲಿವೆ; ಹಾಗೂ ಶಿಥಿಲಾವಸ್ಥೆಯಲ್ಲಿವೆ; ಎಷ್ಟು ನೆಲಸಮವಾಗಿವೆ; (ವಿವರ ನೀಡುವುದು)

(ಉ) ಹಾವೇರಿ ಜಿಲ್ಲೆಯ ೦೭ ತಾಲ್ಲೂಕುಗಳಲ್ಲಿ ಇರುವ ಶಾಲೆಗಳ ಸಂಖ್ಯೆ ಎಷ್ಟು; ಕೊಠಡಿಗಳ ಸಂಖ್ಯೆ ಎಷ್ಟು; ಕೊಠಡಿಗಳ ಸಂಖ್ಯೆಗನುಗುಣವಾಗಿ ಮಕ್ಕಳಿದ್ದಾರೆಯೇ; ಈ ಕೊಠಡಿಗಳು ಯಾವ ಸ್ಥಿತಿಯಲ್ಲಿದೆ? (ತಾಲ್ಲೂಕುವಾರು ಕೊಠಡಿ ಸಂಖ್ಯೆ, ಮಕ್ಕಳ ಸಂಖ್ಯೆ ವಿವರ ನೀಡುವುದು)

## ಡಿ.ಇಡಿ. ಯಲ್ಲಿ ವಿಜ್ಞಾನ ಮತ್ತು ಇಂಗ್ಲೀಷ್ ವಿಭಾಗದವರಿಗೆ ಸಿ.ಇ.ಟಿ ಅವಕಾಶ ನಿರಾಕರಣೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೬೧೬ (೩೯೧೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಿ.ಇಡಿ. ಯಲ್ಲಿ ವಿಜ್ಞಾನ ಮತ್ತು ಇಂಗ್ಲೀಷ್ ಬೋಧನಾಭ್ಯಾಸ ಮಾಡಿದವರು ಪದವಿಯನ್ನು ಕಲಾ ವಿಭಾಗದಲ್ಲಿ ಪೂರ್ಣಗೊಳಿಸಿರುವವರಿಗೆ (ಐಚ್ಛಿಕ ಇಂಗ್ಲೀಷ್ ಹೊರತುಪಡಿಸಿ) ಸಿ.ಇ.ಟಿ.ಯಲ್ಲಿ ಅವಕಾಶ ನಿರಾಕರಣೆ ಆಗುತ್ತದೆ ಎಂಬ ಅಭ್ಯರ್ಥಿಗಳ ಆರೋಪ ನಿಜವೇ;

(ಆ) ಡಿ.ಇಡಿ.ಯಲ್ಲಿ ಕಲಾ ವಿಭಾಗದವರಿಗೂ ವಿಜ್ಞಾನ ಮತ್ತು ಇಂಗ್ಲೀಷ್ ಬೋಧನಾ ಅಭ್ಯಾಸಕ್ಕೆ ಅವಕಾಶ ಮಾಡಿಕೊಟ್ಟ ಮತ್ತು ಟಿ.ಇ.ಟಿ ಬರೆಯಲೂ ಅವಕಾಶ ಮಾಡಿಕೊಟ್ಟ ಇಲಾಖೆ ಇಂತಹ ಅಭ್ಯರ್ಥಿಗಳನ್ನು ಸಿ.ಇ.ಟಿ.ಯಲ್ಲಿ ಕೈ ಬಿಡುವುದು ಸರಿಯೇ;

(ಇ) ಈ ನಿಯಮದಿಂದ ಅನ್ಯಾಯವಾಗುತ್ತಿರುವ ಅಭ್ಯರ್ಥಿಗಳಿಗೆ ಸರ್ಕಾರ ಯಾವ ರೀತಿ ಸ್ಪಂದಿಸುತ್ತದೆ; ಇದಕ್ಕೆ ಸಂಬಂಧಿಸಿದಂತೆ ಸರ್ಕಾರ ಕೈಗೊಂಡಿರುವ ಕ್ರಮವೇನು?

## ಬಿ.ಎಂ.ಟಿ.ಸಿ ಸಂಸ್ಥೆಯ ಸಾಲ ಮತ್ತು ಗುತ್ತಿಗೆ ಆಧಾರದ ಬಸ್‌ಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೬೧೭ (೩೮೯೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಎಂ.ಟಿ.ಸಿಯು ವಿವಿಧ ಬ್ಯಾಂಕ್‌ಗಳಿಂದ ಹಲವಾರು ಕೋಟಿ ಸಾಲ ಪಡೆದು ಹೊಸದಾಗಿ ಬಸ್ಸುಗಳನ್ನು ಖರೀದಿಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಬಿ.ಎಂ.ಟಿ.ಸಿಯು ಗುತ್ತಿಗೆ ಬಸ್‌ಗಳನ್ನು ಉಪಯೋಗಿಸುತ್ತಿರಲು ಕಾರಣಗಳೇನು; ಸಾರಿಗೆ ವ್ಯವಸ್ಥೆಯನ್ನು ಬಲಗೊಳಿಸಿ ಚತುರ ಸಾರಿಗೆ ಅನುಷ್ಠಾನಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು; (ವಿವರ ನೀಡುವುದು)

(ಇ) ಕಳೆದ ೪ ವರ್ಷಗಳಿಂದ ಹೊಸ ಬಸ್‌ಗಳು ಸೇರ್ಪಡೆಯಾದ ನಂತರ ಗುಜರಿಗೆ ಸೇರಿದ ಬಸ್ಸ್‌ಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಅನಗತ್ಯ ಬಸ್ಸ್ ಸೇರ್ಪಡೆ ಹಾಗೂ ಗುಜರಿಗೆ ತಳ್ಳಲ್ಪಟ್ಟರೂ ಸಹ ಗುತ್ತಿಗೆ ಸೇವೆಯ ಬಸ್ಸ್‌ಗಳ ಅಗತ್ಯವಿದೆ ಎಂದು ಸರ್ಕಾರ ಭಾವಿಸುವುದೇ?

## ಕರ್ನಾಟಕ ವಿಶ್ವ ವಿದ್ಯಾಲಯ ಸ್ನಾತಕೋತ್ತರ ಕೇಂದ್ರದ ಬಗ್ಗೆ

**ಶ್ರೀ ಎಸ್.ವ್ಹಿ ಸಂಕನೂರ (ಪದವೀಧರರ ಕ್ಷೇತ್ರ) –**

೩೬೧೮ (೪೧೨೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ ಸ್ನಾತಕೋತ್ತರ ಕೇಂದ್ರ, ಗದಗ ಇದರ ಆಡಳಿತಾತ್ಮಕ ಕಛೇರಿ ಹಾಗೂ ಇನ್ನುಳಿದ ಕಟ್ಟಡಕ್ಕಾಗಿ ಯೋಜನೆಯನ್ನು ತಯಾರಿಸಲಾಗಿದೆಯೇ; ಹಾಗಿದ್ದಲ್ಲಿ, ಈ ಯೋಜನೆಯನ್ನು ತಯಾರಿಸಲಾಗಿದ್ದು ಯಾವಾಗ:

(ಆ) ಕರ್ನಾಟಕ ವಿಶ್ವವಿದ್ಯಾಲಯ ಸ್ನಾತಕೋತ್ತರ ಕೇಂದ್ರ, ಗದಗ ಇದರ ಕಟ್ಟಡಕ್ಕಾಗಿ ಭೂಮಿಯನ್ನು ಖರೀದಿಸಲು ಬಿಡುಗಡೆ ಮಾಡಿರುವ

ಹಣ ಎಷ್ಟು; ಬಿಡುಗಡೆ ಮಾಡಲಾಗಿದ್ದು ಯಾವಾಗ; ಅಲ್ಲದೇ ಈ ಹಣದಲ್ಲಿ ಎಷ್ಟು ಹಣವನ್ನು ನೀಡಿ ಎಷ್ಟು ಭೂಮಿಯನ್ನು ಖರೀದಿಸಲಾಗಿದೆ; (ವಿವರಣೆ ನೀಡುವುದು)

(ಇ) ಸ್ನಾತಕೋತ್ತರ ಕೇಂದ್ರ, ಗದಗ ಇದರ ಕಟ್ಟಡಕ್ಕಾಗಿಯೇ ಎಷ್ಟು ಹಣ ಮತ್ತು ಯಾವಾಗ ಬಿಡುಗಡೆ ಮಾಡಲಾಗಿದೆ;

(ಈ) ಈ ಕಟ್ಟಡದ ಕಾಮಗಾರಿಗೆ ಟೆಂಡರ್ ಕರೆಯಲು ಹಣಕಾಸಿನ ಕೊರತೆ ಇರುವುದು ನಿಜವೇ;

(ಉ) ಸ್ನಾತಕೋತ್ತರ ಕೇಂದ್ರ, ಗದಗ ಕಟ್ಟಡದ ಕಾಮಗಾರಿ ಯಾವಾಗ ಪ್ರಾರಂಭಿಸುವಿರಿ?

## ವಾರ್ಷಿಕ ವೇತನ ಬಡ್ತಿ ಹಿಂಪಡೆಯುವ ಬಗ್ಗೆ

**ಶ್ರೀ ಎಸ್.ವ್ವಿ ಸಂಕನೂರ (ಪದವೀಧರರ ಕ್ಷೇತ್ರ) –**

೩೬೯ (೪೧೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಪ್ರಾಥಮಿಕ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶಿಕ್ಷಕ/ಉಪನ್ಯಾಸಕರಾಗಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ತದನಂತರ ಸಕ್ರಮಗೊಂಡಿರುವ ಸಿಬ್ಬಂದಿ ಗುತ್ತಿಗೆ ಆಧಾರದಲ್ಲಿ ಸಲ್ಲಿಸಿದ ಸೇವೆಗೆ ವಾರ್ಷಿಕ ವೇತನ ಬಡ್ತಿ ನೀಡಿದ್ದನ್ನು ಹಿಂಪಡೆದುಕೊಳ್ಳಲು ಆದೇಶ ಹೊರಡಿಸಿದ್ದು ನಿಜವೇ; ಹಾಗಿದ್ದಲ್ಲಿ ಯಾವಾಗ ಆದೇಶ ಹೊರಡಿಸಲಾಯಿತು; (ಅದರ ಕುರಿತು ಮಾಹಿತಿ ನೀಡುವುದು)

(ಆ) ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ತದನಂತರ ಸಕ್ರಮಗೊಂಡಿರುವ ಶಿಕ್ಷಕ/ಉಪನ್ಯಾಸಕರು ದಿನಾಂಕ:೦೧.೦೯.೨೦೧೭ರ ಪೂರ್ವದಲ್ಲಿ ನಿವೃತ್ತಿಯಾದ ಸಿಬ್ಬಂದಿಗೆ ವಾರ್ಷಿಕ ವೇತನ ಬಡ್ತಿ ಹಿಂಪಡೆಯದೇ ನಿವೃತ್ತಿ ಸಂದರ್ಭಗಳಲ್ಲಿ ನೀಡಬೇಕಾದ ಎಲ್ಲಾ ರೀತಿಯ ಸೌಲಭ್ಯ ನೀಡಿರುವುದು ನಿಜವೇ? (ವಿವರ ನೀಡುವುದು)

## ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೬೨೦ (೪೧೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು; (ವಿವರವಾಗಿ ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಸ್ತರದ ಸಿಬ್ಬಂದಿಗಳೆಷ್ಟು; (ಬಿಲ್ ಕಲೆಕ್ಟರ್, ನೀರು ವಿತರಕ, ವಾಲ್‌ಮ್ಯಾನ್, ಜವಾನ, ಡಾಟಾ ಎಂಟ್ರಿ ಆಪರೇಟರ್, ಸ್ವಚ್ಛತಾಗಾರ, ಇತರೆ ಸಿಬ್ಬಂದಿಗಳ ವಿವರಗಳ ಮಾಹಿತಿ ನೀಡುವುದು)

(ಇ) ಜಿಲ್ಲಾ ಪಂಚಾಯತಿಯಿಂದ ಅನುಮೋದನೆಯಾಗಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಅನುಮೋದನೆಗೊಳ್ಳದೆ ಬಾಕಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಈ) ಇವರನ್ನು ಯಾವ ಕಾಲಮಿತಿಯೊಳಗೆ ಅನುಮೋದನೆ ನೀಡಿ ಆದೇಶ ಹೊರಡಿಸಲಾಗುವುದು? (ಮಾಹಿತಿ ನೀಡುವುದು)

## ಕೆ.ಎಸ್.ಐ.ಸಿ. ಶಾಖೆಗಳು

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೬೨೧ (೪೧೪೭) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೆ.ಎಸ್.ಐ.ಸಿ ಶಾಖೆಗಳು ಎಷ್ಟು; ಇವುಗಳ ವಾರ್ಷಿಕ ಆದಾಯವೆಷ್ಟು;

(ಆ) ಕೆ.ಎಸ್.ಐ.ಸಿ ಶಾಖೆಯನ್ನು ಸ್ಥಾಪಿಸಲು ಇರುವ ಮಾನದಂಡಗಳೇನು;

(ಇ) ಬೇಡಿಕೆ ಹೆಚ್ಚಾಗಿದ್ದರೂ ಉತ್ಪಾದನೆ ಕುಂಠಿತವಾಗಿರುವುದಕ್ಕೆ ಕಾರಣಗಳೇನು?

## ವಿಶ್ವವಿದ್ಯಾನಿಲಯಗಳ ಬೋಧಕರನ್ನು ಬೇರೆ ಇಲಾಖೆಗಳಿಗೆ ನಿಯೋಜನೆ ಮಾಡುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೨೨ (೪೧೧೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವವಿದ್ಯಾನಿಲಯಗಳಿಗೆ ಮಂಜೂರಾದ ಬೋಧಕರ ಹುದ್ದೆಗಳಲ್ಲಿ ಪ್ರಾಧ್ಯಾಪಕ, ಸಹ ಪ್ರಾಧ್ಯಾಪಕ ಹುದ್ದೆಗಳೆಷ್ಟು; ಹಾಗೂ ಭರ್ತಿ ಮಾಡಲಾದ ಮತ್ತು ಖಾಲಿ ಹುದ್ದೆಗಳ ವಿಶ್ವವಿದ್ಯಾನಿಲಯಗಳವಾರು ವಿವರ ನೀಡುವುದು;

(ಆ) ವಿಶ್ವವಿದ್ಯಾನಿಲಯಗಳಿಂದ ಅನ್ಯ ಇಲಾಖೆಗಳಿಗೆ ನಿಯೋಜನೆಗೊಂಡಿರುವ ಬೋಧಕರ ಸಂಖ್ಯೆ ಎಷ್ಟು; (ವಿಶ್ವವಿದ್ಯಾನಿಲಯವಾರು ವಿವರ ನೀಡುವುದು)

(ಇ) ವಿಶ್ವವಿದ್ಯಾನಿಲಯಗಳಲ್ಲಿ ಅನೇಕ ಬೋಧಕ ಹುದ್ದೆಗಳು ಖಾಲಿ ಇದ್ದರೂ ಯು.ಜಿ.ಸಿ ನಿಯಮ ಉಲ್ಲಂಘಿಸಿ ಅನ್ಯ ಇಲಾಖೆಗಳಿಗೆ ಬೋಧಕರನ್ನು ನಿಯೋಜನೆ ಮಾಡಲು ಕಾರಣಗಳೇನು; ಇವರನ್ನು ಹಿಂಪಡೆಯಲಾಗುವುದು ಯಾವಾಗ;

(ಈ) ವಿಶ್ವವಿದ್ಯಾನಿಲಯಗಳಲ್ಲಿ ಅನೇಕ ಬೋಧಕರ ಹುದ್ದೆಗಳು ಖಾಲಿ ಇದ್ದರೂ ಇವರನ್ನು ಅನ್ಯ ಇಲಾಖೆಗೆ ನಿಯೋಜಿಸಿ ನಂತರ ವಿಲೀನಗೊಳಿಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ರಾಜ್ಯದ ಜಿಲ್ಲಾ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಸುನೀಲ್ ಸುಬ್ರಮಣಿ. ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೨೩ (೩೮೯೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲಾ ಪಂಚಾಯತಿಗಳಲ್ಲಿ (ಪ್ರಸ್ತುತ ಮಾಹೆವರೆಗೆ) ಖಾಲಿಯಿರುವ ಹುದ್ದೆಗಳೆಷ್ಟು; (ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿನ ಜಿಲ್ಲಾ ಪಂಚಾಯತಿಯಲ್ಲಿ ಮುಖ್ಯಕಾರ್ಯನಿರ್ವಹಣಾಧಿಕಾರಿ, ಉಪಕಾರ್ಯದರ್ಶಿ,ಮುಖ್ಯ ಯೋಜನಾಧಿಕಾರಿ, ಮುಖ್ಯಲೆಕ್ಕಾಧಿಕಾರಿ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ, ಸಹಾಯಕ ಯೋಜನಾಧಿಕಾರಿ (ಡಿಆರ್‌ಡಿಎ ಕೋಶ) ಹುದ್ದೆಗಳು ಹಲವು ಸಮಯಗಳಿಂದ ಖಾಲಿಯಿರುವುದು ನಿಜವೇ;

(ಇ) ಹೌದಾದಲ್ಲಿ, ಹುದ್ದೆಗಳನ್ನು ತುಂಬಲು ಸರ್ಕಾರ ಯಾವುದೇ ಕ್ರಮ ವಹಿಸದಿರಲು ಕಾರಣವೇನು;

(ಈ) ಯಾವ ನಿಗಧಿತ ಸಮಯದೊಳಗೆ ಹುದ್ದೆಗಳನ್ನು ತುಂಬಲಾಗುವುದು? (ಮಾಹಿತಿ ನೀಡುವುದು)

## ಶಿಕ್ಷಣ ಇಲಾಖೆಯಲ್ಲಿನ ನೌಕರರಿಗೆ ಬಡ್ತಿಯಲ್ಲಿನ ವಿಳಂಬದ ಕುರಿತು

**ಶ್ರೀ ಸುನೀಲ್ ಸುಬ್ರಮಣಿ. ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೨೪ (೩೮೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿಕ್ಷಣ ಇಲಾಖೆಯಲ್ಲಿ ಅಕ್ಟೋಬರ್ ೨೦೧೮ನೇ ಮಾಹೆಯ ಅಂತ್ಯಕ್ಕೆ ದ್ವಿತೀಯ ದರ್ಜೆ ಸಹಾಯಕರು, ಪ್ರಥಮ ದರ್ಜೆ ಸಹಾಯಕರು, ಅಧೀಕ್ಷಕರು, ವ್ಯವಸ್ಥಾಪಕರು ಹಾಗೂ ಪತ್ರಾಂಕಿತ ವ್ಯವಸ್ಥಾಪಕರ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಯಾವ ಕ್ರಮ ವಹಿಸಲಾಗಿದೆ; (ಮಾಹಿತಿ ನೀಡುವುದು)

(ಇ) ಬಡ್ತಿ ನೀಡಲು ಬಾಕಿಯಿರುವ ಅರ್ಹ ನೌಕರರೆಷ್ಟು; ಹುದ್ದೆವಾರು ಮಾಹಿತಿ ನೀಡುವುದು ಹಾಗೂ ಅವರಿಗೆ ಎಷ್ಟು ಸಮಯದಿಂದ ಬಡ್ತಿ ನೀಡಿರುವುದಿಲ್ಲ; (ಮಾಹಿತಿ ನೀಡುವುದು)

(ಈ) ಬಡ್ತಿ ನಿರೀಕ್ಷೆಯಲ್ಲಿರುವ ನೌಕರರಿಗೆ ಬಡ್ತಿ ನೀಡದಿರುವ ವಿಳಂಬಕ್ಕೆ ಕಾರಣಗಳೇನು; ಸುಪ್ರೀಂ ಕೋರ್ಟ್ ಆದೇಶದಿಂದ ಬಡ್ತಿ ನೀಡಲು ವಿಳಂಬವಾದಲ್ಲಿ ಈ ವಿಳಂಬದಿಂದ ರಾಜ್ಯದ ಅಲ್ಪಸಂಖ್ಯಾತ, ಹಿಂದುಳಿದ ಮತ್ತು ಸಾಮಾನ್ಯ ವರ್ಗದ ನೌಕರರಿಗೆ ಬಡ್ತಿ ವಿಳಂಬದಿಂದ ವಂಚಿತರಾಗುತ್ತಿದ್ದು ನಿಯಮ ೩೨ರ ಪ್ರಭಾರ ಬಡ್ತಿ ನೀಡಲು ಕ್ರಮ ವಹಿಸಬಹುದಲ್ಲವೇ;

(ಉ) ಹಾಗಿದ್ದಲ್ಲಿ, ಕೂಡಲೇ ಬಡ್ತಿ ಅಥವಾ ನಿಯಮ ೩೨ರ ಮೇರೆಗೆ ಬಡ್ತಿ ನೀಡಲು ಇರುವ ಕಾನೂನು ತೊಡಕುಗಳೇನು?

## ರಾಜ್ಯದ ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ. ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೨೫ (೩೮೯೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಜಿಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಖಾಲಿಯಿರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಎಲ್ಲಾ ಜಿಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಇದೆಯೇ, ಇಲ್ಲದಿರುವ ಜಿಲ್ಲೆಗಳಾವುವು; (ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯ ಜಿಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ದಿನಂಪ್ರತಿ ಬರುವ ಸಾರ್ವಜನಿಕರಿಗೆ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಹಾಗೂ ದೂರವಾಣಿ ಸಂಪರ್ಕ ವ್ಯವಸ್ಥೆ ಸರಿಯಾಗಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇಂತಹ ಸೌಲಭ್ಯಗಳನ್ನು ಒದಗಿಸಲು ಎಲ್ಲಾ ಜಿಲ್ಲಾ ಸಾರಿಗೆ ಕಛೇರಿಗಳಿಗೆ ಪ್ರಸ್ತುತ ಸಾಲಿನಲ್ಲಿ ಬಿಡುಗಡೆ ಮಾಡಲಾದ ಅನುದಾನವೆಷ್ಟು? (ಮಾಹಿತಿ ನೀಡುವುದು)

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೬೨೬ (೪೦೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳೆಷ್ಟು; (ನೇರ ನೇಮಕಾತಿ ಮತ್ತು ಬಡ್ತಿ ಖೋಟಾದ ಖಾಲಿ ಹುದ್ದೆಗಳ ವಿವರ ನೀಡುವುದು)

(ಆ) ನೇರ ನೇಮಕಾತಿ ಮತ್ತು ಬಡ್ತಿ ಖೋಟಾದಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; ಭರ್ತಿ ಮಾಡಲಾಗುವುದು ಯಾವಾಗ ;

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡುವವರೆಗೂ ನಿಯಮ ೩೨ ರಡಿ ಪ್ರಭಾರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಈ ಹುದ್ದೆಗಳ ನೇಮಕಾತಿಯಲ್ಲಿ ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶೀಘ್ರ ನೇಮಕಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರನ್ನು ನೇಮಿಸುವ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೬೨೭ (೪೦೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿವೆ;

(ಆ) ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾಗಿರುವ ದೈಹಿಕ ಶಿಕ್ಷಕರ ಹುದ್ದೆಗಳೆಷ್ಟು;

(ಇ) ಪ್ರತಿಯೊಂದು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಒಂದು ದೈಹಿಕ ಶಿಕ್ಷಕರ ಹುದ್ದೆಗಳನ್ನು ಸೃಜಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಈ ಹುದ್ದೆಗಳನ್ನು ಅತಿ ಶೀಘ್ರವಾಗಿ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೬೨೮ (೪೦೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಈ ಕಾಲೇಜುಗಳಲ್ಲಿ ಖಾಯಂ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ; ಖಾಯಂ ಉಪನ್ಯಾಸಕರು ಮತ್ತು ಪ್ರಾಂಶುಪಾಲರುಗಳ ಸಂಖ್ಯೆ ಎಷ್ಟು; (ಕಾಲೇಜುವಾರು, ಹುದ್ದೆವಾರು ವಿವರ ನೀಡುವುದು)

(ಇ) ಕನಿಷ್ಠ ಹತ್ತು ವರ್ಷಗಳ ಕಾಲ ತಾತ್ಕಾಲಿಕವಾಗಿ ಸೇವೆ ಸಲ್ಲಿಸಿರುವ ಉಪನ್ಯಾಸಕರನ್ನು ಆಯಾಯ ಕಾಲೇಜುಗಳಲ್ಲೇ ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮ ಏನು?

## ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್ "ಬಿ" ಹುದ್ದೆಯನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೬೯ (೪೦೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ ಎಷ್ಟು; ಇವರು ಎಷ್ಟು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದಾರೆ;

(ಆ) ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಬಿ" ಗ್ರೂಪ್‌ಗೆ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಈ ಪ್ರಸ್ತಾವನೆಯನ್ನು ವೇತನ ಆಯೋಗದ ಪರಿಶೀಲನೆಗೆ ಸಲ್ಲಿಸುವಂತೆ ಆರ್ಥಿಕ ಇಲಾಖೆಯು ತಿಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಪ್ರಸ್ತಾವನೆಯನ್ನು ವೇತನ ಆಯೋಗದ ಪರಿಶೀಲನೆಗೆ ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದಲ್ಲಿ ಯಾವಾಗ ಸಲ್ಲಿಸಲಾಗಿದೆ; (ವಿವರ ನೀಡುವುದು)

(ಉ) ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡಿರುವ ಅಗತ್ಯ ಕ್ರಮಗಳೇನು?

## ಜಿಲ್ಲಾ ಖನಿಜ ಪ್ರತಿಷ್ಠಾನ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೬೩೦ (೩೯೨೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಣಿಗಳಿಂದ ಹಾನಿಗೊಳಗಾಗಿರುವ ಪ್ರದೇಶಗಳ ಅಭಿವೃದ್ಧಿಗಾಗಿ ಜಿಲ್ಲಾ ಮಟ್ಟದಲ್ಲಿ ಲಾಭ ರಹಿತ ಟ್ರಸ್ಟ್ 'ಜಿಲ್ಲಾ ಖನಿಜ ಪ್ರತಿಷ್ಠಾನ' (DMF)ಗಳ ರಚನೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಕಾಯ್ದೆಗೆ ತಿದ್ದುಪಡಿ ತಂದಿರುವುದು ಹಾಗೂ ಇದನ್ನು ಆಧರಿಸಿ ರಾಜ್ಯ ಸರ್ಕಾರವು ನಿಯಮಗಳನ್ನು ರೂಪಿಸಿರುವುದು ನಿಜವೇ;

(ಆ) ರಾಜ್ಯದ ಪ್ರತಿ ಜಿಲ್ಲೆಯಲ್ಲಿ ರಚಿಸಲು ರೂಪಿಸಿರುವ 'ಜಿಲ್ಲಾ ಖನಿಜ ಪ್ರತಿಷ್ಠಾನ' ದ ಸ್ವರೂಪವೇನು;

(ಇ) ರಾಜ್ಯ ಸರ್ಕಾರ ರೂಪಿಸಿದ ನಿಯಮಗಳ ಅನುಸಾರ ರಾಜ್ಯದ ಪ್ರತಿ ಜಿಲ್ಲೆಯಲ್ಲಿ 'ಜಿಲ್ಲಾ ಖನಿಜ ಪ್ರತಿಷ್ಠಾನ' ರಚಿಸುವ ಪ್ರಕ್ರಿಯೆ ಜಾರಿಯಾಗಿದೆಯೇ; ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

(ಈ) ಗಣಿ ಗುತ್ತಿಗೆದಾರರಿಂದ ಡಿಎಂಎಫ್ ರೂಪದಲ್ಲಿ ಪ್ರತ್ಯೇಕ ಶೀರ್ಷಿಕೆ ಅಡಿಯಲ್ಲಿ ಇದುವರೆಗೂ ಪ್ರತಿ ಜಿಲ್ಲೆಯಲ್ಲಿ ಸಂಗ್ರಹವಾಗಿರುವ ಹಣವೆಷ್ಟು;

(ಉ) ಈ ಹಣವನ್ನು ಯಾವ್ಯಾವ ಕಾರ್ಯಗಳಿಗೆ ಉಪಯೋಗಿಸಲಾಗುವುದು; ಈ ಹಣ ಉಪಯೋಗಿಸಿ

ಗಣಿಗಾರಿಕೆಯಿಂದಾಗುವ ದುಷ್ಪರಿಣಾಮ ತಗ್ಗಿಸುವ ಮೂಲಕ ಅಲ್ಲಿನ ಜನಜೀವನ ಮಟ್ಟ ಸುಧಾರಿಸುವ ಕೆಲಸವಾಗಿದೆಯೇ; ಹಾಗಿದ್ದಲ್ಲಿ, ಆ ಬಗ್ಗೆ ವಿವರಗಳನ್ನು ನೀಡುವುದು?

## ಧಾರ್ಮಿಕ ಅಲ್ಪ ಸಂಖ್ಯಾತ ನೋಂದಾಯಿತ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೬೩೧ (೪೦೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಧಾರ್ಮಿಕ ಅಲ್ಪ ಸಂಖ್ಯಾತ ನೋಂದಾಯಿತ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ಧಾರ್ಮಿಕ ಅಲ್ಪ ಸಂಖ್ಯಾತ ಸಂಸ್ಥೆಗಳಿಗೆ ಒದಗಿಸಿದ ರಿಯಾಯಿತಿ, ವಿನಾಯಿತಿ ವಿಶೇಷ ಸೌಲಭ್ಯಗಳೇನು; (ಮಾಹಿತಿ ನೀಡುವುದು)

(ಇ) ಕಳೆದ ೦೩ ವರ್ಷಗಳಲ್ಲಿ ಧಾರ್ಮಿಕ ಅಲ್ಪ ಸಂಖ್ಯಾತರ ಸಂಸ್ಥೆಗಳಿಗೆ ಒದಗಿಸಿರುವ ಅಭಿವೃದ್ಧಿ ಅನುದಾನ ಎಷ್ಟು; ಯಾವ ಯಾವ ಸಂಸ್ಥೆಗಳಿಗೆ ಒದಗಿಸಲಾಗಿದೆ ಹಾಗೂ ಯಾವ ಉದ್ದೇಶಕ್ಕೆ ಒದಗಿಸಲಾಗಿದೆ? (ವಿವರ ನೀಡುವುದು)

## ಧಾರ್ಮಿಕ ಅಲ್ಪ ಸಂಖ್ಯಾತರಿಗೆ ಒದಗಿಸಿದ ಅನುದಾನ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೬೩೨ (೪೦೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಜೆಟ್‌ನಲ್ಲಿ ಕಳೆದ ೦೩ ವರ್ಷಗಳಲ್ಲಿ ಧಾರ್ಮಿಕ ಅಲ್ಪ ಸಂಖ್ಯಾತರಿಗಾಗಿ ಒದಗಿಸಿರುವ ಅನುದಾನ ಎಷ್ಟು; ವಿನಿಯೋಗಿಸಿದ ಅನುದಾನ ಎಷ್ಟು;

(ಆ) ಕರ್ನಾಟಕ ಸರ್ಕಾರ ಯಾವ ಯಾವ ಧರ್ಮಗಳನ್ನು/ಮತಗಳನ್ನು ಧಾರ್ಮಿಕ/ ಮತೀಯ ಅಲ್ಪಸಂಖ್ಯಾತರೆಂದು ಪರಿಗಣಿಸಿದೆ; ಆಯಾ ಮತ/ ಧರ್ಮವಾರು ಅನುದಾನ ಹಂಚಿಕೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಆಯಾ ಧರ್ಮದವರಿಗೆ ಒದಗಿಸಿದ ಅನುದಾನದ ವಿವರ ನೀಡುವುದು;

(ಇ) ಧಾರ್ಮಿಕ ಅಲ್ಪಸಂಖ್ಯಾತರಿಗೆ ಕರ್ನಾಟಕ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳು ಯಾವುವು: ಧಾರ್ಮಿಕ ಮತೀಯ ಅಲ್ಪಸಂಖ್ಯಾತರಿಗೆ ಶೈಕ್ಷಣಿಕ ಹಾಗೂ ಉದ್ಯೋಗ ಮೀಸಲಾತಿ ಪ್ರಮಾಣ ಎಷ್ಟು; ಈ ಮೀಸಲಾತಿಯ ಕಾರಣಕ್ಕೆ ಆ ಸಮುದಾಯಗಳಿಗಾಗಿರುವ ಲಾಭ ಹಾಗೂ ಸೌಲಭ್ಯಗಳೇನು?

## ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ ಕಾಲೇಜಗಳಲ್ಲಿ ಅಲ್ಪ ಸಂಖ್ಯಾತರ ವಿನಾಯಿತಿ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೬೩೩ (೪೦೮೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭಾಷಿಕ ಹಾಗೂ ಮತೀಯ ಅಲ್ಪಸಂಖ್ಯಾತರೆಂದು ರಿಯಾಯಿತಿ, ವಿನಾಯಿತಿ ಪಡೆಯುತ್ತಿರುವ ಇಂಜಿನಿಯರಿಂಗ್ ಪಾಲಿಟೆಕ್ನಿಕ ಹಾಗೂ ಇನ್ನಿತರ ಕಾಲೇಜುಗಳು ಯಾವುವು: (ಪಟ್ಟಿ ನೀಡುವುದು)

(ಆ) ಆಯಾ ಸಂಸ್ಥೆಗಳಿಗೆ ದೊರೆತಿರುವ ವಿನಾಯಿತಿ, ರಿಯಾಯಿತಿ ವಿಶೇಷ ಸೌಲಭ್ಯಗಳ ಮಾಹಿತಿ ನೀಡುವುದು;

(ಇ) ಧಾರ್ಮಿಕ/ಮತೀಯ/ ಭಾಷಿಕ ಅಲ್ಪ ಸಂಖ್ಯಾತರು ಎನ್ನುವ ಕಾರಣಕ್ಕಾಗಿ ಸಾಮಾನ್ಯ ಆಡಳಿತ ಮಂಡಳಿಯವರಿಗೂ ಹಾಗೂ ಇವರಿಗೂ ಇರುವ ವ್ಯತ್ಯಾಸ ಏನು; ವಿಶ್ಲೇಷಣಾತ್ಮಕ ವಿವರ ನೀಡುವುದು; ಆಯಾ ಸಂಸ್ಥೆಗಳಲ್ಲಿ ಆಯಾ ಧಾರ್ಮಿಕ/ಮತೀಯ/ಭಾಷಿಕ ಅಲ್ಪ ಸಂಖ್ಯಾತರಿಗೆ ದೊರಕುತ್ತಿರುವ ಸೀಟುಗಳ ಪ್ರಮಾಣ ಎಷ್ಟು; ಶುಲ್ಕ ವಿನಾಯಿತಿಗಳು ಎಷ್ಟು; ಹಾಗೂ ಪ್ರವೇಶಾತಿಗೆ ಇರುವ ನಿಯಮಗಳೇನು; ಕಾಲೇಜುವಾರು ಹಾಗೂ ಕೋರ್ಸ್‌ವಾರು ಮಾಹಿತಿ ಒದಗಿಸುವುದು?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕೆಲಸ ನಿರ್ವಹಿಸುತ್ತಿರುವ 'ಡಿ' ಗ್ರೂಪ್ ನೌಕರರನ್ನು ಖಾಯಂ ಮಾಡುವ ಬಗ್ಗೆ.

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೩೪ (೩೮೬೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅನ್‌ಸ್ಕಿಲ್ಡ್ "ಡಿ" ಗ್ರೂಪ್ ನೌಕರರುಗಳಾಗಿ ಎಷ್ಟು ಜನ ಕೆಲಸ ನಿರ್ವಹಿಸುತ್ತಿದ್ದಾರೆ; (ಕಾಲೇಜು ವಿವರ ನೀಡುವುದು)

(ಆ) ಕಾಲೇಜು ಶಿಕ್ಷಣ ಇಲಾಖೆ ಸಂಖ್ಯೆ:ಕಾಶಿಇ:೨೭೯:ಅನ್‌ಸ್ಕಿಲ್ಡ್: ಡಿದನೌನೇ:ಸಿವಿ:೨:೨೦೦೨, ದಿನಾಂಕ: ೦೫.೧೨.೨೦೦೩ರ ಪ್ರಕಾರ ಸಾದಿಲ್ವಾರು ವೆಚ್ಚದಡಿ ಈ ನೌಕರರುಗಳನ್ನು ನೇಮಕಾತಿ ಮಾಡಿಕೊಂಡಿರುವುದು ನಿಜವೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಇ) ಸದರಿ ನೌಕರರುಗಳನ್ನು ಖಾಯಂ ಮಾಡುವ ಬಗ್ಗೆ ಸರ್ಕಾರ ಚಿಂತಿಸಿದೆಯೇ;

(ಈ) ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ: ೩೧.೦೭.೨೦೧೫ರಂದು ಈ ನೌಕರರುಗಳನ್ನು ದಿನಗೂಲಿ ನೌಕರರೆಂದು ಪರಿಗಣಿಸಿ, ಕನಿಷ್ಠ ವೇತನ ನೀಡಲು ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಉ) ಈ ನೌಕರರುಗಳು ಕಳೆದ ೧೫–೨೦ ವರ್ಷಗಳಿಂದ ಸತತವಾಗಿ ಸೇವೆ ಸಲ್ಲಿಸುತ್ತಿದ್ದರೂ ಸಹ ಆರ್ಥಿಕ ಇಲಾಖೆಯ ಸಂಖ್ಯೆ:ಆಇ:೩ಟಿ. ಎಫ್.ಪಿ:೨೦೧೭ರ ಪ್ರಕಾರ ಕೆಲಸದಿಂದ ಸ್ಥಗಿತಗೊಳಿಸಲು ಆದೇಶಿಸಿರುವುದು ನಿಜವೇ;

(ಊ) ಹಾಗಿದ್ದಲ್ಲಿ ಈ ನೌಕರರುಗಳ ಸುದೀರ್ಘ ಸೇವೆಯನ್ನು ಪರಿಗಣಿಸಿ, ದಿನಗೂಲಿ ನೌಕರರೆಂದು ಕನಿಷ್ಠ ವೇತನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ಕುಲಪತಿಗಳ ನೇಮಕಾತಿಯಲ್ಲಿ ವಿಳಂಬದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೩೫ (೪೧೨೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮತ್ತು ಮೈಸೂರು ವಿಶ್ವವಿದ್ಯಾನಿಲಯಗಳಲ್ಲಿ ಕುಲಪತಿಗಳ ನೇಮಕಾತಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳೇನು; (ವಿವರ ನೀಡುವುದು)

(ಆ) ವಿಶ್ವವಿದ್ಯಾನಿಲಯಗಳ ಕುಲಪತಿಗಳ ನೇಮಕಾತಿಗಳಿಗೆ ಇರಬೇಕಾದ ಮಾನದಂಡವೇನು; (ವಿವರ ನೀಡುವುದು)

(ಇ) ಬೆಂಗಳೂರು ಮತ್ತು ಮೈಸೂರು ವಿಶ್ವವಿದ್ಯಾನಿಲಯಗಳ ಕುಲಪತಿಗಳ ನೇಮಕಾತಿಯನ್ನು ಎಷ್ಟು ಕಾಲಮಿತಿಯೊಳಗೆ ಮಾಡಲಾಗುವುದು? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಇಲಾಖೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೩೬ (೪೧೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಕೈಗೊಂಡ ವಿವಿಧ ಅಭಿವೃದ್ಧಿಯ ಕಾಮಗಾರಿಗಳಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; (ವರ್ಷಾವಾರು ವಿವರ ನೀಡುವುದು)

(ಇ) ಈ ಅಭಿವೃದ್ಧಿ ಕಾಮಗಾರಿಗಳಲ್ಲಿ ಎಷ್ಟು ಪೂರ್ಣಗೊಂಡಿರುವ/ ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಅಭಿವೃದ್ಧಿ ಕಾಮಗಾರಿಗಳ ಕೆಲಸ ನಿರ್ವಹಿಸಿದ ಅಭಿಯಂತರರು ಹಾಗು ಗುತ್ತಿಗೆದಾರರುಗಳ ವಿಳಾಸದೊಂದಿಗೆ (ತಾಲ್ಲೂಕುವಾರು ವಿವರ ನೀಡುವುದು)

(ಉ) ಈ ಕಳಪೆ ಮಟ್ಟದ ಕಾಮಗಾರಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ? (ವಿವರ ನೀಡುವುದು)

## ಮದ್ದೂರು ತಾಲ್ಲೂಕು ಕೊಪ್ಪ ಹೋಬಳಿ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೩೭ (೪೧೨೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಕೊಪ್ಪ ಹೋಬಳಿಯ ಕೊಪ್ಪ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣವನ್ನು ಹೊಸದಾಗಿ ನಿರ್ಮಿಸಲು ಮಂಜೂರಾಗಿರುವ ಹಣ ಎಷ್ಟು; ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ;

(ಆ) ಹಾಗಿದ್ದಲ್ಲಿ, ಕಾಮಗಾರಿ ಯಾವ ಹಂತದಲ್ಲಿದೆ; ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕೈಗೊಂಡಿರುವ ಕ್ರಮಗಳೇನು;

(ಇ) ಬಸ್ಸ್ ನಿಲ್ದಾಣವನ್ನು ಯಾವಾಗ ಉದ್ಘಾಟಿಸಲಾಗುವುದು?

## ಖನಿಜ ಸಂಪತ್ತು ಮತ್ತು ಗುತ್ತಿಗೆದಾರರು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೬೩೮ (೪೧೦೭) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಲಭ್ಯವಾಗುತ್ತಿರುವ ವಿವಿಧ ಬಗೆಯ ಖನಿಜಗಳು ಯಾವುವು; ಅವು ಎಲ್ಲಿ ಮತ್ತು ಎಷ್ಟು ವಿಸ್ತೀಣದ ಜಮೀನಿನಲ್ಲಿ ಲಭ್ಯವಿದೆ; (ಪ್ರದೇಶವಾರು ವಿವರ ನೀಡುವುದು)

(ಆ) ಖನಿಜ ತೆಗೆಯಲು ಸರ್ಕಾರದಿಂದ ಪರವಾನಗಿ ಪಡೆದ ಗುತ್ತಿಗೆದಾರರ ವಿವರಗಳೇನು; ಯಾವ ಪ್ರದೇಶದಲ್ಲಿ, ಎಷ್ಟು ವಿಸ್ತೀರ್ಣ ಮತ್ತು ಎಷ್ಟು ಅವಧಿವರೆಗೆ ಗುತ್ತಿಗೆಗೆ ನೀಡಲಾಗಿದೆ; (ಪೂರ್ಣ ವಿವರ ನೀಡುವುದು)

(ಇ) ಗುತ್ತಿಗೆದಾರರು ಸರ್ಕಾರಕ್ಕೆ ಶುಲ್ಕದ ರೂಪದಲ್ಲಿ ಒಟ್ಟು ಎಷ್ಟು ಮೊಬಲಗನ್ನು ಸಂದಾಯ ಮಾಡುತ್ತಿದ್ದಾರೆ; (ಗಣಿವಾರು/ವರ್ಷವಾರು ವಿವರ ನೀಡುವುದು)

(ಈ) ಗಣಿಗಳಲ್ಲಿ ಕೆಲಸ ಮಾಡುತ್ತಿರುವ ಒಟ್ಟು ನೌಕರರ ಸಂಖ್ಯೆ ಎಷ್ಟು; ಅವರಿಗೆ ನೀಡುತ್ತಿರುವ ವೇತನವೆಷ್ಟು ಮತ್ತು ಒದಗಿಸಿರುವ ಇತರೆ ಸೌಲಭ್ಯಗಳೇನು? (ಗಣಿವಾರು ಮಾಹಿತಿ ನೀಡುವುದು)

## ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ (ಆರ್.ಟಿ.ಇ)ಯಡಿ ಮಕ್ಕಳ ದಾಖಲಾತಿ ಮತ್ತು ಸೌಲಭ್ಯಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೬೩೯ (೪೧೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ ರಿಂದ ಈವರೆವಿಗೂ ಸಾಲುಗಳಲ್ಲಿ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ ಅಡಿ (ಆರ್.ಟಿ.ಇ)ಯಲ್ಲಿ ರಾಜ್ಯದ ಒಟ್ಟು ಎಷ್ಟು ಮಕ್ಕಳಿಗೆ ಯಾವ ಯಾವ ಶಾಲೆಗಳಲ್ಲಿ ಪ್ರವೇಶ ದೊರಕಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರವೇಶ ದೊರಕಿಸಲಾದ ಮಕ್ಕಳ ಶಿಕ್ಷಣಕ್ಕಾಗಿ ಎಷ್ಟು ಹಣವನ್ನು ಶುಲ್ಕದ ಬಾಬ್ತು ತೊಡಗಿಸಲಾಗಿದೆ; (ಶಾಲಾವಾರು ವಿವರ ನೀಡುವುದು)

(ಇ) ಈ ಕಾಯ್ದೆಯಡಿ ದಾಖಲಾಗುವ ಮಕ್ಕಳಿಗೆ ಶಾಲೆಗಳು ಒದಗಿಸಬೇಕಾದ ಸೌಲಭ್ಯಗಳು ಯಾವುವು; (ವಿವರ ನೀಡುವುದು)

(ಈ) ಲಾಭ ಗಳಿಸುತ್ತಿರುವ ಮತ್ತು ನಷ್ಟ ಅನುಭವಿಸುತ್ತಿರುವ ವಿಭಾಗಗಳು ಯಾವುವು; ಲಾಭ ಮತ್ತು ನಷ್ಟದ ಪ್ರಮಾಣವೆಷ್ಟು? (ವಿಭಾಗವಾರು ವಿವರ ನೀಡುವುದು)

## ರಸ್ತೆ ಸಾರಿಗೆ ನಿಗಮದಡಿ ಕಾರ್ಯನಿರ್ವಹಿಸುವ ವಿಭಾಗಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೬೪೦ (೪೧೦೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಡಿ ಕಾರ್ಯನಿರ್ವಹಿಸುತ್ತಿರುವ ವಿಭಾಗಗಳು ಎಷ್ಟು; ಆ ವಿಭಾಗಗಳಲ್ಲಿ ಎಷ್ಟು ಬಸ್ಸುಗಳು ಮತ್ತು ಎಷ್ಟು ಇತರೆ ವಾಹನಗಳಿವೆ; (ವಿಭಾಗವಾರು ಮಾಹಿತಿ ನೀಡುವುದು)

(ಆ) ಆ ವಿಭಾಗಗಳಲ್ಲಿ ಎಷ್ಟು ಮಂದಿ ನೌಕರರು/ ಅಧಿಕಾರಿಗಳು ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ; ಎಲ್ಲಾ ವೃಂದಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಮಹಿಳೆಯರು, ೨ಎ,೨ಬಿ,೩ಎ ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದ ಎಷ್ಟು ಜನ ನೌಕರರು ಸೇವೆಯಲ್ಲಿದ್ದಾರೆ; (ಹುದ್ದೆವಾರು/ ವಿಭಾಗವಾರು ಮಾಹಿತಿ ನೀಡುವುದು)

(ಇ) ಪ್ರತಿ ವಿಭಾಗವು ದಿನವೊಂದಕ್ಕೆ ಎಷ್ಟು ಸರಾಸರಿ ಆದಾಯ ಗಳಿಸುತ್ತಿದೆ; (ವಿಭಾಗವಾರು ವಿವರ ನೀಡುವುದು)

(ಈ) ಲಾಭ ಗಳಿಸುತ್ತಿರುವ ಮತ್ತು ನಷ್ಟ ಅನುಭವಿಸುತ್ತಿರುವ ವಿಭಾಗಗಳು ಯಾವುವು; ಲಾಭ ಮತ್ತು ನಷ್ಟದ ಪ್ರಮಾಣವೆಷ್ಟು? (ವಿಭಾಗವಾರು ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಎಲ್ಲಾ ಗ್ರಾಮಗಳಿಗೆ ಬಸ್ಸ್ ವ್ಯವಸ್ಥೆ ಕಲ್ಪಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೪೧ (೪೧೧೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಈಗಲೂ ಕೂಡ ಬಸ್ಸ್ ಸೌಲಭ್ಯದಿಂದ ವಂಚಿತರಾಗಿರುವ ಗ್ರಾಮಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಗ್ರಾಮಗಳು ಈ ರೀತಿ ಬಸ್ಸ್ ಸೌಲಭ್ಯ ವ್ಯವಸ್ಥೆಯಿಂದ ವಂಚಿತವಾಗಿರಲು ಕಾರಣಗಳೇನು; (ಪ್ರತಿ ಗ್ರಾಮಕ್ಕೆ ಸಂಬಂಧಿಸಿದಂತೆ ಸ್ಪಷ್ಟ ಮಾಹಿತಿ ನೀಡುವುದು)

(ಇ) ಸದರಿ ಬಸ್ಸ್ ಸೌಲಭ್ಯ ವಂಚಿತ ಗ್ರಾಮಗಳಿಗೆ ಬಸ್ಸ್ ವ್ಯವಸ್ಥೆ ಕಲ್ಪಿಸಲು ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು; ಸದರಿ ಗ್ರಾಮಗಳಿಗೆ ಯಾವ ಕಾಲಮಿತಿಯೊಳಗೆ ಬಸ್ಸ್ ಸಂಪರ್ಕ ವ್ಯವಸ್ಥೆ ಕಲ್ಪಿಸಲಾಗುವುದು? (ಸ್ಪಷ್ಟ ಕಾಲಮಿತಿ ತಿಳಿಸುವುದು)

## ಕೊಡವ ಅಧ್ಯಯನ ಪೀಠವನ್ನು ಸ್ಥಳಾಂತರಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೪೨ (೪೧೧೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡವ ಅಧ್ಯಯನ ಪೀಠವನ್ನು ಮಂಗಳೂರು ವಿಶ್ವವಿದ್ಯಾಲಯದ ಮಂಗಳಗಂಗೋತ್ರಿಯಿಂದ ಮಡಕೇರಿಯ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜಿಗೆ ಸ್ಥಳಾಂತರಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ, ಕೊಡವ ಅಧ್ಯಯನ ಪೀಠವು ಇದುವರೆಗೆ ಸ್ಥಳಾಂತರವಾಗದೆ ಇರಲು ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಯಾವ ದಿನಾಂಕದೊಳಗೆ ಕೊಡವ ಅಧ್ಯಯನ ಪೀಠವು ಮಂಗಳಗಂಗೋತ್ರಿ ಆವರಣದಿಂದ ಮಡಿಕೇರಿಯ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜಿಗೆ ಸ್ಥಳಾಂತರ ಮಾಡಲಾಗುವುದು? (ಕಾಲಮಿತಿಯನ್ನು ಸ್ಪಷ್ಟವಾಗಿ ತಿಳಿಸುವುದು)

## ಸಣ್ಣ ಕೈಗಾರಿಕೋದ್ಯಮಿಗಳಿಗೆ ಸಿಗುವ ಸಾಲ, ಸೌಲಭ್ಯ ಹಾಗೂ ಉತ್ತೇಜನಗಳ ಕುರಿತು.

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೪೩ (೪೧೦೮) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಇಚ್ಛಿಸುವವರಿಗೆ ಸರ್ಕಾರದಿಂದ ಸಿಗುವ ಸಾಲ, ಸೌಲಭ್ಯ, ಸಹಾಯಧನ ಹಾಗೂ ಇತರೆ ಉತ್ತೇಜನಗಳೇನು; ಯಾವ ರೀತಿಯ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಈ ರೀತಿಯ ಉತ್ತೇಜನಗಳು ದೊರೆಯಲಿವೆ; (ಸಂಪೂರ್ಣ ವಿವರ ನೀಡುವುದು)

(ಆ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಈ ರೀತಿಯ ಸಾಲ, ಸೌಲಭ್ಯ ಹಾಗೂ ಸಹಾಯಧನಗಳನ್ನು ಪಡೆದಿರುವವರ ಸಂಪೂರ್ಣ ವಿವರ ನೀಡುವುದು; (ಜಿಲ್ಲಾವಾರು ಹಾಗೂ ಪ್ರತಿ ಘಟಕದ ವಿವರ ನೀಡುವುದು)

(ಇ) ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಇಚ್ಛಿಸುವ ಮಹಿಳೆಯರಿಗೆ ಸರ್ಕಾರ ನೀಡುತ್ತಿರುವ ವಿಶೇಷ ಪ್ರೋತ್ಸಾಹಗಳೇನು? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡ ಒದಗಿಸುವ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೪೪ (೪೧೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿನ ಎಲ್ಲಾ ಗ್ರಾಮ ಪಂಚಾಯಿತಿಗಳು ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿವೆಯೇ;

(ಆ) ಇಲ್ಲದಿದ್ದಲ್ಲಿ, ಸ್ವಂತ ಕಟ್ಟಡ ಹೊಂದಿಲ್ಲದ ಗ್ರಾಮ ಪಂಚಾಯಿತಿಗಳು ಯಾವುವು; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಇ) ಪ್ರಸಕ್ತ ಆರ್ಥಿಕ ವರ್ಷದಲ್ಲಿ ಸದರಿ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣಕ್ಕೆ ಕ್ರಮ ವಹಿಸಲಾಗಿದೆಯೇ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಕೊಡಗು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡ. ಮೂಲಭೂತ ಸೌಕರ್ಯ ಹಾಗೂ ಪೂರ್ಣಕಾಲಿಕ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ಒದಗಿಸಲಾಗುವುದು?

## ಶುದ್ಧ ಕುಡಿಯುವ ನೀರಿನ ಘಟಕ ಪ್ರಾರಂಭಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೪೫ (೪೧೧೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಇಲಾಖೆ ನಿಗಧಿಪಡಿಸಿರುವ ಮಾರ್ಗಸೂಚಿಗಳು ಹಾಗೂ ಮಾನದಂಡಗಳೇನು;

(ಆ) ಇದುವರೆಗೂ ಕೊಡಗು ಜಿಲ್ಲೆಗೆ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; ಕಾರ್ಯಾರಂಭ ಮಾಡಿರುವ ಘಟಕಗಳ ಸಂಖ್ಯೆ ಎಷ್ಟು; ನಿರ್ಮಾಣ ಹಂತದಲ್ಲಿರುವ ಘಟಕಗಳ ಸಂಖ್ಯೆ ಎಷ್ಟು; ಹಾಗೂ ಸದರಿ ಘಟಕಗಳಿಗೆ ಬಿಡುಗಡೆಯಾಗಿರುವ ಖರ್ಚಾದ ಹಾಗೂ ಬಾಕಿ ಇರುವ ಅನುದಾನವೆಷ್ಟು; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು, ಗ್ರಾಮವಾರು ಪ್ರತಿ ಘಟಕದ ವಿವರ ನೀಡುವುದು)

(ಇ) ಇಲಾಖೆ ನಿಗಧಿಪಡಿಸಿರುವ ಮಾನದಂಡಗಳ ವ್ಯಾಪ್ತಿಯಲ್ಲಿ ಬರುವ ಕೊಡಗು ಜಿಲ್ಲೆಯ ಪ್ರತಿ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು?

## ಬೀದರ್ ಜಿಲ್ಲೆಯಲ್ಲಿ ಶೌಚಾಲಯ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೪೬ (೪೦೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಬಯಲು ಮುಕ್ತ ಶೌಚಾಲಯ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೀದರ್ ಜಿಲ್ಲೆ ಔರಾದ್ ತಾಲ್ಲೂಕಿನಲ್ಲಿ ಎಷ್ಟು ಶೌಚಾಲಯವನ್ನು ನಿರ್ಮಿಸಲಾಗಿದೆ; (ವಿವರ ನೀಡುವುದು) ತಾಲ್ಲೂಕಿನಲ್ಲಿ ಇನ್ನೂ ಎಷ್ಟು ಹಳ್ಳಿಗಳಿಗೆ ಶೌಚಾಲಯವನ್ನು ನಿರ್ಮಿಸಬೇಕಾಗಿದೆ;

(ಇ) ಶೌಚಾಲಯವನ್ನು ನಿರ್ಮಿಸಲು ತಾಲ್ಲೂಕಿಗೆ ನೀಡಿರುವ ಅನುದಾನ ಎಷ್ಟು? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಪಾಲೆಟೆಕ್ನಿಕ್ ಕಾಲೇಜುಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೪೭ (೪೦೬೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಇರುವ ಪಾಲಿಟೆಕ್ನಿಕ್ ಕಾಲೇಜುಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ಪಾಲಿಟೆಕ್ನಿಕ್ ಕಾಲೇಜು ಸ್ಥಾಪನೆಗೆ ಅನುಮೋದನೆ ಸಿಕ್ಕಿದ್ದು ಯಾವಾಗ; ಇದಕ್ಕೆ ನೀಡಿರುವ ಅನುದಾನ ಎಷ್ಟು;

(ಇ) ಔರಾದ್ ಪಾಲಿಟೆಕ್ನಿಕ್ ಕಾಲೇಜು ಕಟ್ಟಡ ಕಾಮಗಾರಿ ಪೂರ್ಣಗೊಳ್ಳದಿರಲು ಕಾರಣಗಳೇನು? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಕನ್ನಡ ಶಾಲೆಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೬೪೮ (೪೦೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಕನ್ನಡ ಶಾಲೆಗಳನ್ನು ಮುಚ್ಚಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ತರಗತಿಗಳು ಪ್ರಾರಂಭವಾಗಿ ೬ ತಿಂಗಳಾದರೂ ಪಠ್ಯ ಪುಸ್ತಕಗಳು ಲಭ್ಯವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಬೀದರ್ ಜಿಲ್ಲೆಯಲ್ಲಿ ಶಾಲೆಗಳಲ್ಲಿ ಕಟ್ಟಡ ಹಾಗೂ ಶಾಲೆಗಳಲ್ಲಿ ಮೂಲಭೂತ ಸೌಲಭ್ಯದ ಕೊರತೆಯಿಂದ ವಿದ್ಯಾರ್ಥಿಗಳ ಹಾಜರಾತಿ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಮೂಲಭೂತ ಸೌಲಭ್ಯವನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಬೀದರ್ ಜಿಲ್ಲೆಯ ಕೈಗಾರಿಕೆಗಳ ಸ್ಥಾಪನೆ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೬೪೯ (೪೦೬೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೮೩ರಲ್ಲಿ ಕೇಂದ್ರ ಸರ್ಕಾರ ಬೀದರ್ ಜಿಲ್ಲೆಯನ್ನು ಕೈಗಾರಿಕಾ ರಹಿತ ಜಿಲ್ಲೆ ಎಂದು ಘೋಷಿಸಿದ ನಂತರ ಜಿಲ್ಲೆಯಲ್ಲಿ ಸ್ಥಾಪಿಸಿದ ಕೈಗಾರಿಕೆಗಳು ಎಷ್ಟು;

(ಆ) ಕೈಗಾರಿಕೆಗಳು ಸ್ಥಾಪನೆಗೆ ಹೂಡಲಾದ ಬಂಡವಾಳ ಎಷ್ಟು; ಇದರಿಂದ ಎಷ್ಟು ಜನರಿಗೆ ಉದ್ಯೋಗ ಲಭಿಸಿದೆ;

(ಇ) ಬೀದರ್ ಜಿಲ್ಲೆಯಲ್ಲಿ ಸದ್ಯ ಇರುವ ಕೈಗಾರಿಕೆಗಳ ಸಂಖ್ಯೆ ಎಷ್ಟು; ಕೈಗಾರಿಕೆ ರಹಿತ ಜಿಲ್ಲೆಯ ಯೋಜನೆಯಡಿ ಆರಂಭಗೊಂಡ ಕೈಗಾರಿಕೆಗಳ ಪೈಕಿ ಮುಚ್ಚಿರುವ ಕೈಗಾರಿಕೆಗಳ ಸಂಖ್ಯೆ ಎಷ್ಟು;

(ಈ) ಕೈಗಾರಿಕೆಗಳ ಪುನರುಜ್ಜೀವನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಬೀದರ್ ಜಿಲ್ಲೆಯ ಸಾರಿಗೆ ಸೌಲಭ್ಯಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೬೫೦ (೪೦೬೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ತಾಲ್ಲೂಕು ಕೇಂದ್ರಗಳಿಂದ ಸುಮಾರು ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಳ್ಳಿಗಳಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲು ಇರುವ ತೊಂದರೆಗಳೇನು;

(ಇ) ಬೀದರ್ ಜಿಲ್ಲೆ ಔರಾದ್ ತಾಲ್ಲೂಕಿನ ೨೦ ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಇಲ್ಲದೆ ಜನ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬೀದರ್ ಜಿಲ್ಲೆಯಲ್ಲಿ ಬಸ್ ನಿಲ್ದಾಣಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು?

## ಕೆ.ಐ.ಎ.ಡಿ.ಬಿ ವತಿಯಿಂದ ಹಂಚಿಕೆ ಮಾಡಲಾದ ನಿವೇಶನ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೫೧ (೩೯೧೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕಾ ನಿವೇಶನಗಳನ್ನು ಇದುವರೆವಿಗೆ ಎಲ್ಲೆಲ್ಲಿ ನಿರ್ಮಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಎಲ್ಲಾ ಕೈಗಾರಿಕಾ ಪ್ರದೇಶದಲ್ಲಿ ಒಟ್ಟು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳಿಗೆ ಯಾವ ಯಾವ ಅಳತೆಯ ಹಾಗೂ ಎಷ್ಟೆಷ್ಟು ಮೊತ್ತಕ್ಕೆ ನಿವೇಶನ ನೀಡಲಾಗಿದೆ; (ಕೈಗಾರಿಕಾ ಪ್ರದೇಶವಾರು ವಿವರ ನೀಡುವುದು)

(ಇ) ಕೆ.ಐ.ಎ.ಡಿ.ಬಿ.ಯಲ್ಲಿ ಕೆಲಸ ಮಾಡುತ್ತಿರುವ ಅಧಿಕಾರಿ/ನೌಕರರುಗಳ ಸಂಖ್ಯೆ ಎಷ್ಟು;

(ಈ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ನೇಮಕಾತಿ ಮತ್ತು ಬಡ್ತಿಯಲ್ಲಿ ನಿಗಧಿತ ಶೇಕಡವಾರು ಹುದ್ದೆಗಳನ್ನು ನೀಡಲಾಗಿದೆಯೇ;

(ಉ) ನೀಡಿದ್ದಲ್ಲಿ ವೃಂದವಾರು ಹೆಸರು ಮತ್ತು ಯಾವ ದಿನಾಂಕದಿಂದ ನೀಡಲಾಗಿದೆ; ಯಾವ ಯಾವ ಹಂತದಲ್ಲಿ ಬಡ್ತಿ ನೀಡಲಾಗಿದೆ? (ವಿವರ ಒದಗಿಸುವುದು)

## ವೆಸ್ಟ್ ಕೋಸ್ಟ್ ಕಾಗದ ಕಾರ್ಖಾನೆಗೆ ಮಂಜೂರಾಗಿರುವ ಜಮೀನು ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೫೨ (೩೮೭೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಾಂಡೇಲಿ ನಗರದಲ್ಲಿರುವ ವೆಸ್ಟ್‌ಕೋಸ್ಟ್ ಕಾಗದ ಕಾರ್ಖಾನೆಗೆ ಎಷ್ಟು ಸಾಮರ್ಥ್ಯದ ಉಷ್ಣಸ್ಥಾವರವನ್ನು ಅಳವಡಿಸಿದೆ; ೧೯೯೧ ರಿಂದ ೨೦೧೭ರವರೆಗೆ ಸಲ್ಲಿಸಲಾದ EIA ವರದಿ ಹಾಗೂ ಕೇಂದ್ರ ಪರಿಸರ ಸಚಿವಾಲಯದಿಂದ ಅನುಮತಿ ಪಡೆದ ಕುರಿತು ಸಂಪೂರ್ಣ ವಿವರ ನೀಡುವುದು;

(ಆ) ಈ ಕಾರ್ಖಾನೆಗೆ ಸರ್ಕಾರ ಮಂಜೂರು ಮಾಡಿದ ಜಮೀನು ಎಷ್ಟು; ಲೀಸ್ ಆಧಾರತವಾಗಿ ನಿಗದಿಪಡಿಸಿರುವ TERMS & CONDITION ಗಳ ವಿವರ ನೀಡುವುದು;

(ಇ) ಈ ಮೇಲಿನ ಜಮೀನಿನ ಸರ್ವೆ ನಂಬರ್, ನಕ್ಷೆಯನ್ನು ನೀಡುವುದು;

(ಈ) ಈ ಕಾರ್ಖಾನೆಗೆ ನೀಡಲಾದ ಜಮೀನು ಕಂದಾಯ ಅಥವಾ ಅರಣ್ಯ ಭೂಮಿಯೇ ವಿವರ ನೀಡುವುದು;

(ಉ) ೧೯೫೬ ರಿಂದ ಇಲ್ಲಿಯುವರೆಗೆ ಸರ್ಕಾರಕ್ಕೆ ಲೀಸ್ ಹಣ ತುಂಬಿಸುತ್ತಾರೆಯೇ?

## ಉಪನ್ಯಾಸಕರ ಮಾಹಿತಿ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೫೩ (೩೮೭೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾಂಡೇಲಿ ಶಿಕ್ಷಣ ಸಂಸ್ಥೆ ನಡೆಸುತ್ತಿರುವ ಬಂಗೂರನಗರ ಡಿಗ್ರಿ ಕಾಲೇಜಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; ಪ್ರತಿಯೊಂದು ಉಪನ್ಯಾಸಕರಿಗೆ ಸಿಗುತ್ತಿರುವ ಮಾಸಿಕ ಸಂಬಳ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಈ ಸಂಸ್ಥೆಯ ಪ್ರಾಂಶುಪಾಲರಾಗಿ ಎಷ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಿಂದುಳಿದ ವರ್ಗ ಹಾಗೂ ಹಿಂದುಳಿದ ಜಾತಿಯ ಉಪನ್ಯಾಸಕರು ಕಾರ್ಯ ನಿರ್ವಹಿಸಿರುತ್ತಾರೆ; (ವಿವರ ನೀಡುವುದು)

(ಇ) ಈ ಕಾಲೇಜಿಗೆ ಯು.ಜಿ.ಸಿ ಗ್ರ್ಯಾಂಟ್ ಸಿಗುತ್ತಿದೆಯೇ;

(ಈ) ಸರ್ಕಾರದಿಂದ ಮಂಜೂರಾದ ಜಮೀನು ಎಷ್ಟು? (ವಿವರ ನೀಡುವುದು)

## ಜಿಲ್ಲೆಯಲ್ಲಿ ಭೂ ಸೇನಾ ನಿಗಮದಿಂದ ಆದ ಕಾಮಗಾರಿಗಳಲ್ಲಿ ಅವ್ಯವಹಾರ ಆದ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೫೪ (೩೯೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಗೆ ಸಂಬಂಧಿಸಿದಂತೆ ಭೂ ಸೇನಾ ನಿಗಮಕ್ಕೆ (ಕೆ.ಆರ್.ಐ.ಡಿ.ಎಲ್) ೨೦೧೨–೧೩ ರಿಂದ ೨೦೧೬–೧೭ನೇ ಸಾಲಿನವರೆಗೆ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು; (ಶೀರ್ಷಿಕೆವಾರು, ಜಿಲ್ಲಾವಾರು/ ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಮೊತ್ತದಲ್ಲಿ ಸರಿಯಾದ ಕಾಮಗಾರಿ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಇ) ಆ ಕಾಮಗಾರಿಗಳಲ್ಲಿ ಅನೇಕ ಕಡೆ ಕಳಪೆ ಮಟ್ಟದ ಕಾಮಗಾರಿಯಾಗಿದ್ದರೂ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಯಾವುದೇ ಕ್ರಮಕೈಗೊಳ್ಳದೇ ಇರುವ ಕಾರಣವೇನು; ಜಿಲ್ಲೆಯಲ್ಲಿ ನಿಗದಿತ ಅವಧಿಯೊಳಗೆ ಕಾಲೇಜಿನ ಕಟ್ಟಡ ಕಾಮಗಾರಿಗಳನ್ನು ನಿರ್ವಹಿಸದೇ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸವಿಸ್ತಾರ ವರದಿ ನೀಡುವುದು)

(ಈ) ಈಗಾಗಲೇ ೨೦೧೩–೧೪ ರಿಂದ ೨೦೧೬–೧೭ನೇ ಸಾಲಿನವರೆಗೆ ಅಬಿವೃದ್ಧಿ ಕಾರ್ಯಗಳಿಗೆ ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಸದರಿ ಕಾಮಗಾರಿಗಳು ಯಾವ ಹಂತದಲ್ಲಿವೆ? (ಜಿಲ್ಲಾವಾರು/ ತಾಲ್ಲೂಕುವಾರು, ಪೂರ್ಣಗೊಂಡ/ಬಾಕಿ ಇರುವ ಕಾಮಗಾರಿಗಳವಾರು ವಿವರ ನೀಡುವುದು)

**ಮರಳು ಮಾಫಿಯಾದಲ್ಲಿ ಅಧಿಕಾರಿಗಳ ಕೈವಾಡವಿರುವ ಬಗ್ಗೆ**

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೫೫ (೩೯೮೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ಮರಳು ಗಣಿಗಾರಿಕೆ ಸಾಗಾಟದಲ್ಲಿ ಮರಳು ಮಾಫಿಯಾದ ಕೈವಾಡ ಹಾಗೂ ಇದಕ್ಕೆ ಗಣಿಗಾರಿಕೆಗೆ ಸಂಬಂಧಿಸಿದ ಅಧಿಕಾರಿ ಹಾಗೂ ಸಿಬ್ಬಂದಿ ನೇರವಾಗಿ ಶಾಮೀಲಾಗಿರುತ್ತಾರೆಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು)

(ಆ) ಕಾರವಾರ ಜಿಲ್ಲೆಯಲ್ಲಿ ಇಲ್ಲಿಯರವೆಗೆ ಯಾವ ಯಾವ ಕ್ವಾರಿಗೆ ಅನುಮತಿ ನೀಡಿರುತ್ತದೆ; ಎಷ್ಟು ಪ್ರಮಾಣದಲ್ಲಿ ಮರಳು ರಫ್ತು ಮಾಡಿರುತ್ತಾರೆ; (ಸಂಬಂಧಿಸಿದವರಿಗೆ ಪಾಸ್ ವಿತರಣೆ ಮಾಡಿದ ವಿವರದ ಸವಿಸ್ತಾರ ವರದಿ ನೀಡುವುದು)

(ಇ) ಮರಳು ತೆಗೆಯಲು ಜಿಲ್ಲೆಯ ಯಾವ ಯಾವ ಸ್ಥಳದಲ್ಲಿ ಅನುಮತಿ ನೀಡಿರುತ್ತೀರಿ; ಪ್ರತಿ ಕ್ವಾರಿಯಿಂದ ಪ್ರತಿ ತಿಂಗಳು ಎಷ್ಟು ಪ್ರಮಾಣದಲ್ಲಿ ಪ್ರತಿ ದಿವಸ ಮರಳು ರಫ್ತಾಗಿರುತ್ತದೆ; ಎಲ್ಲಿಗೆ ರಫ್ತಾಗಿರುತ್ತದೆ; (ಪಾಸ್ ನಂಬರ್ ಸಮೇತ ಜಿಲ್ಲಾವಾರು/ತಾಲ್ಲೂಕುವಾರು/ಮಾರ್ಚ್ ೨೦೧೭ ರಿಂದ ಅಕ್ಟೋಬರ್ ೨೦೧೭ರವರೆಗಿನ ಮಾಹಿತಿ ಒದಗಿಸುವುದು);

(ಈ) ಸದರಿ ಮರಳು ಕ್ವಾರಿಗೆ ಅನುಮತಿಸಿರುವ ಸ್ಥಳದಿಂದ ನಿಯಮ ಬಾಹಿರವಾಗಿ ಮರಳು ರಫ್ತು ಮಾಡಿ ನಿಯಮ ಉಲ್ಲಂಘನೆ ಮಾಡಿದರೂ, ಮತ್ತೆ ಅದೇ ಸ್ಥಳದಲ್ಲಿ ಅಧಿಕಾರಿಗಳು ಶಾಮೀಲಾಗಿ ಮರಳು ರಫ್ತಿಗೆ ಅವಕಾಶ ಕೊಟ್ಟಿರುವುದು ಕಾನೂನು ಬಾಹಿರವಲ್ಲವೇ? (ವಿವರ ನೀಡುವುದು)

## ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅವ್ಯವಹಾರ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೫೬ (೩೯೨೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾತ್ಮ ಗಾಂಧೀಜಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ೨೦೧೩–೧೪ ರಿಂದ ೨೦೧೬–೧೭ನೇ ಸಾಲಿನವರೆಗೆ ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕು ವ್ಯಾಪ್ತಿಯಲ್ಲಿ

ಕರ್ತವ್ಯ ನಿರ್ವಹಿಸಿದ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು; (ಹೆಸರು, ಅವರು ಕೆಲಸ ನಿರ್ವಹಿಸಿದ ವಿವರ, ಕೂಲಿ ನೀಡಿದ ವಿವರ, ಕೆಲಸ ನಿರ್ವಹಿಸಿದ ಸ್ಥಳದ ಮಾಹಿತಿಯೊಂದಿಗೆ ವಿವರ ನೀಡುವುದು)

(ಆ) ಸದರಿ ಯೋಜನೆಯಡಿಯಲ್ಲಿ ೨೦೧೩–೧೪ ರಿಂದ ೨೦೧೭–೧೮ನೇ ಸಾಲಿನವರೆಗೆ ಕೆಲಸ ನಿರ್ವಹಿಸಿದವರಿಗೆ ನೀಡಿರುವ ಕನಿಷ್ಠ ಕೂಲಿ ಹಾಗೂ ಗುಂಪುಗಳ ಕೆಲಸದ ವಿಚಾರದಲ್ಲಿ ಅವ್ಯವಹಾರ ನಡೆದಿರುವುದು ನಿಜವೇ?

## ಸ್ವಚ್ಛ ಭಾರತ ಅಭಿಯಾನ ಯೋಜನೆಯಡಿ ಫಲಾನುಭವಿಗಳಿಗೆ ಶೌಚಾಲಯ ಮತ್ತು ಪ್ರೋತ್ಸಾಹಧನ ನೀಡುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೫೭ (೩೯೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯು ಪ್ರತಿ ತಾಲ್ಲೂಕಿನಲ್ಲಿ ಸ್ವಚ್ಛ ಭಾರತ ಯೋಜನೆಯಡಿಯಲ್ಲಿ ಗೃಹ ಶೌಚಾಲಯ, ಶಾಲಾ ಮತ್ತು ಅಂಗನವಾಡಿ ಶೌಚಾಲಯ ಹಾಗೂ ಸಮುದಾಯ ಶೌಚಾಲಯದ ಎಷ್ಟು ಫಲಾನುಭವಿಗಳಿಗೆ ಪ್ರೋತ್ಸಾಹ ಧನ ನೀಡಲಾಗಿದೆ; ಎಷ್ಟು ಶೌಚಾಲಯಗಳು ನಿರ್ಮಾಣವಾಗಿವೆ; (ವಿವರ ನೀಡುವುದು)

(ಆ) ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಮನೆಗಳಿಗೆ ಶೌಚಾಲಯಗಳನ್ನು ಒದಗಿಸಲು ಬಾಕಿ ಉಳಿದಿರುತ್ತದೆ? (ವಿವರ ನೀಡುವುದು)

## ರಾಜೀವ್ ಗಾಂಧಿ ಯುವ ಚೈತನ್ಯ ಯೋಜನೆ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೭೮ (೩೯೨೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ರಾಜೀವ್ ಗಾಂಧಿ ಯುವ ಚೈತನ್ಯ ಯೋಜನೆಯಡಿಯಲ್ಲಿ ರಚನೆಯಾದ ಒಟ್ಟು ಗುಂಪುಗಳ ಸಂಖ್ಯೆ ಎಷ್ಟು; ಹಾಗೂ ಅವರ ಕಾರ್ಯಕ್ರಮದ ವಿವರ ನೀಡುವುದು;

(ಆ) ಇಲ್ಲಿಯವರೆಗೆ ಪ್ರತಿ ತಾಲ್ಲೂಕಿನಲ್ಲಿ ಎಷ್ಟು ಗುಂಪುಗಳಿಗೆ ಯಾವ ಯಾವ ಕೌಶಲ್ಯ ತರಬೇತಿ ನೀಡಲಾಗಿದೆ; (ಸವಿಸ್ತಾರ ವರದಿ ನೀಡುವುದು)

(ಇ) ಪ್ರತಿ ತಾಲ್ಲೂಕಿನಲ್ಲಿ ಎಷ್ಟು ಗುಂಪುಗಳಿಗೆ ಸಹಾಯ ಧನವನ್ನು ನೀಡಲಾಗಿದೆ? (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

## ಕಲಬುರಗಿ ಜಿಲ್ಲೆಯ ಉರ್ದು ಶಾಲೆಗಳ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೩೬೭೯ (೪೦೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯಲ್ಲಿರುವ ಉರ್ದು ಶಾಲೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಕಳೆದ ೪ ವರ್ಷಗಳಲ್ಲಿ ಜಿಲ್ಲೆಯಲ್ಲಿನ ಉರ್ದು ಶಾಲೆಗಳಿಗೆ ಒಟ್ಟು ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ; ಇಂತಹ ಶಾಲೆಗಳಿಗೆ ಅನುದಾನ ಬಿಡುಗಡೆ ಮಾಡಲು ಅನುಸರಿಸುವ ಮಾನದಂಡಗಳೇನು;

(ಇ) ಜಿಲ್ಲೆಯಲ್ಲಿ ಹೊಸದಾಗಿ ಉರ್ದು ಶಾಲೆಗಳನ್ನು ತೆರೆಯುವ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ವಿವರ ಒದಗಿಸುವುದು?

## ತೆರಕಣಾಂಬಿ ಗ್ರಾಮಪಂಚಾಯತಿ ವ್ಯಾಪ್ತಿಯ ತೆರಕಣಾಂಬಿ ಹುಂಡಿ ಗ್ರಾಮದಲ್ಲಿ ರಸ್ತೆ ಚರಂಡಿ ನಿರ್ಮಾಣ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೬೦ (೩೮೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ತಾಲ್ಲೂಕು, ತೆರಕಣಾಂಬಿ ಗ್ರಾಮಪಂಚಾಯತಿ ವ್ಯಾಪ್ತಿಗೆ ಸೇರಿದ ತೆರಕಣಾಂಬಿ ಹುಂಡಿ ಗ್ರಾಮದಲ್ಲಿನ ರಸ್ತೆಗಳೆಲ್ಲವೂ ಮಣ್ಣು ರಸ್ತೆಗಳಾಗಿದ್ದು, ಚರಂಡಿ ವ್ಯವಸ್ಥೆ ಇಲ್ಲದಿರುವುದರಿಂದ, ನೀರು ನಿಂತು ಕೆಸರುಗುಂಡಿಗಳಾಗಿ, ಜನ ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಗಮನಕ್ಕೆ ಬಂದಿದೆಯೇ;

(ಆ) ತೆರಕಣಾಂಬಿ ಹುಂಡಿ ಗ್ರಾಮದ ರಸ್ತೆಗಳನ್ನು ದುರಸ್ಥಿಗೊಳಿಸಿ ಡಾಂಬರು ಹಾಕಲು ಅಥವಾ ಸಿಮೆಂಟ್ ರಸ್ತೆಯನ್ನಾಗಿ ಮಾಡಲು ಮತ್ತು ಚರಂಡಿ ವ್ಯವಸ್ಥೆಯನ್ನು ಸರಿಪಡಿಸಲು ಸಾಕಷ್ಟು ಅನುದಾನ ನೀಡಿ, ಸೂಕ್ತ ಕ್ರಮ ಜರುಗಿಸಲಾಗುವುದೇ?

## ಡೀಮ್ಡ್ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೬೬೧ (೩೮೯೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಹಿತದೃಷ್ಟಿಯನ್ನು ಕಾಪಾಡಲು ಸರ್ಕಾರವು ಯಾವ ರೀತಿ ಕ್ರಮಗಳನ್ನು ಕೈಗೊಂಡಿವೆ;

(ಆ) ಈ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಕಾರ್ಮಿಕ ಇಲಾಖೆಯ ರೀತಿ–ನಿಯಮಗಳು ಅನ್ವಯವಾಗುವುದೇ; ಆಗಿದ್ದಲ್ಲಿ, ಅವುಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಇ) ಈ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ನೌಕರರ ಕರ್ತವ್ಯದ ವೇಳೆಯನ್ನು ಸರ್ಕಾರದ ಆದೇಶದ ಪ್ರಕಾರ ಯಾವ ರೀತಿ ನಿಗದಿಪಡಿಸಿದೆ; ಇದನ್ನು ಮೀರಿದಲ್ಲಿ ಯಾವ ರೀತಿಯಲ್ಲಿ ಅವರುಗಳ ವಿರುದ್ಧ ಕಠಿಣ ಕ್ರಮಕೈಗೊಳ್ಳಲಾಗುವುದು; ಇವುಗಳ ಮೇಲೆ ಸರ್ಕಾರದ ಹತೋಟಿ ಯಾವ ರೀತಿಯಲ್ಲಿ ಇರಲಿದೆ? (ಸಂಪೂರ್ಣ ವಿವರ ಹಾಗೂ ಈ ಕುರಿತು ಇರುವ ಸರ್ಕಾರಿ ಆದೇಶದ ಪ್ರತಿಯೊಂದಿಗೆ ಮಾಹಿತಿ ನೀಡುವುದು)

## ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೬೬೨ (೩೮೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಶಾಲೆಗಳ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ ಕುರಿತು ಈವರೆಗೆ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಎಷ್ಟು ಶಾಲಾ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯು ಮುಕ್ತಾಯವಾಗಿದ್ದು, ಇವರುಗಳಲ್ಲಿ ಎಷ್ಟು ಶಿಕ್ಷಕರು ಆದೇಶವಾದ ಸ್ಥಳಗಳಿಗೆ ವರದಿ ಮಾಡಿಕೊಂಡು ಕರ್ತವ್ಯ ನಿರ್ವಹಿಸುತ್ತಿದ್ದಾರೆ; ಬಾಕಿ ಇರುವವರ ಜಿಲ್ಲಾವಾರು ವಿವರ ಎಷ್ಟು; ಇದಕ್ಕೆ ಕಾರಣಗಳೇನು;

(ಇ) ಈ ವರ್ಗಾವಣೆಯಾದ ಶಿಕ್ಷಕರನ್ನು ಯಾವ ಕಾಲಮಿತಿಯೊಳಗೆ ವರ್ಗಾವಣೆಯಾದ ಸ್ಥಳಕ್ಕೆ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳಲಾಗಿದೆ?

## ಸರ್ಕಾರಿ ಶಾಲೆಗಳ ಮೂಲಭೂತ ಸೌಲಭ್ಯಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೬೬೩ (೩೮೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಕುಡಿಯುವ ನೀರು ಮತ್ತು ಶೌಚಾಲಯ ನಿರ್ಮಾಣಕ್ಕೆ ಕಳೆದ ೩ ವರ್ಷಗಳಲ್ಲಿ ಮೀಸಲಿಟ್ಟ ಅನುದಾನ ಎಷ್ಟು; (ವರ್ಷಾವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಎಷ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ೨೦೧೬–೧೭,೨೦೧೭–೧೮ನೇ ಸಾಲಿನಲ್ಲಿ ಈವರೆಗೆ ಹೊಸದಾಗಿ ಎಷ್ಟು ಕುಡಿಯುವ ನೀರು ಮತ್ತು ಶೌಚಾಲಯ ನಿರ್ಮಾಣ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಜಿಲ್ಲೆಗಳ ಕಾಲೇಜುಗಳಲ್ಲಿ ಗಂಡು ಮಕ್ಕಳಿಗೆ ಶೌಚಾಲಯ ಇಲ್ಲದಿರುವುದು ಹಾಗೂ ಬಾಲಕರು ಬಯಲಿನಲ್ಲಿ ಮೂತ್ರ ವಿಸರ್ಜನೆ ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಬಾಲಕರ ಶೌಚಾಲಯಗಳನ್ನು ನಿರ್ಮಾಣ ಮಾಡಲು ಈವರೆಗೆ ಕೈಗೊಂಡಿರುವ ಕ್ರಮಗಳೇನು? (ಜಿಲ್ಲಾವಾರು ವಿವರ ನೀಡುವುದು)

## ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೬೪ (೩೮೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರಾವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ೨೦೧೭ರ ಪ್ರಾರಂಭದಿಂದ ಈವರೆಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಕೈಗೊಂಡಿರುವ ವೈಯಕ್ತಿಕ ಕಾಮಗಾರಿಗಳು ಮತ್ತು ಸಮುದಾಯ ಕಾಮಗಾರಿಗಳೆಷ್ಟು; (ಜಿಲ್ಲಾ, ತಾಲ್ಲೂಕು ಹಾಗೂ ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಧಾರವಾಡ ಗದಗ ಹಾಗೂ ಹಾವೇರಿ ಜಿಲ್ಲೆಗಳಿಗೆ ಈ ಯೋಜನೆಯಡಿ ಈ ವರ್ಷದಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಎಷ್ಟು ಕಾಲಮಿತಿ ನಿಗದಿಪಡಿಸಲಾಗಿದೆ; ವಿಳಂಬವಾಗಿದ್ದಲ್ಲಿ, ಕಾರಣಗಳೇನು? (ವಿವರ ನೀಡುವುದು)

## ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸುವ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೬೫ (೩೮೯೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವತಿಯಿಂದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ಯಾವ ಮಾನದಂಡದ ಆಧಾರದ ಮೇಲೆ ವಿತರಿಸಲಾಗಿದೆ;

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಈ ಲ್ಯಾಪ್‌ಟಾಪ್‌ಗಳನ್ನು ಈವರೆಗೆ ಎಷ್ಟು ವಿದ್ಯಾರ್ಥಿಗಳಿಗೆ ವಿತರಿಸಲಾಗಿದೆ; (ವಿದ್ಯಾರ್ಥಿಗಳವಾರು, ಕಾಲೇಜುವಾರು ಸಂಪೂರ್ಣ ವಿವರ ನೀಡುವುದು)

(ಇ) ಈವರೆಗೆ ಈ ಇಲಾಖೆಗಳು ಎಷ್ಟು ಲ್ಯಾಪ್‌ಟಾಪ್‌ಗಳನ್ನು ಖರೀದಿಸಿವೆ; ಪ್ರತಿಯೊಂದು ಲ್ಯಾಪ್‌ಟಾಪ್ ಖರೀದಿಗೆ ತಗುಲಿದ ವೆಚ್ಚವೆಷ್ಟು; ಈ ಲ್ಯಾಪ್‌ಟಾಪ್‌ನ Configration ಹಾಗೂ ಕಂಪನಿಯ ವಿವರಗಳನ್ನು ನೀಡುವುದು?

## ಸರ್ಕಾರಿ ಶಾಲೆಗಳ ಅಂಕಿ ಅಂಶಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೬೬ (೪೦೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿ ಪ್ರಸ್ತುತ ಇರುವ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು; (ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಪಾಠ ಮಾಡುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; (ಜಿಲ್ಲಾವಾರು, ವಿಷಯವಾರು ಮಾಹಿತಿ ನೀಡುವುದು)

(ಇ) ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಪ್ರಾಥಮಿಕ, ಪ್ರೌಢ ಸರ್ಕಾರಿ ಶಾಲೆಗಳ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೬೭ (೪೦೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೦ ವರ್ಷಗಳಿಂದ ಕರ್ನಾಟಕದಲ್ಲಿ ಮುಚ್ಚಿರುವ ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಹಾಗೂ ವರ್ಷಾವಾರು ಅಂಕಿ ಸಂಖ್ಯೆಗಳನ್ನು ನೀಡುವುದು)

(ಆ) ಸರ್ಕಾರಿ ಶಾಲೆಗಳನ್ನು ಮುಚ್ಚಲು ನೀಡಿರುವ ಕಾರಣಗಳೇನು; (ಮಾಹಿತಿ ಒದಗಿಸುವುದು)

(ಇ) ಸರ್ಕಾರಿ ಶಾಲೆಗಳನ್ನು ಪುನಶ್ಚೇತನಗೊಳಿಸಲು ಸರ್ಕಾರವು ಏನಾದರೂ ಕ್ರಮ ಕೈಗೊಂಡಿದೆಯೇ? (ಮಾಹಿತಿ ನೀಡುವುದು)

## ಪದೋನ್ನತಿಗೊಂಡ ಶಾಲಾ ಮಾತೆಯರ ಬಡ್ತಿ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೬೮ (೩೮೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಸಹಶಿಕ್ಷಕಿಯಾಗಿ ಪದನ್ನೋತಿಗೊಂಡ ಶಾಲಾ ಮಾತೆಯರಿಗೆ ಮೈಸೂರು ಸೇರಿದಂತೆ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ೨೫ ವರ್ಷದ ಬಡ್ತಿ ಹಾಗೂ ೩೦ ವರ್ಷದ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇವರಿಗೆ ಬಡ್ತಿ ನೀಡಲು ಕೈಗೊಂಡ ಕ್ರಮಗಳೇನು;

(ಇ) ವಿಳಂಬವಾಗಲು ಕಾರಣವೇನು? (ಮಾಹಿತಿ ಒದಗಿಸುವುದು)

## ರಾಮನಗರದಲ್ಲಿ ಹೊಸ ಕೈಗಾರಿಕೆ ಸ್ಥಾಪಿಸುವ ಉದ್ಯಮದಾರರಿಗೆ ನೀಡುತ್ತಿರುವ ಸೌಲಭ್ಯದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೯೯ (೪೦೩೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯು ಕೈಗಾರಿಕೆಯಲ್ಲಿ ಅಭಿವೃದ್ಧಿ ಹೊಂದಿದ ಪ್ರದೇಶವೆಂದು ಗುರುತಿಸಿದ್ದು, ಜಿಲ್ಲೆಯಲ್ಲಿ ಹೊಸ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದಿಮೆದಾರರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರವು ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದಿಮೆದಾರರಿಗೆ ಯಾವುದೇ ರೀತಿಯ ಸೌಲಭ್ಯಗಳನ್ನು ನೀಡದಿರುವುದರಿಂದ ಕೈಗಾರಿಕೆಯಲ್ಲಿ ಹಿಂದೆ ಬಿದ್ದಿರುವುದು ನಿಜವೇ;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳನ್ನು ಕೈಗಾರಿಕೆಯಲ್ಲಿ ಹಿಂದುಳಿದ ಪ್ರದೇಶವೆಂದು ಘೋಷಿಸಲಾಗಿದೆ; ಇದಕ್ಕೆ ಕಾರಣಗಳೇನು; ರಾಜಧಾನಿ

ಬೆಂಗಳೂರಿನಲ್ಲಿ ದಟ್ಟಣೆಯನ್ನು ತಪ್ಪಿಸಲು ಸಮೀಪದ ಜಿಲ್ಲೆಗಳಲ್ಲಿ ಹೆಚ್ಚಿನ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವುದೇ? (ಮಾಹಿತಿ ನೀಡುವುದು)

## ಸರ್ಕಾರಿ ಶಾಲೆಗಳ ದುರಸ್ಥಿ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೭೦ (೪೦೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಶಾಲೆಗಳನ್ನು ದುರಸ್ಥಿಗೊಳಿಸಲು ಬಂದಿರುವ ಪ್ರಸ್ತಾವನೆಗಳೆಷ್ಟು; (ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಸರ್ಕಾರಿ ಶಾಲೆಗಳ ದುರಸ್ಥಿಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದರೂ ಸಹ ಇದುವರೆವಿಗೂ ದುರಸ್ಥಿ ಕಾರ್ಯವನ್ನು ಕೈಗೊಳ್ಳದಿರಲು ಕಾರಣಗಳೇನು; (ವಿವರಗಳನ್ನು ನೀಡುವುದು)

(ಇ) ಸರ್ಕಾರಿ ಶಾಲೆಗಳ ದುರಸ್ಥಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು; ಖರ್ಚು ಮಾಡಲಾದ ಹಣವೆಷ್ಟು; ಖರ್ಚಾಗದೆ ಉಳಿದ ಹಣವೆಷ್ಟು; ಇದಕ್ಕೆ ಕಾರಣಗಳೇನು; (ವರ್ಷಾವಾರು ಸಂಪೂರ್ಣ ವಿವರಗಳನ್ನು ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ದುರಸ್ಥಿಪಡಿಸಲಾದ ಶಾಲೆಗಳೆಷ್ಟು; ಬಾಕಿಯಿರುವ ಶಾಲೆಗಳೆಷ್ಟು; ಬಾಕಿ ಉಳಿಯಲು ಕಾರಣಗಳೇನು? (ವಿವರಗಳನ್ನು ನೀಡುವುದು)

## ಬಿಸಿಯೂಟಕ್ಕೆ ಉಪಾಧ್ಯಾಯರನ್ನು ಬಳಸಿಕೊಳ್ಳುತ್ತಿರುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೭೧ (೪೦೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಬಿಸಿ ಊಟದ ವ್ಯವಸ್ಥೆ ಒಂದು ಉತ್ತಮ ಯೋಜನೆಯಾಗಿದ್ದು, ಈ ಯೋಜನೆಗೆ ಶಾಲೆಯ ಮುಖ್ಯ ಉಪಾಧ್ಯಾಯರನ್ನು ಬಳಸಿಕೊಳ್ಳುತ್ತಿರುವುದರಿಂದ ಉಪಾಧ್ಯಾಯರು ಪೂರ್ಣ ಪ್ರಮಾಣದಲ್ಲಿ ವಿದ್ಯಾರ್ಥಿಗಳಿಗೆ ಬೋಧಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರಿ ಶಾಲೆಗಳಲ್ಲಿ ಗ್ರಾಮೀಣ ಪ್ರದೇಶದ ಮಕ್ಕಳ ಶೈಕ್ಷಣಿಕ ಪ್ರಗತಿಯನ್ನು ಹೆಚ್ಚಿಸಲು ಅನುಕೂಲವಾಗುವಂತೆ ಉಪಾಧ್ಯಾಯರನ್ನು ಬಿಸಿ ಊಟ ಯೋಜನೆಯಿಂದ ಬಿಡುಗಡೆಗೊಳಿಸಲಾಗುವುದೇ;

(ಇ) ಹಾಗಿದ್ದಲ್ಲಿ, ಪರ್ಯಾಯ ವ್ಯವಸ್ಥೆಯನ್ನು ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಸಂಪೂರ್ಣ ಮಾಹಿತಿ ನೀಡುವುದು)

## ಸಿ.ಇ.ಟಿ. ಮೂಲಕ ಆಯ್ಕೆಗೊಂಡ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಅನುದಾನ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೭೨ (೪೦೨೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಿ.ಇ.ಟಿ. ಮೂಲಕ ಆಯ್ಕೆಗೊಂಡು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರವು ಪ್ರತಿ ವಿದ್ಯಾರ್ಥಿಗೆ ನೀಡುತ್ತಿರುವ ವಾರ್ಷಿಕ ಅನುದಾನವೆಷ್ಟು; (ಶಿಕ್ಷಣ ಸಂಸ್ಥೆಗಳವಾರು ವಿದ್ಯಾರ್ಥಿಗಳವಾರು ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಸರ್ಕಾರವು ಸಿ.ಇ.ಟಿ. ವಿದ್ಯಾರ್ಥಿಗಳಿಗೆ ಅನುದಾನ ನೀಡದಿದ್ದಲ್ಲಿ, ಶಿಕ್ಷಣ ಸಂಸ್ಥೆಗಳು ಪ್ರತಿ ವಿದ್ಯಾರ್ಥಿಗೆ ವಿಧಿಸಬಹುದಾದ ಕಾಲೇಜು ಶುಲ್ಕ ಎಷ್ಟು; (ವಿವರಗಳನ್ನು ನೀಡುವುದು)

(ಇ) ಸರ್ಕಾರ ಅನುದಾನ ನೀಡಿದ್ದಲ್ಲಿ, ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಪ್ರತ್ಯೇಕ ಬ್ಯಾಂಕ್ ಖಾತೆ ತೆರೆದು ಶುಲ್ಕ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; (ವಿವರಗಳನ್ನು ನೀಡುವುದು)

(ಈ) ಸರ್ಕಾರಿ ಶಾಲೆಗಳ ದುರಸ್ಥಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು; ಖರ್ಚು ಮಾಡಲಾದ ಹಣವೆಷ್ಟು; ಖರ್ಚಾಗದೆ ಉಳಿದ ಹಣವೆಷ್ಟು; ಇದಕ್ಕೆ ಕಾರಣಗಳೇನು; (ವರ್ಷವಾರು, ಸಂಪೂರ್ಣ ವಿವರಗಳನ್ನು ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣದ ಅನುದಾನದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೬೭೩ (೪೦೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಿಂದ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಇಲಾಖೆ ವತಿಯಿಂದ ಮುಸ್ಲಿಂ ಸಮುದಾಯದವರಿಗೆ ಯಾವ್ಯಾವ ಉದ್ದೇಶಕ್ಕೆ ಸಬ್ಸಿಡಿ ಸಾಲ ಅಥವಾ ಅನುದಾನ ನೀಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಮನಗರ, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಇಲಾಖೆ ವತಿಯಿಂದ ಮುಸ್ಲಿಂ ಸಮುದಾಯದ ಶಾದಿಮಹಲ್/ಮಸೀದಿ/ಕಬರಸ್ತಾನ್ ಕಾಂಪೌಂಡ್ ಇನ್ನಿತರ ನಿರ್ಮಾಣಕ್ಕೆ ಅನುದಾನ ನೀಡಲಾಗಿದೆಯೇ;

(ಇ) ಹಾಗಿದ್ದಲ್ಲಿ, ಕಳೆದ ೨ ವರ್ಷಗಳಿಂದ ಎಷ್ಟೆಷ್ಟು ಅನುದಾನ ನೀಡಲಾಗಿದೆ? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

## ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಶೌಚಾಲಯ ನಿರ್ಮಾಣದ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೩೬೭೪ (೪೦೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಈವರೆಗೆ ಎಷ್ಟು ಶೌಚಾಲಯ ನಿರ್ಮಾಣವಾಗಿವೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಶೌಚಾಲಯ ನಿರ್ಮಿಸಿಕೊಂಡ ಫಲಾನುಭವಿಗಳಿಗೆ ಪೂರ್ಣವಾಗಿ ಸಹಾಯಧನ ಸಂದಾಯ ಮಾಡಲಾಗಿದೆಯೇ;

(ಇ) ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಶೌಚಾಲಯ ನಿರ್ಮಿಸಿಕೊಂಡು ಸಹಾಯಧನ ಬಿಡುಗಡೆ ಆಗದೇ ಬಾಕಿಯಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಸಹಾಯಧನ ಸಂದಾಯಕ್ಕೆ ಬಾಕಿಯಿರುವ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಹಣ ಸಂದಾಯ ಮಾಡಲಾಗುವುದು? (ವಿವರ ನೀಡುವುದು)

## ಕುಡಿಯುವ ನೀರಿನ ಟ್ಯಾಂಕ್ ನಿರ್ಮಾಣ ಕಾಮಗಾರಿ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೭೫ (೪೦೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ನಂದಗಾಂವ ಗ್ರಾಮದಲ್ಲಿ (ಭರಮದೇವರ ಗುಡಿ ಹತ್ತಿರ) ಕಳೆದ ಎರಡು ವರ್ಷಗಳ ಹಿಂದೆ ಕೈಗೊಂಡ ಕುಡಿಯುವ ನೀರಿನ ಟ್ಯಾಂಕ್ ನಿರ್ಮಾಣ ಕಾಮಗಾರಿಯು ಇನ್ನೂ ಪೂರ್ಣಗೊಂಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ನೀರಿನ ಟ್ಯಾಂಕ್ ಕಾಮಗಾರಿ ಪೂರ್ಣಗೊಳ್ಳದೇ ಇರುವುದರಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು; ಮತ್ತು ಸದರಿ ಕಾಮಗಾರಿಯನ್ನು ಬೇಸಿಗೆ ಮುಂಚೆಯೇ ಪೂರ್ಣಗೊಳಿಸಿ ಸಾರ್ವಜನಿಕರ ನೀರಿನ ಬವಣೆ ನೀಗಿಸಲಾಗುವುದೇ?

## ಗ್ರಾಮ ಸಭೆಗಳಿಗೆ ಅಧಿಕಾರಿಗಳು ಹಾಜರಾಗದೇ ಇರುವ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೭೬ (೪೦೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿಯ ವಿವಿಧ ಗ್ರಾಮ ಸಭೆಗಳಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಯು ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬರುವ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸಭೆಗೆ ಹಾಜರಾಗುವಂತೆ ನೋಟಿಸು ಮೂಲಕ ಆಹ್ವಾನಿಸುತ್ತಿದ್ದು, ಇಂತಹ ಸಭೆಗಳಿಗೆ ಅಧಿಕಾರಿಗಳು ಸಭೆಗೆ ಹಾಜರಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅಧಿಕಾರಿಗಳು ಗ್ರಾಮ ಸಭೆಗಳಿಗೆ ಹಾಜರಾಗದೇ ಇರುವುದರಿಂದ ಗ್ರಾಮ ಮಟ್ಟದ ವಿವಿಧ ಅಭಿವೃದ್ಧಿ ಕಾಮಗಾರಿಗಳ ರೂಪುರೇಷೆಗಳನ್ನು ಸಮರ್ಪಕವಾಗಿ ಸಿದ್ಧಪಡಿಸಲು ಗ್ರಾಮ ಪಂಚಾಯಿತಿ/ಗ್ರಾಮ ಸಭೆಯು ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು?

## ಮಳೆಯಿಂದ ಹಾನಿಗೊಳಗಾದ ರಸ್ತೆಗಳ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೭೭ (೪೦೩೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಇತ್ತೀಚೆಗೆ ಆದ ಮಳೆಯಿಂದ ಹಾಳಾದ ರಸ್ತೆಗಳೆಷ್ಟು; ಮತ್ತು ಅವುಗಳ ದೂರ (ಕಿ.ಮೀ.ಗಳಲ್ಲಿ) ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇತ್ತೀಚಿನ ಮಳೆಯಿಂದಾಗಿ ಹಾಳಾದ ರಸ್ತೆಗಳ ದುರಸ್ಥಿ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು;

(ಇ) ಕ್ರಮ ಕೈಗೊಂಡಿದ್ದಲ್ಲಿ, ರಸ್ತೆ ದುರಸ್ಥಿ ಮಾಡಿದ ಕಾಮಗಾರಿಗಳ ಪಟ್ಟಿಯನ್ನು ತಾಲ್ಲೂಕುವಾರು ವಿವರ ಒದಗಿಸುವುದು?

## ಗ್ರಾಮ ಪಂಚಾಯತಿಗಳಿಗೆ ಹೊಸ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೭೮ (೩೯೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತಿಗಳಿಗೆ ಹೊಸ ಕಟ್ಟಡ ಕಟ್ಟುವಾಗ ೧೬ ಲಕ್ಷದ ೨೫ ಸಾವಿರ ರೂಪಾಯಿಗಳ ಯೋಜನೆ ಮಾತ್ರ ಇದೆಯೇ;

(ಆ) ಈ ಅಂದಾಜು ವೆಚ್ಚ ಯಾವ ವರ್ಷದಿಂದ ಚಾಲ್ತಿಯಲ್ಲಿದೆ; ಕಟ್ಟಡ ಅಂದಾಜು ವೆಚ್ಚವನ್ನು ೧೬.೨೫ ಲಕ್ಷಗಳಿಂದ ಹೆಚ್ಚಿಸುವ ಉದ್ದೇಶವಿದೆಯೇ;

(ಇ) ಗ್ರಾಮ ಪಂಚಾಯತಿಗಳಿಗೆ ೧೦೦ ಸೇವೆಗಳನ್ನು ನೀಡುತ್ತಿರುವುದರಿಂದ ವಿಶಾಲ ಕಟ್ಟಡ ಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಉಪ ಪ್ರಾದೇಶಿಕ ಸಾರಿಗೆ ಆಯುಕ್ತರ ಕಛೇರಿ ಮತ್ತು ಚಾಲನಾ ಪರವಾನಿಗೆ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೭೯ (೪೩೬೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ನೋಂದಣಿಯಾದ ವಾಹನಗಳ ಸಂಖ್ಯೆ ಎಷ್ಟು; (ವರ್ಷಾವಾರು ವಿವರ ನೀಡುವುದು)

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅತೀ ಹೆಚ್ಚು ವಾಹನ ನೋಂದಣಿಯಾಗುವ ತಾಲ್ಲೂಕುಗಳಾವುವು; ಇವುಗಳಲ್ಲಿ ಉಪ ಪ್ರಾದೇಶಿಕ ಸಾರಿಗೆ ಆಯುಕ್ತರ ಕಛೇರಿ ಇರುವ ತಾಲ್ಲೂಕುಗಳು ಯಾವುವು;

(ಇ) ಕುಂದಾಪುರ ತಾಲ್ಲೂಕಿನಲ್ಲಿ ಅತೀ ಹೆಚ್ಚು ವಾಹನ ನೋಂದಣಿಯಾಗುತ್ತಿದ್ದರೂ ಸಹ ಉಪ ಪ್ರಾದೇಶಿಕ ಸಾರಿಗೆ ಆಯುಕ್ತರ ಕಛೇರಿ ಪ್ರಾರಂಭಿಸದೇ ಇರಲು ಕಾರಣವೇನು; ಇದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು;

(ಈ) ರಾಜ್ಯದ ಎಷ್ಟು ಉಪ ಪ್ರಾದೇಶಿಕ ಸಾರಿಗೆ ಆಯುಕ್ತರ ಕಛೇರಿಗಳಲ್ಲಿ ವಾಹನ ಚಾಲನಾ ಪರವಾನಿಗೆ ನೀಡಲು ಸ್ವಯಂ ಚಾಲಿತ ಪಥಗಳನ್ನು (Automated Track) ಅಳವಡಿಸಲಾಗಿದೆ; ಬಾಕಿ ಇರುವ ಕೇಂದ್ರಗಳಲ್ಲಿ ಸ್ವಯಂ ಚಾಲಿತ ಪಥಗಳ ಅಳವಡಿಕೆಗೆ ಸರ್ಕಾರದ ಕ್ರಮವೇನು?

## ಖನಿಜ ಸಂಪತ್ತಿನ ರಕ್ಷಣೆ.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬೮೦ (೪೩೫೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖನಿಜ ಸಂಪತ್ತನ್ನು ರಕ್ಷಿಸಲು ಜಿಲ್ಲಾ ಮಟ್ಟಗಳಲ್ಲಿ ಕೇವಲ ೨,೩ ಅಧಿಕಾರಿಗಳಿಂದ ಸಾಧ್ಯವೇ; ಈ ಖನಿಜ ಸಂಪತ್ತಿನ ಲೂಟಿಯ ಸಿಂಹಪಾಲು ಅಧಿಕಾರಿಗಳ ವಶವಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

(ಆ) ಉಡುಪಿ ಜಿಲ್ಲೆಯಲ್ಲಿ ಬೃಹತ್ ಗಾತ್ರದ ಕಲ್ಲುಗಳ ಸಾಗಾಣಿಕೆಯು ನಡೆಯುತ್ತಿದ್ದು, ಸಿ.ಸಿ.ಟಿ.ವಿ ದಾಖಲೆಗಳಿದ್ದರೂ, ಅಧಿಕಾರಿಗಳ ನಿರ್ಲಕ್ಷ್ಯತನದಿಂದ ಯಾವುದೇ ಕ್ರಮ ಕೈಗೊಳ್ಳದಿರುವುದಕ್ಕೆ ಕಾರಣಗಳೇನು;

(ಇ) ಉಡುಪಿ ಜಿಲ್ಲೆಯಲ್ಲಿ ಬೃಹತ್ ಗಾತ್ರದ ಬಂಡೆಗಲ್ಲುಗಳ ಅಕ್ರಮ ಸಾಗಾಟದಿಂದ ರಸ್ತೆಗಳು ಹಾಳಾಗಿರುವ ಬಗ್ಗೆ ಸಾರ್ವಜನಿಕರು ದೂರನ್ನು ಸಲ್ಲಿಸಿದರೂ ಕ್ರಮ ವಹಿಸದೇ ಇರಲು ಕಾರಣವೇನು; ಈ ಬಗ್ಗೆ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ದಾಖಲಿಸಿದ ಪ್ರಕರಣಗಳ ಸಂಖ್ಯೆ ಎಷ್ಟು?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ(ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ಬೆಳಗಾವಿ, ಕಾ.ಸೂ. 011–ಪ್ರತಿಗಳು–750